ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 109 ಸಂಚಿಕೆ- 109 | PAGE-8 ಪುಟ-8 | ಶುಕ್ರವಾರ 06.06.2025 | RS.2/- ಬೆಲೆ 2/-

# ಕಾಲ್ತುಳಿತ: ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.5: ಮೊದಲ ಬಾರಿ ಐಪಿಎಲ್ ಟ್ರೋಫಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ (ಆರ್‌ಸಿಬಿ)ದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಸಂಭವಿಸಿ 11 ಜನ ಮೃತಪಟ್ಟಿದ್ದು, ಘಟನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಗುರುವಾರ ನೋಟಿಸ್ ಜಾರಿ ಮಾಡಿದೆ.

ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ಸ್ವಯಂಪ್ರೇರಿತವಾಗಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐಎಲ್) ದಾಖಲಿಸಿಕೊಂಡಿದ್ದು, ಇಂದು ಮಧ್ಯಾಹ್ನ ಅದರ ವಿಚಾರಣೆ ನಡೆಯಿತು.

ವಿಚಾರಣೆ ವೇಳೆ ಇಂತಹ ಘಟನೆ ತಡೆಗೆ ಎಸ್‌ಒಪಿ ಇರಬೇಕಲ್ಲವೇ. ವೈದ್ಯಕೀಯ ಸಿಬ್ಬಂದಿ, ಅಂಬುಲೆನ್ಸ್ ವ್ಯವಸ್ಥೆ ಇರಬೇಕಲ್ಲವೇ? ಕಾಲ್ತುಳಿತವಾದಾಗ ಏನು ಮಾಡಬೇಕೆಂಬ ಬಗ್ಗೆ ಸಿದ್ಧತೆ ಇರಬೇಕಲ್ಲವೇ? ಗಾಯಗೊಂಡವರನ್ನು ತಕ್ಷಣ ಆಸ್ಪತ್ರೆಗೆ ಸೇರಿಸಬೇಕಲ್ಲವೇ? ಇಂತಹ ಮಾರ್ಗಸೂಚಿ ಏನಾದರೂ ಪಾಲಿಸಿದ್ದೀರಾ? ಎಂದು ರಾಜ್ಯ ಸರ್ಕಾರಕ್ಕೆ ಹಂಗಾಮಿ ಸಿಜೆ ವಿ.ಕಾಮೇಶ್ವರ ರಾವ್ ಅವರು ಪ್ರಶ್ನಿದರು. ರಾಜ್ಯ ಸರ್ಕಾರದ ಪರವಾಗಿ ವಿಚಾರಣೆಗೆ ಹಾಜರಾಗಿದ್ದ ಎಜಿ ಶಶಿಕಿರಣ್ ಶೆಟ್ಟಿ ಅವರು, ಹೈಕೋರ್ಟ್ ನೀಡುವ ಸಲಹೆಗಳನ್ನು ಪಾಲಿಸಲು ಸರ್ಕಾರ ಬದ್ಧವಾಗಿದೆ. ನಾವು ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಪ್ರತಿರೋಧಿಸುವುದಿಲ್ಲ ಎಂದು ಹೇಳಿದರು. ಜೂ. 3ರಂದು ಆರ್‌ಸಿಬಿ ಐಪಿಎಲ್ ಟ್ರೋಫಿ ಗೆದ್ದಿತು. ಅದರ ವಿಜಯೋತ್ಸವ ಭದ್ರತೆ-ಗಾಗಿ ಬೆಂಗಳೂರು ಪೊಲೀಸರು ಸಿದ್ಧತೆ ನಡೆಸಿದ್ದರು. ಬಂದೋಬಸ್ತ್‌ಗಾಗಿ 1,643 ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿತ್ತು. ವಾಟರ್ ಟ್ಯಾಂಕರ್, ಕೆಎಸ್‌ಆರ್‌ಪಿ ತುಕಡಿ ಸೇರಿದಂತೆ ಹಲವು ವ್ಯವಸ್ಥೆ ಮಾಡಲಾಗಿತ್ತು. ನಿನ್ನೆ 1,600 ಪೊಲೀಸ್ ಸಿಬ್ಬಂದಿ ನೇಮಿಸಲಾಗಿದೆ. ಕಾಲ್ತುಳಿತ ಸಂಭವಿಸಿ 56 ಜನ ಗಾಯಗೊಂಡಿದ್ದಾರೆ. ಐವರು ಮಹಿಳೆಯರು ಹಾಗೂ 6 ಪುರುಷರು ಮೃತಪಟ್ಟಿದ್ದಾರೆ. ಕೋಲಾರ, ಉತ್ತರ ಕನ್ನಡ, ತುಮಕೂರು, ಯಾದಗಿರಿ, ಮಂಡ್ಯದಿಂದಲೂ ಬೆಂಗಳೂರಿಗೆ ಜನ ಬಂದಿದ್ದರು. ಒಟ್ಟು ನಿನ್ನೆ ಬೆಂಗಳೂರಿಗೆ 2.5 ಲಕ್ಷ ಜನ ಬಂದಿದ್ದರು ಎಂದು ಕೋರ್ಟ್‌ಗೆ ತಿಳಿಸಿದರು. ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ 34,600 ಜನರಿಗಷ್ಟೇ ವ್ಯವಸ್ಥೆ ಇದೆ. 33 ಸಾವಿರ ಜನರಿಗಷ್ಟೇ ಟಿಕೆಟ್ ನೀಡುತ್ತಾರೆ. ಆದರೆ ನಿನ್ನೆ ಎರಡೂವರೆ ಲಕ್ಷ ಜನರು ಬಂದಿದ್ದರು ಎಂದು ಎಜಿ ಹೇಳಿದರು. ಇಂತಹ ದೊಡ್ಡ ಕಾರ್ಯಕ್ರಮ ನಡೆದಾಗ ಪೂರ್ವ ಸಿದ್ಧತೆ ಏನಿತ್ತು ಎಂದು ಹೈಕೋರ್ಟ್ ಪ್ರಶ್ನಿಸಿತು. ಇದಕ್ಕೆ ಉತ್ತರಿಸಿದ ಎಜಿ, ರಾಯಲ್ ಚಾಲೆಂಜರ್ಸ್ ಟಿಕೆಟ್ ಹಂಚಿಕೆ ಮಾಡುತ್ತದೆ. ಸ್ಟೇಡಿಯಂನ ಎಲ್ಲಾ ವ್ಯವಸ್ಥೆ ಅವರೇ ಮಾಡುತ್ತಾರೆ. ಬೆಂಗಳೂರಿನೆಲ್ಲೆಡೆ ಬೆಳಗಿನ ಜಾವ 4 ಗಂಟೆಯಿಂದಲೇ ಜನ ಬರುತ್ತಿದ್ದರು. 3 ಗಂಟೆಯೊಳಗೆ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಜನದಟ್ಟಣೆಯಾಗಿತ್ತು. ರಾಜ್ಯವಲ್ಲದೇ ಅನ್ಯ ರಾಜ್ಯದಿಂದಲೂ ಜನ ಬಂದಿದ್ದರು. ಕೊಯಮತ್ತೂರಿನ ಒಬ್ಬ ವ್ಯಕ್ತಿ ಮೃತಪಟ್ಟಿದ್ದಾನೆ ಎಂದು ಮಾಹಿತಿ ನೀಡಿದರು.

ಘಟನೆ ಬಗ್ಗೆ ವರದಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ನೀಡಿ, ವಿಚಾರಣೆಯನ್ನು ಜೂನ್ 10ಕ್ಕೆ ಮುಂದೂಡಲಾಯಿತು.

# ಬಾವಿಯಲ್ಲಿ ಕಾಲು ಜಾರಿ ಬಿದ್ದು ಇಬ್ಬರು ಮಕ್ಕಳ ಸಾವು



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕುರಿ ಕಾಯಲು ಹೋಗಿದ್ದ ಇಬ್ಬರು ಮಕ್ಕಳು ಬಾವಿಯಲ್ಲಿ ಕಾಲು ಜಾರಿ ಬಿದ್ದು ಮೃತಪಟ್ಟರು ಘಟನೆ ಚಿತ್ತಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ನೂತನ ಮಿನಿ ವಿಧಾನಸೌಧದ ಪಕ್ಕದಲ್ಲಿ ಜರುಗಿದೆ.

ಕುಶಾಲ್ ಚನ್ನಪ್ಪ(8), ರಾಜು ಚನ್ನಪ್ಪ (14) ಮೃತಪಟ್ಟ ದುರ್ದೈವಿಗಳು. ಒಂಟಿ ಕಮಾನ್'ಯಿಂದ ಕುರಿ ಕಾಯಲು ಮಿನಿ ವಿಧಾನಸೌದದ ಹತ್ತಿರ ಬಂದಾಗ ಬಾವಿಯಲ್ಲಿ ಕಾಲು ಜಾರಿ ಬಿದ್ದು ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಸ್ಥಳದಲ್ಲಿ ಕಾರ್ಯಾಚರಣೆ ನಡೆಸಿ ಶವಗಳನ್ನು ಹೊರಗಡೆ ತೆಗೆದಿದ್ದಾರೆ.

ತಹಶೀಲ್ದಾರ್ ನಾಗಯ್ಯ ಹಿರೇಮಠ, ಪಿಎಸ್'ಐ ಶ್ರೀಶೈಲ್ ಅಂಬಾಟಿ, ವಿಜಯ ಕುಮಾರ, ಸವಿಕುಮಾರ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು, ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಕುರಿತು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ವ್ಯಕ್ತಿ ಕೊಚ್ಚಿ ಕೊಲೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು.ಜೂ.5: ತಾಲೂಕಿನ ಯರಗುಂಟಿ ಗ್ರಾಮದ ಬಸನಗೌಡ ತಂದೆ ಹನುಮನ ಗೌಡ ( 42) ಎಂಬ ವ್ಯಕ್ತಿಯನ್ನು, ಬುಧುವಾರ ರಾತ್ರಿ ಸಮಯದಲ್ಲಿ ಹಿರೇ ಉಪ್ಪೇರಿ ಸೀಮಾದ ಜಮೀನೊಂದರಲ್ಲಿ ದುಷ್ಕರ್ಮಿಗಳು ಕೊಚ್ಚಿ ಕೊಲೆಗೈದು ,ಆತನ ದ್ವಿಚಕ್ರವಾಹನವನ್ನು ಕಾಲುವೆಗೆ ಬಿಸಾಕಿದ್ದಾರೆ ಎನ್ನಲಾಗಿದೆ.

ಕೊಲೆ ನಡೆದ ಸ್ಥಳಕ್ಕೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪುಟ್ಟ ಮಾದಯ್ಯ, ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್, ಪಿಐ ಪುಂಡಲೀಕ ಪಟ್ಟಾತರ್ ಹಾಗೂ ಶ್ವಾನದಳದ ತಂಡದೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತ ಬಸನಗೌಡ ಎಂಬ ವ್ಯಕ್ತಿ ಬುಧುವಾರ ಸಂಜೆ 7:00 ಗಂಟೆಗೆ ತನ್ನ ಟಿ.ವಿ.ಎಸ್ ಎಕ್ಸೆಲ್ ಸೈಕಲ್ ಮೋಟಾರ್ ತೆಗೆದುಕೊಂಡು ಹೋಗಿದ್ದು ತಡರಾತ್ರಿಯಾದರೂ ಮನೆಗೆ ಬಾರದ ಕಾರಣ ಕುಟುಂಬಸ್ಥರು ಫೋನ್ ಮಾಡಿದ್ದು ಅದು ಸ್ವಿಚ್ ಆಫ್ ಆಗಿದ್ದರಿಂದ ಗಾಬರಿಗೊಂಡ ಕುಟುಂಬಸ್ಥರು ಬೆಳಗಿನ ಜಾವು ಹುಡುಕಾಡಿದಾಗ ಅನತಿ ದೂರದಲ್ಲಿರುವ ಪಾಳು ಬಿದ್ದ ಜಮೀನೊಂದರಲ್ಲಿ ಶವವಾಗಿ ಪತ್ತೆಯಾಗಿದ್ದು ಮೃತನ ಮೋಟಾರ್ ಸೈಕಲ್ ಕಾಲುವೆಯಲ್ಲಿ ಬಿಸಾಕಲಾಗಿದೆ.

ಮೃತಶವ ಬೋರಲಾಗಿ ಬಿದ್ದು

(2ನೇ ಪುಟ ನೋಡಿ)

# ಕಲ್ಯಾಣದಲ್ಲಿ ಶತ ಕೋಟಿ ರೂ.ಗಳ ಅರಣ್ಯ ಆವಿಷ್ಕಾರ ಯೋಜನೆ ಸಂಕಲ್ಪ: ಡಾ. ಅಜಯಸಿಂಗ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.5: ಕಲ್ಯಾಣ ಕರ್ನಾಟಕದಲ್ಲಿ ಹಸಿರು ವನಸಿರಿ ನಳನಲಿಸುವಂತೆ ಮಾಡುವಲ್ಲಿ ಇದೇ ಮೊದಲ ಬಾರಿಗೆ ಹೊಸ ಹೆಜ್ಜೆ ಇಡಲು ಮುಂದಾಗಿರುವ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವಿಶ್ವ ಪರಿಸರ ದಿನದಂದೇ ಹಸಿರು ಕಲ್ಯಾಣಕ್ಕೆ ಸಂಕಲ್ಪ ಮಾಡಿ ಅರಣ್ಯ ಇಲಾಖೆ ಜೊತೆ ಸೇರಿಕೊಂಡು 100 ಕೋಟಿ ರೂ.ಗಳ ಯೋಜನೆ ರೂಪಿಸಲು ಮುಂದಾಗಿದೆ ಎಂದು ಮಂಡಳಿಯ ಅಧ್ಯಕ್ಷ ಹಾಗೂ ಕ್ಷೇತ್ರದ ಶಾಸಕ ಡಾ. ಅಜಯಸಿಂಗ್ ಧರ್ಮಸಿಂಗ್ ಅವರು ತಿಳಿಸಿದ್ದಾರೆ.

ಈಗಾಗಲೇ ಅಕ್ಷರ, ಆರೋಗ್ಯ, ಉದ್ಯೋಗ, ಕೌಶಲ್ಯ ರಂಗದಲ್ಲಿ ವಿನೂತನ ಯೋಜನೆ ರೂಪಿಸುತ್ತ ಜನಪರ ಧೋರಣೆಯೊಂದಿಗೆ ಹೊಸಹೆಜ್ಜೆ ಇಡುತ್ತಿರುವ ಮಂಡಳಿ ಇದೀಗ ತನ್ನ ಇತಿಹಾಸದಲ್ಲೇ ಮೊದಲ ಬಾರಿಗೆ ಬರ ಪೀಡಿತ ಕಲ್ಯಣ ನಾಡಲ್ಲಿ ಹಸಿರು ವನಸಿರಿ ನಳನಳಿಸುವಂತೆ ಮಾಡಲು ಅರಣ್ಯ ಅವಿಷ್ಕಾರ ಯೋಜನೆ ರೂಪಿಸಿದೆ. ಇದಕ್ಕಾಗಿ ಮಂಡಳಿ 50 ಕೋಟಿ ರೂ.ಗಳು, ಅರಣ್ಯ ಇಲಾಖೆ 50 ಕೋಟಿ ರೂ.ಗಳು ಸೇರಿದಂತೆ ಒಟ್ಟು 100 ಕೋಟಿ ರೂ.ಗಳಲ್ಲಿ ಸದರಿ ಯೋಜನೆ ಅನುಷ್ಠಾನಕ್ಕೆ ಬರಲಿದೆ ಎಂದು ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಅರಣ್ಯ ನೀತಿಯಂತೆ ಒಟ್ಟು ಭೌಗೋಳಿಕ ಪ್ರದೇಶದ ಒಂದು ಮೂರಾಂಶರಷ್ಟು ಅರಣ್ಯ ಇರಬೇಕು. ಆದರೆ ಕಲ್ಯಣ ಕರ್ನಾಟಕದಲ್ಲಿ ಈ ಪ್ರಮಾಣ ಅಷ್ಟಿಲ್ಲ. ಅಧ್ಯಯನದ ಪ್ರಕಾರ ಶೇಕಡಾ 16 ರಷ್ಟು ಕೊರತೆ ನಮ್ಮಲ್ಲಿದೆ. ಕಲ್ಯಾಣ ನಾಡಲ್ಲಿ ಕೇವಲ ಶೇಕಡಾ 5ರಷ್ಟು ಅರಣ್ಯ ಪ್ರದೇಶವಿದ್ದು ಇದು ರಾಜ್ಯ ಹಾಗೂ ರಾಷ್ಟ್ರೀಯ ಅರಣ್ಯ ನೀತಿಗೂ ಕಮ್ಮಿಯಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಅಂಕಿಸಂಖ್ಯೆಗಳನ್ನು ನೋಡೋದಾದಲ್ಲಿ, ಕಲ್ಯಾಣದಲ್ಲಿ ಒಟ್ಟು 4, 055 ಚದರ ಚಕಿಮೀನಷ್ಟು ಅರಣ್ಯ ಪ್ರದೇಶವಿದೆ, ಜಿಲ್ಲಾವಾರು ಗಮನಿಸಿದಾಗ, ಬಳ್ಳಾರಿ- ಶೇಕಡಾ 8.4, ಬೀದರ್- 460 ಚಕಿಮೀ, ಶೇಕಡಾ 52.4, ಯದಗಿರಿ- 469 ಚಕೀಮೀ, ಶೇಕಡಾ 6. 9, ರಾಯೂರು- 370 ಚಕಿಮೀ, ಶೇಕಡಾ 44, ಕಲಬುರ್ಗಿ- 339. 87 ಚಕಿಮೀ, ಶೇಕಡಾ 3.1ರಷ್ಟು ಅರಣ್ಯಪ್ರದೇಶವಿದೆ. ಬಳ್ಳಾರಿ, ಬೀದರ್ ಪರವಾಗಿಲ್ಲ ಎನ್ನಬಹುದಾದರೂ ಒಟ್ಟಾರೆ ಕಲ್ಯಾಣದ ಜಿಲ್ಲೆಗಳ ಅರಣ್ಯ ಪರಿಸರ ನೋಟ, ಪರಿಸ್ಥಿತಿ ಆತಂಕಕಾ-ರಿಯಾಗಿದೆ ಎಂದು ಅವರು ತೀವ್ರ ಬೇಸರ ಹೊರಹಾಕಿದ್ದಾರೆ.

ಇದರಿಂದಾಗಿಯೇ ಮಳೆ ಹೇರಾಫೇರಿ, ಬಿಸಿಲು ಹೆಚ್ಚಳ, ಇವೆಲ್ಲವೂ ಈ ನೆಲವನ್ನು ಕಾಡುತ್ತಿವೆ. ರೈತರು ಮಳೆ ಸಕಾಲಿಕ ಆಗದೆ ತೊಂದರೆಯಲ್ಲಿದ್ದಾರೆ. ಅಂತರ್ಜಲ ಮಟ್ಟದಲ್ಲೂ ಭಾರಿ ಕುಸಿತವಾಗುತ್ತ ಸಾಗಿದೆ. ಇದೆಲ್ಲದಕ್ಕೂ ಪರಿಹಾರವೆಂದರೆ ಹಸಿರೀಕರಣವೆಂಬುದು ಮನಗಂಡೇ ಮಂಡಳಿ ಇದೇ ಮೊದಲ ಬಾರಿಗೆ ಅರಣ್ಯೀಕರಣಕ್ಕೆ ಒತ್ತು ನೀಡುವ ಅರಣ್ಯ ಅವಿಷ್ಕಾರ ಯೋಜನೆ ಕೈಗೆತ್ತಿಕೊಳ್ಳಲು ಸಿದ್ಧವಾಗಿದೆ ಎಂದು ಅವರು ತಿಳಿಸಿದ್ದಾರೆ.

ಈಗಾಗಲೇ ಮಂಡಳಿ ಸಭೆಯಲ್ಲಿ

(2ನೇ ಪುಟ ನೋಡಿ)

# ಮಣಿಕಂಠ ರಾಠೋಡ್ ವಿರುದ್ಧ ಮತ್ತೊಂದು ಎಫ್‌ಐಆರ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.5: ಬಿಜೆಪಿ ಮುಖಂಡ ಮಣಿಕಂಠ ರಾಠೋಡ್ ಅವರು ಸಾಮಾಜಿಕ ಜಾಲತಾಣಗಳಲ್ಲಿ 7 ವಿವಾದಾತ್ಮಕ ಹೇಳಿಕೆಗಳನ್ನು ಮುಂದುವರೆಸಿದ್ದು, ಮುಸ್ಲಿಂರ ನರಮೇಧಕ್ಕೆ ಸಂಬಂಧಿಸಿದಂತೆ ನೀಡಿದ - ಹೇಳಿಕೆಯನ್ನು ಖಂಡಿಸಿ ವ್ಯಕ್ತಿಯೊಬ್ಬರು ದೂರು ಸಲ್ಲಿಸಿದ್ದು, ಈ ಕುರಿತು ಪೋಲಿಸರು ಶಹಾಬಾದ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಲಬುರ್ಗಿಯಲ್ಲಿ ಪೋಲೀಸರನ್ನು 15-20 ನಿಮಿಷ ತಡೆ ಹಿಡಿದರೆ, ಮುಸ್ಲಿಮರನ್ನು ನಮ್ಮ ಗೋರಮಾಠಿ ಸಮುದಾಯದಿಂದ ಸಾಮೂಹಿಕವಾಗಿ ಹತ್ಯೆ ಮಾಡುವುದಾಗಿ ಬೆದರಿಕೆ ಹಾಕಿದ ಆರೋಪವನ್ನು ಬಿಜೆಪಿ ಮುಖಂಡ ಮಣಿಕಂಡ್ ರಾಠೋಡ್ ಅವರು ಎದುರಿಸುತ್ತಿದ್ದಾರೆ.

ಮಣಿಕಂಠ ರಾಠೋಡ್ ತನ್ನ ಫೇಸ್ ಬುಕ್ 5 ಖಾತೆಯಲ್ಲಿ ವಿಡಿಯೋ ಹಂಚಿಕೊಂಡು, ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. * ಮುಸ್ಲಿಂ ಸಮುದಾಯವನ್ನು ಬೇರು ಸಮೇತ ಆ ಕಿತ್ತೊಗೆಯಬೇಕು. 8 ದಿವಸಗಳ ಒಳಗಾಗಿ 'ಲವ್ - ಜಿಹಾದ್' ಆರೋಪಿಗಳನ್ನು ಸಾಯಿಸಬೇಕು ಎಂದು ಮಾತನಾಡಿರುವ ವಿಡಿಯೋ ವೈರಲ್ ಆಗಿರುವ ಆ ಬೆನ್ನಲ್ಲೇ ಶನಿವಾರ ನಗರದ ಸೆನ್ ಪೊಲೀಸ್ ದ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಮೊದಲ ಎಫ್‌ಐಆರ್ ನಂತರ ಈಗ ಶಹಾಬಾದ್ ಪೊಲೀಸ್ ಠಾಣೆಯಯಲ್ಲಿ ಭಾನುವಾರ ಮತ್ತೊಂದು ಪ್ರಕರಣ ದಾಖಲಾಗಿದೆ. ಶಹಾಬಾದ್ ನಿವಾಸಿ ಮುಹಮ್ಮದ್ ಮಸ್ತಾನ್ ಅವರು ದೂರು ನೀಡಿದ ಮೇರೆಗೆ. ಕೋಮು ದ ಸೌಹಾರ್ದತೆ ಕೆಡಿಸಲು ಪ್ರಯತ್ನಿಸಿದ್ದು, ಕೋಮು ಗಲಭೆಗೆ ಪ್ರಚೋದನೆ ನೀಡಿರುವ ಆರೋಪದಲ್ಲಿ ಮಣಿಕಂಠ ರಾಠೋಡ್ ಅವರ ವಿರುದ್ಧ ಶಹಾಬಾದ್ 2 ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಕೋಮು ಗಲಭೆಗೆ ಪ್ರಚೋದನೆ ನೀಡಿರುವ ಆರೋಪದಲ್ಲಿ ಮಣಿಕಂಡ್ ರಾಠೋಡ್ ವಿರುದ್ಧ ಇದು ಎರಡನೇ ಪ್ರಕರಣ ದಾಖಲಾಗಿದ್ದು, ಈವರೆಗೆ ಪೊಲೀಸರು ಆತನನ್ನು ಬಂಧಿಸದಿರುವುದನ್ನು ಖಂಡಿಸಿ ಮುಸ್ಲಿಂ ಸಮುದಾಯದ ಮತ್ತು ಪ್ರಗತಿಪರ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೆಲ ದಿನಗಳ ಹಿಂದಷ್ಟೇ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ನಿಂದನೆ ಮಾಡಿರುವ ಆರೋಪದ ಮೇರೆಗೆ ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಇಷ್ಟೆಲ್ಲ ಆದಾಗ್ಯೂ, ನನ್ನ ವಿರುದ್ಧ ಎಷ್ಟೇ ಪ್ರಕರಣಗಳು ದಾಖಲಾದರೂ ನಾನು ಹೆದರುವುದಿಲ್ಲ. ನಾನು ನನ್ನ ಸಮಾಜದವರ ಪರವಾಗಿ ಹಾಗೂ ನನ್ನ ಜನರ ಪರವಾಗಿ ಹೇಳಿಕೆಗಳನ್ನು ಮುಂದುವರೆಸುವುದಾಗಿ ಮಣಿಕಂಠ ರಾಠೋಡ್ ಅವರು ಹೊಸ ವಿಡಿಯೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ.

# ಬಿಸಿಲು ನಾಡಿನಲ್ಲಿ ಹಸಿರು ಹೊದಿಕೆಯ ಗುರಿ ಜಿಲ್ಲೆಯಾದ್ಯಂತ 4.43 ಲಕ್ಷ ಸಸಿ ನೆಡುವ ಯೋಜನೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.5: ಬಿಸಿಲು ನಾಡಿನಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಅರಣ್ಯ ಇಲಾಖೆ ಮುಂದಾಗಿದ್ದು, ಪ್ರಸಕ್ತ 2025-26ನೇ ಸಾಲಿನಲ್ಲಿ ಸುಮಾರು 1,060.50 ಹೆಕ್ಟೇರ್ ಪ್ರದೇಶದಲ್ಲಿ ಸಸಿ ನೆಡಲು ಗುರಿ ಹೊಂದಿದೆ.

ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಜಿಲ್ಲೆಗಳು ಶೇ.10ಕ್ಕಿಂತ ಕಡಿಮೆ ಅರಣ್ಯ ಪ್ರದೇಶಗಳನ್ನು ಹೊಂದಿದೆ. ಇನ್ನು ಶೇ.5 ಅರಣ್ಯ ಪ್ರದೇಶ ಹೊಂದಿರುವ ಕಲಬುರಗಿಯಲ್ಲಿ ಹಸರೀಕರಣ ಮಾಡಲು ಅರಣ್ಯ ಇಲಾಖೆ ಪಣ ತೊಟ್ಟಿದೆ.

ಅರಣ್ಯ ಇಲಾಖೆಯಿಂದ ಪ್ರಸಕ್ತ 2025-26ನೇ ಸಾಲಿನಲ್ಲಿ ಪ್ರಾದೇಶಿಕ ಅರಣ್ಯ ಮತ್ತು ಸಾಮಾಜಿಕ ಅರಣ್ಯ ವಿಭಾಗದಿಂದ 567.50 ಹೆಕ್ಟೇರ್ ನಲ್ಲಿ ಬ್ಲಾಕ್ ನೆಡುತೋಪು, 350 ಕಿ.ಮೀ ನಲ್ಲಿ ರಸ್ತೆ ಬದಿ

(2ನೇ ಪುಟ ನೋಡಿ)

# ಪರಿಸರ ಪ್ರಜ್ಞೆ ಹಾಗೂ ಕಾನೂನು ಪ್ರಜ್ಞೆ ಜೀವ ಸಂಕುಲಕ್ಕೆ ವರದಾನ:ನ್ಯಾ.ಪ್ರಕಾಶ್ ಬನಸೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.5 : ತಾಪಮಾನ ಏರಿಕೆಯ ಸಂದರ್ಭದಲ್ಲಿ ಎಲ್ಲರೂ ಪರಿಸರವನ್ನು ರಕ್ಷಿಸುವ ಪ್ರಾಮಾಣಿಕ ಕಾಳಜಿ ಹೊಂದಬೇಕಾಗಿದೆ. ಅದರೊಂದಿಗೆ ಸುಂದರ ಸಮಾಜದ ನಿರ್ಮಾಣದಲ್ಲಿ ಈ ನೆಲದ ಕಾನೂನಿನ ಅರಿವು ಹಾಗೂ ಜಾಗೃತಿ ಎಲ್ಲರಿಗೂ ಅವಶ್ಯಕವಾಗಿದೆ ಎಂದು ಬೀದರನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ್ ಬನಸೋಡೆ ತಿಳಿಸಿದರು.

ಅವರು ಬೀದರ ವಿಶ್ವವಿದ್ಯಾಲಯದಲ್ಲಿಂದು ಜಿಲ್ಲಾ ಕಾನೂನು ಸೇವೆಗಳ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಜಿಲ್ಲೆಯಾದ್ಯಂತ 4.43 ಲಕ್ಷ ಸಸಿ ನೆಡುವ ಯೋಜನೆ

ನೆಡುತೋಪು ಸೇರಿದಂತೆ ಒಟ್ಟಾರೆ 1,060.50 ಹೆಕ್ಟೇರ್ ಪ್ರದೇಶದಲ್ಲಿ 4.43 ಲಕ್ಷ ಸಸಿ ನೆಡೆಯುವ ಯೋಜನೆ ಹಾಕಿಕೊಳ್ಳಲಾಗಿದೆ. ಇನ್ನು ಸಾರ್ವಜನಿಕರು, ರೈತರು, ಸಂಘ-ಸಂಸ್ಥೆಗಳಿಗೆ 1.64 ಲಕ್ಷ ಸಸಿ ವಿತರಿಸಲಾಗುತ್ತಿದೆ.

ಅಮೃತ್ ಮಿತ್ರ ಅಭಿಯಾನಕ್ಕೆ ಚಾಲನೆ:ವಿಶ್ವ ಪರಿಸರ ದಿನಾಚರಣೆ ಹಿನ್ನೆಲೆಯಲ್ಲಿ ಗುರುವಾರ ಜಿಲ್ಲಾಡಳಿತ, ಮಹಾನಗರ ಪಾಲಿಕೆ ಹಾಗೂ ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ನಗರದ ಶಹಾಬಜಾರ್ ಪ್ರದೇಶದ ಗೋಕುಲ ನಗರ ಜಿ.ಡಿ.ಎ. ಬಡಾವಣೆಯ ಸಾರ್ವಜನಿಕ ಉದ್ಯಾನವನದಲ್ಲಿ ಸಸಿ ನೆಡೆಯುವ ಮೂಲಕ "ಅಮೃತ್ ಮಿತ್ರ" ಅಭಿಯಾನಕ್ಕೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಚಾಲನೆ ನೀಡಿದರು.

ವುಮೆನ್ ಫಾರ್ ಟ್ರೀಸ್ ಘೋಷವಾಕ್ಯದ ಈ ಕಾರ್ಯಕ್ರಮದಲ್ಲಿ ಕಲಬುರಗಿ ಮಹಾನಗರದ ಸಾರ್ವಜನಿಕ ಉದ್ಯಾನವನ, ಮೈದಾನಗಳಲ್ಲಿ ಸುಮಾರು 2,000 ಸಸಿ ನೆಡಲಾಗುತ್ತಿದೆ. ಸಸಿಗಳನ್ನು ನಲ್ಮ್ ಯೋಜನೆಯಡಿ ನೊಂದಾಯಿತ ಮಹಿಳಾ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ನೀಡಲಾಗುತ್ತಿದ್ದು, ಅವರು ಆಗಸ್ಟ್ 31ರೊಳಗೆ ಸಸಿ ನೆಟ್ಟು ವರದಿ ನೀಡಲಿದ್ದಾರೆ. ಮುಂದೆ 2 ವರ್ಷದ ವರೆಗೆ ಈ ಸಸಿಗಳ ನಿರ್ವಹಣೆ ಜವಾಬ್ದಾರಿ ಸಹ ಮಹಿಳಾ ಸದಸ್ಯರಿಗೆ ನೀಡಿದ್ದು, ನಿರ್ವಹಣಾ ವೆಚ್ಚ ಕೇಂದ್ರ ಸರ್ಕಾರದಿಂದ ಡಿ.ಬಿ.ಟಿ ಮೂಲಕ ಪಾವತಿಸಲಾಗುತ್ತದೆ.

ಕಾರ್ಯಕ್ರಮದಲ್ಲಿ ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮಿತ್ ಪಾಟೀಲ, ಪಾಲಿಕೆ ಉಪ ಆಯುಕ್ತ ಆರ್.ಪಿ. ಜಾಧವ, ಉಪ ಆಯುಕ್ತ (ಆಡಳಿತ) ರಾಜೇಂದ್ರ ಭಾಲ್ಕಿ, ಎ.ಇ.ಇ (ಪರಿಸರ) ಅಭಯಕುಮಾರ, ವಲಯ ಆಯುಕ್ತ ಪ್ರದೀಪ್ ಸೇರಿದಂತೆ ಪಾಲಿಕೆ, ಅರಣ್ಯ ಸಿಬ್ಬಂದಿಗಳು ಇದ್ದರು.

## ಸಂಕುಲಕ್ಕೆ ವರದಾನ:ನ್ಯಾ.ಪ್ರಕಾಶ್ ಬನಸೋಡೆ

ಪ್ರಾಧಿಕಾರ, ಬೀದರ, ಜಿಲ್ಲಾ ವಕೀಲರ ಸಂಘ, ಬೀದರ ಜಿಲ್ಲಾ ಅರಣ್ಯ ಇಲಾಖೆ, ಬೀದರ ಹಾಗೂ ಬೀದರ ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆ ಕೋಶ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಹಾಗೂ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ಪರಿಸರ ಮಾಲಿನ್ಯ ಮಿತಿಮೀರಿದೆ. ಬೇಜವಾಬ್ದಾರಿಯ ವಿಲೇವಾರಿಯಿಂದಾಗಿ ಪರಿಸರ ಹಾಳಾಗುತ್ತಿದೆ. ಆದ್ದರಿಂದ ಎಲ್ಲರೂ ಪರಿಸರವನ್ನು ಉಳಿಸಬೇಕಾಗಿದೆ. ಸುಂದರ ಸಮಾಜದ ನಿರ್ಮಾಣದಲ್ಲಿ ಪ್ರತಿಯೊಬ್ಬರೂ ಈ ನೆಲದ ಕಾನೂನನ್ನು ಗೌರವಿಸಬೇಕಾದುದು ಎಲ್ಲರ ಆದ್ಯ ಕರ್ತವ್ಯವಾಗಿದೆ. ಪರವಾನಗಿಯಿಲ್ಲದ ವಾಹನ ಚಾಲನೆಯಿಂದ ಅನೇಕ ಅಪಘಾತಗಳು ಸಂಭವಿಸುತ್ತಿವೆ. ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ತಡೆಗಾಗಿ ಪೊ?ಕ್ಸೆ ಕಾನೂನಿದೆ. ಹೀಗಾಗಿ ಪ್ರತಿಯೊಬ್ಬರು ವಾಹನ ಚಾಲನೆಯ ಪರವಾನಗಿ, ವಾಹನದ ಮತ್ತು ವ್ಯಕ್ತಿಯ ಜೀವವಿಮೆಯನ್ನು ಮಾಡಿಸಬೇಕಾದ ಅಗತ್ಯವಿದೆ. ಪರಿಸರದ ರಕ್ಷಣೆಯೊಂದಿಗೆ ಕಾನೂನಿನ ರಕ್ಷಣೆಯೂ ಸಹ ಗೌರವದಿಂದ ಕಂಡಾಗ ಸುಂದರ, ಸ್ವಸ್ಥ, ಸದೃಢ ದೇಶ ಕಟ್ಟಲು ಸಾಧ್ಯವೆಂದರು.

ದೇಶದ ಭವಿಷ್ಯ ಯುವಕರ ಮೇಲಿದೆ. ಯುವಕರು ಉತ್ತಮ ಶಿಕ್ಷಣ ಪಡೆದು, ಮತ್ತು ಸೇವೆ ನೀಡುವುದು ಮುಖ್ಯವಾಗಿದೆ. ವಿದ್ಯಾರ್ಥಿಗಳು ಕಠಿಣ ಪರಿಶ್ರಮವಹಿಸಿ ಅಧ್ಯಯನ ಮಾಡಿದಾಗ ಯಶಸ್ಸು ಪಡೆಯಲು ಸಾಧ್ಯ. ಈ ಭಾಗದಲ್ಲಿ 371(ಜೆ) ಅಡಿಯಲ್ಲಿ ಅವಕಾಶ ಪಡೆಯಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಶಿವಶರಣಪ್ಪ ಪಾಟೀಲ ಮಾತನಾಡಿ, ಪ್ಲಾಸ್ಟಿಕ್ ಬಳಕೆ ಮಿತಿ ಮೀರಿ ಪರಿಸರ, ಭೂಮಿ ವಿಷಮಯವಾಗುತ್ತಿದೆ. ಜಾಗತಿಕ ತಾಪಮಾನ, ಪರಿಸರ ಹಾಳಾಗುತ್ತಿದೆ. ಜನ್ಮದಿನದ ಸಂದರ್ಭದಲ್ಲಿ ಸಸಿ ನೆಡುವುದು, ಹೆಲ್ಮೆಟ್ ನೀಡುವಂತಹ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾದ ಅನಿವಾರ್ಯತೆಯಿದೆ ಎಂದರು.

ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪೊ??.ಬಿ.ಎಸ್.ಬಿರಾದಾರ ಮಾತನಾಡಿ, ಆಧುನಿಕದ ಯುಗದಲ್ಲಿ ನಮ್ಮ ಆಹಾರ, ವಿಹಾರ, ಸಂಸ್ಕೃತಿಗಳು ಬದಲಾಗುತ್ತಿವೆ. ಮಸಾಲೆಯುಕ್ತ ಪದಾರ್ಥಗಳ ಸೇವನೆಯಿಂದ ಹಣದ ವ್ಯಯದೊಂದಿಗೆ, ಆರೋಗ್ಯವನ್ನೂ ಸಹ ಹಾಳು ಮಾಡಿಕೊಳ್ಳುತ್ತಿದ್ದೇವೆ. ಮಸಾಲೆಯುಕ್ತ ಪದಾರ್ಥಗಳು ಅಧರಕ್ಕೆ ಸಿಹಿ, ಉದರಕ್ಕೆ ಉದರಕ್ಕೆ ಕಹಿಯ ಕಹಿಯಾಗಿರುತ್ತವೆ. ಆದ್ದರಿಂದ ಆರೋಗ್ಯದ ದೃಷ್ಟಿಯಿಂದ ಸರಳ, ಸಾತ್ವಿಕ ಆಹಾರ ಸೇವನೆಯ ಅವಶ್ಯಕತೆಯಿದೆ. ಆರೋಗ್ಯಕ್ಕೆ ಹಾನಿಯಾದರೆ ದೇಶಕ್ಕೂ ಸಹ ಹಾನಿಯಾದಂತೆಯೆ, ಬೀದರ ವಿಶ್ವವಿದ್ಯಾಲಯದಲ್ಲಿ ಮುಂದಿನ ದಿನಮಾನಗಳಲ್ಲಿ ಬೀದರ ವಿಶ್ವವಿದ್ಯಾಲಯದಲ್ಲಿ ಔಷಧೀಯ ವನ ನಿರ್ಮಾಣದ ಮಾಡುವ ಉದ್ದೇಶವಿದೆ. ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆ ಹಾಗೂ ತರಬೇತಿ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಬೀದರ ವಿಶ್ವವಿದ್ಯಾಲಯದ ಕುಲಸಚಿವರು(ಆಡಳಿತ) ಸುರೇಖಾ ಕೆ.ಎ.ಎಸ್. ಪ್ರಾಸ್ತಾವಿಕ ಮಾತನಾಡಿ, ಹಸಿರೇ ಉಸಿರು, ಪರಿಸರದ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಿದೆ. ಪರಿಸರವೆಂಬ ತೊಟ್ಟಿಲಲ್ಲಿ ಮನುಷ್ಯ ಬಾಳಬೇಕಾದರೆ ಅದನ್ನು ಅತ್ಯಂತ ಕಾಳಜಿಯಿಂದ ಉಳಿಸಿಕೊಳ್ಳಬೇಕಾಗಿದೆ. ಆರೋಗ್ಯಕರ ಸಮಾಜದ ನಿರ್ಮಾಣದಲ್ಲಿ ಎಲ್ಲರೂ ಕಾನೂನನ್ನು ಗೌರವಿಸಬೇಕಾದ ಅನಿವಾರ್ಯತೆಯಿದೆ. ಹಾಗಾದಾಗ ಮಾತ್ರ ಸಮೃದ್ಧ ಸಮಾಜದ ಕನಸು ಕಾಣಲು ಸಾಧ್ಯವೆಂದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಷಣ್ಮುಖಯ್ಯಾ ಬಿ.ಸ್ವಾಮಿ, ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಸಚಿನ ಮಲ್ಕಾಪೂರೆ, ಬೀದರ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ರಮೇಶ ಕನಕಟ್ಟಾ, ಬೀದರ ಅರಣ್ಯ ಸಂರಕ್ಷಣಾಧಿಕಾರಿ ವಿಜಯಕುಮಾರ ಜಾಧವ, ಜೀವ ವೈವಿಧ್ಯ ನಿರ್ವಹಣ ಸಮಿತಿಯ ಸದಸ್ಯ ಡಾ.ಪೃಥ್ವಿರಾಜ ಸುದರ್ಶನ ಲಕ್ಕಿ, ರಘುನಾಥ ರಾಠೋಡ, ಅರಣ್ಯ ಪಾಲಕರಾದ ಸಂಗಮೇಶ, ಬೀದರ ವಿಶ್ವವಿದ್ಯಾಲಯದ ವಿಶೇಷಾಧಿಕಾರಿಗಳು ಹಾಗೂ ಎನ್.ಎಸ್.ಎಸ್.ಸಂಯೋಜನಾಧಿಕಾರಿಗಳಾದ ಡಾ.ರವೀಂದ್ರನಾಥ ವಿ.ಗಬಾಡಿಂ, ಡಾ.ರಾಮಚಂದ್ರ ಗಣಾಪೂರ, ವಾಣಿಶ್ರೀ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಯೋಜನೆ ಸಂಕಲ್ಪ: ಡಾ. ಅಜಯಸಿಂಗ್

ಈ ಬಗ್ಗೆ ಚರ್ಚಿಸಲಾಗಿದೆ. ಅರಣ್ಯ ಇಲಾಖೆಯ ಸಚಿವರು ಬೀದರ್‌ನವರೇ ಆಗಿರುವ ಈಶ್ವರ್ ಖಂಡ್ರೆಯವರೇ ಆಗಿದ್ದಾರೆ. ಅವರೊಂದಿಗೆ ಈ ಬಗ್ಗೆ ವಿವರವಾಗಿ ಚರ್ಚಿಸಲಾಗಿದೆ. ಅವರೂ ಒಪ್ಪಿದ್ದಾರೆ, ಆರೋಗ್ಯ, ಶಿಕ್ಷಣ, ಕಂದಾಯ ಇಲಾಖೆಗಳೊಂದಿಗೆ ಈಗಾಗಲೇ ಪಾಲುದಾರಿಕೆಯಲ್ಲಿ ಯೋಜನೆ ಅನುಷ್ಠಾನಕ್ಕೆ ತಂದಂತೆಯೇ ಅರಣ್ಯ ಇಲಾಖೆಯೊಂದಿಗೆ ಹಸಿರೀಕರಣಕ್ಕೂ ಮಂಡಳಿ ಒತ್ತು ನೀಡುವ ಸಂಕಲ್ಪ ಮಾಡಿದೆ ಎಂದು ಅವರು ಘೋಷಿಸಿದ್ದಾರೆ.

ಶೀಘ್ರದಲ್ಲೇ ಯೋಜನೆಯ ರೂಪರೇಷೆ, ಅನುಷ್ಠಾನದ ವಿಷಯ, ವಿಧಾನಗಳ ಬಗ್ಗೆ ಪ್ರಸ್ತಾವನೆ ಸಿದ್ಧಪಡಿಸಿ ರಾಜ್ಯಪಾಲರಿಗೆ ಸಲ್ಲಿಸಲಾಗುತ್ತಿದೆ. ಮುಂದಿನ 2 ತಿಂಗಳಲ್ಲಿ ಸದರಿ ಅರಣ್ಯೀಕರಣದ ಹೊಸ ಯೋಜನೆ ಕಲ್ಯಾಣದಲ್ಲಿ ಅನುಷ್ಠಾನಗೊಳ್ಳಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬೀದರ್‌ನಿಂದ ವಿಜಯಪುರದವರೆಗೆ ಇರುವ ಸರ್ಕಾರಿ ಜಾಗ, ಗಾವಠಾಣೆಯ ಪ್ರದೇಶಗಳಲ್ಲೆಲ್ಲಾ ಗ್ರೇಟ್ ಗ್ರೀನ್ ವಾಲ್ ಪರಿಕಲ್ಪನೆಯಂತೆ ಹಸಿರು ಗೋಡೆ ಕಟ್ಟುವ ವಿಚಾರ ಅನೇಕ ಬಾರಿ ಈ ಭಾಗದ ತಜ್ಞರು, ಪರಿಸರ ಪ್ರೇಮಿಗಳು ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಅನೇಕ ಬಾರಿ ಚರ್ಚೆಗಳಾಗಿವೆ. ಇದನ್ನೆಲ್ಲ ಮನಗಂಡು ಅರಣ್ಯ ಅವಿಷ್ಕಾರ ಯೋಜನೆಯಲ್ಲಿ ತಾವು ಗ್ರೇಟ್ ಗ್ರೀನ್ ವಾಲ್ ಯೋಜನೆಯನ್ನೂ ಅನುಷ್ಠಾನಗೊಳಿಸುವ ಬಗ್ಗೆ ಉತ್ಸುಕನಾಗಿದ್ದು ಈ ಬಗ್ಗೆಯೂ ರೂಪರೇಶೆ ಸಿದ್ಧಪಡಿಸುವ ನಿಟ್ಟಿನಲ್ಲಿ ಸಿದ್ಧತೆ ಸಾಗಿವೆ ಎಂದು ಅವರು ತಿಳಿಸಿದ್ದಾರೆ.

ಮರಗಳ ನಾಶ, ಗಾಳಿಯಲ್ಲಿ ಇಂಗಾಲದ ಅಂಶದ ಹೆಚ್ಚಳ, ಜಲಮೂಲಗಳು ಮತ್ತು ನದಿಗಳಲ್ಲಿ ಹಾನಿಕಾರಕ ರಾಸಾಯನಿಕಗಳು ಪ್ರತ್ಯಕ್ಷವಾಗುತ್ತಿರೋದು ಇವೆಲ್ಲ ಪರಿಸರ ನಾಶದ ಪ್ರತೀಕ, ಇದರಿದಂದಾಗಿ ರೈತರು, ಸಾಮಾನ್ಯ ಜನ ತೊಂದರೆಯಲ್ಲಿದ್ದಾರೆ, ಕೃಷಿಯೇ ಸಂಕಷ್ಟದಲ್ಲಿದೆ,, ಇದನ್ನೆಲ್ಲ ತಪ್ಪಿಸಲು ಅರಣ್ಯೀಕರಣವೇ ಪರಿಹಾರವೆಂದು ಅರಿತು ಹಸಿರೀಕರಣಕ್ಕೆ ಮಂಡಳಿಯಿಂದ ಯೋಜನೆ ರೂಪಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ಕಲ್ಯಾಣದಲ್ಲಿನ ಹಸಿರೀಕರಣದ ಈ ಉಪಕ್ರಮ ಮಿಷನ್ ರೀತಿಯಲ್ಲಿ ಸಾಗಬೇಕಾದರೆ ಬರೀ ರಾಜಕಾರಣಿಗಳು, ಅಧಿಕಾರಿಗಳಿಂದ ಆಗೋದಿಲ್ಲ. ಅದೇನಿದ್ದರೂ ಶಾಲೆ, ಕಾಲೇಜು ಮಕ್ಕಳು, ಯುವಕರು, ಪರಿಸರ ಪ್ರೇಮಿಗಳು ಸೇರಿದಂತೆ ಅಬಾಲವೃದ್ಧರಾದಿಯಾಗಿ ಎಲ್ಲರೂ ಕೈಜೋಡಿಸಿದಾಗ ಮಾತ್ರ ಹಸಿರು ಕಲ್ಯಾಣವಾಗುತ್ತದೆ. ಪರಿಸರಕ್ಕೆ ಆಗುವ ಹಾನಿಯನ್ನು ತಪ್ಪಿಸಲು ಮರದ ಸಸಿಗಳನ್ನು ನೆಡುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ. ಹೀಗಾಗಿ ಎಲ್ಲರೂ ಮಂಡಳಿಯ ಹಸಿರು ಕಲ್ಯಾಣ ಯೋಜನೆಗೆ ಕೈ ಜೋಡಿಸುವಂತೆ ಡಾ. ಅಜಯ್‌ಸಿಂಗ್ ವಿಶ್ವ ಪರಿಸರದ ದಿನದ ಈ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಅವರು ಮನವಿ ಮಾಡಿದ್ದಾರೆ.

## ಕೊಚ್ಚಿ ಕೊಲೆ

ರಕ್ತಸ್ರಾವಾಗಿದ್ದರಿಂದ ದುಷ್ಕರ್ಮಿಗಳು ಅರಿತವಾದ ಆಯುಧದಿಂದ ಕೊಚ್ಚಿ ಕೊಲೆ ಮಾಡಿದ್ದಾರೆಂದು ಮೃತನ ಹೆಂಡತಿ ಲಿಂಗಸಗೂರು ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ಮೃತ ಬಸನಗೌಡನ ಶವ ಪತ್ತೆಯಾದ ಅನತಿ ದೂರದಲ್ಲಿ ಕೊಡಲಿಯೊಂದು ಪತ್ತೆಯಾಗಿದ್ದು ಆ ಕೊಡಲಿಗೆ ರಕ್ತ ಅಂಟಿಕೊಂಡಿದ್ದು ದುಷ್ಕರ್ಮಿಗಳು ಅದೇ ಕೊಡಲಿಯಿಂದ ಮೃತನ ಕೊರಳಿಗೆ ಕೊಡಲಿಯಿಂದ ಕೊಚ್ಚಿ ಆತನನ್ನು ಕೊಲೆ ಮಾಡಲಾಗಿದೆ ಎಂಬ ಅನುಮಾನ ಕುಟುಂಬಸ್ಥರು ವ್ಯಕ್ತಪಡಿಸುತ್ತಿದ್ದಾರೆ.

ಬೆಳಿಗ್ಗೆ ಆತನ ಮಗ ಕೊಲೆಯ ವಿಚಾರ ತಿಳಿಸುತ್ತಿದ್ದಂತೆ ಕೊಲೆಯಾದ ಸ್ಥಳದಲ್ಲಿ ಕುಟುಂಬಸ್ಥರು ಜಮಾವಣೆಗೊಂಡಿದ್ದು ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

ಕೊಲೆಗೆ ಇನ್ನೂ ನಿಖರವಾದ ಕಾರಣ ತಿಳಿದು ಬಂದಿಲ್ಲ ಲಿಂಗಸುಗೂರು ಪೋಲಿಸರು ಪ್ರಕರಣವನ್ನು ದಾಖಲಿಸಿಕೊಂಡು ಕೊಲೆಗಾರರ ಪತ್ತೆಗಾಗಿ ತನಿಖೆ ನಡೆಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.05:ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ ಜೂನ್ 6 ರಂದು ಶುಕ್ರವಾರ ಬೆಳಿಗ್ಗೆ 9 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಬೆಳಿಗ್ಗೆ 10 ಗಂಟೆಗೆ ಕಲಬುರಗಿಯಲ್ಲಿ ನಿಗದಿತ ಕಾರ್ಯಕ್ರಮದಲ್ಲಿ ಭಾಗವಹಿಸಿ ರಾತ್ರಿ 8 ಗಂಟೆಗೆ ಕಲಬುರಗಿಯಿಂದ ವಿಶೇಷ ವಿಮಾನದಮೂಲಕಬೆಂಗಳೂರಿಗೆ ಪ್ರಯಾಣಿಸುವರು.

# ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ, ಆರೋಗ್ಯ ನೀಡುವುದು ಬಹುಮುಖ್ಯ ಡಾ. ಶೈಲೇಂದ್ರ ಬೆಲ್ದಾಳೆ.

ಮಲ್ಲಮ್ಮ ನುಡಿ ವಾರ್ತೆ ಬೀದರ್ :ಜೂ.5:ದಕ್ಷಿಣ ಕ್ಷೇತ್ರದಲ್ಲಿ ಶಿಕ್ಷಣ ಮತ್ತು ಆರೋಗ್ಯಕ್ಕೆಮೊದಲು ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಕುತ್ತಾಬಾದ ಗ್ರಾಮದಲ್ಲಿ ಸುಮಾರು 65 ಲಕ್ಷ ರೂ. ವೆಚ್ಚದ ನೂತನ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಕಟ್ಟಡ ನಿರ್ಮಾಣ ಗುದ್ದಲಿ ಪೂಜೆ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

ಆರೋಗ್ಯವೇ ಭಾಗ್ಯ ಎನ್ನುವ ಮಾತೊಂದಿದೆ.ಆರೋಗ್ಯವಿದ್ದರೆ ಮಾತ್ರಮನುಷ್ಯನೆಮ್ಮದಿಯಿಂದ ಬದುಕಲುಸಾಧ್ಯ.ಅದೊಂದನ್ನು ಬಿಟ್ಟು ಉಳಿದೆಲ್ಲ ಇದ್ದರೂ ಮನುಷ್ಯನನಿಗೆ ಅವುಗಳನ್ನು ಅನುಭವಿಸಲು ಸಾಧ್ಯವೇ ಆಗುವುದಿಲ್ಲ.ಹಾಗಾಗಿಯಾವುದೇ ವ್ಯಕ್ತಿ ಆಸ್ತಿ,ಐಶ್ವರ್ಯ,ಪದವಿ, ಸ್ಥಾನಮಾನ ಈ ಎಲ್ಲದಕ್ಕಿಂತ ಮಾನಸಿಕ ಹಾಗೂ ದೈಹಿಕ ಆರೋಗ್ಯಕ್ಕೆ ಮೊದಲ ಪ್ರಾಶಸ್ತ್ಯ ನೀಡುತ್ತಾನೆ.

ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ರಕ್ಷಣೆ ಮತ್ತು ಶಿಕ್ಷಣವನ್ನುತಕ್ಷಣವೇ ನೀಡಲು ವೈದ್ಯರು, ಶಿಕ್ಷಕರು ಹೆಚ್ಚಿನ ಗಮನ ಹರಿಸಬೇಕು.

ಗ್ರಾಮೀಣ ಪ್ರದೇಶಗಳ ಜನರಿಗೆ ಪ್ರಾಥಮಿಕ ಹಂತದ ಆರೋಗ್ಯ ಸೇವೆ ನೀಡುವ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಉತ್ತಮವಾಗಿದ್ದರೆ ಮಾತ್ರ ಬಡಜನರ ಆರೋಗ್ಯ ಉತ್ತಮವಾಗಿರಲು ಸಾಧ್ಯ.

ರೋಗಿಗಳಿಗೆ ವೈದ್ಯರು ಸರಿಯಾಗಿ ಸ್ಪಂದಿಸಬೇಕು. ಇಲ್ಲಿ ಬರುವ ರೋಗಿಗಳಿಗೆ ಔಷಧಿಗಾಗಿ ಚೀಟಿ ನೀಡಬೇಡಿ. ಬದಲಿಗೆ ಉತ್ತಮ ಚಿಕಿತ್ಸೆ ನೀಡಿ ಜನರ ಆರೋಗ್ಯ ರಕ್ಷಣೆಗೆ ಮುಂದಾಗಿ. ಕ್ಷೇತ್ರದ ಪರಿಪೂರ್ಣ ಅಭಿವೃದ್ಧಿಯೇ ನನ್ನಗುರಿಯಾಗಿದ್ದು ಗ್ರಾಮಗಳ ಅಭಿವೃದ್ಧಿಯಲ್ಲಿ ರಸ್ತೆ, ನೀರು, ಶಿಕ್ಷಣ, ಆರೋಗ್ಯ ಬಹು ಮುಖ್ಯವಾದ ಪಾತ್ರವನ್ನು ವಹಿಸುತ್ತವೆ.

## ರಾಯಚೂರ ಕೋಟೆ ಹತ್ತಿರದ ರಾಜಕಾಲುವೆಯ ದುರಸ್ಥಿ ಕಾರ್ಯದ ಪರಿಶೀಲನೆ





ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಜೂ.5: ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಜೂನ್ 5ರಂದು ಸಂಜೆ ರಾಯಚೂರ ನಗರದ ಕೋಟೆ ಹತ್ತಿರದ ರಾಜಕಾಲುವೆ ಪ್ರದೇಶಕ್ಕೆ ಭೇಟಿ ನೀಡಿ ಕಾಲುವೆಯ ದುರಸ್ಥಿ ಕಾರ್ಯದ ವೀಕ್ಷಣೆ ನಡೆಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ರಾಹುಲ್ ಪಾಂಡ್ವೆ,ರಾಯಚೂರ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಾಪತ್ರ ಅವರೊಂದಿಗೆ ರಾಜಕಾಲುವೆಯ ಸ್ಥಳಕ್ಕೆ ಭೇಟಿ ನೀಡಿ, ಜೆಸಿಬಿಗಳಿಂದ ನಡೆದ ಕಾಲುವೆಯ ಸ್ವಚ್ಚತಾ ಕಾರ್ಯವನ್ನು ಪರಿಶೀಲಿಸಿದರು.

ಕಾಲುವೆಯ ಸ್ವಚ್ಚತಾ ಕಾರ್ಯವು ಈಗ ಆರಂಭವಾಗಿದ್ದರಿಂದಾಗಿ ರಾಯಚೂರ ನಿಗರದ ನಿವಾಸಿಗಳಿಗೆ ಸಂತಸ ತಂದಿದೆ. ಈ ಕಾಲುವೆಯ ಸ್ವಚ್ಚತಾ ಕಾರ್ಯವು ವೈಜ್ಞಾನಿಕ ರೀತಿಯಲ್ಲಿ ಆಗಬೇಕು. ಇಲ್ಲಿ ಮತ್ತೆ ಗಲೀಜು ಸೇರಿದಂತೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಮಾಜ ಸೇವಕರಾದ ಮೋಸಿನ್ ಖಾನ್ ಅವರು ಇದೆ ವೇಳೆ ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು.

ಈಗ ಜೆಸಿಬಿಗಳಿಂದ ಕಸ ಎತ್ತು ಹಾಕಿ ಸರಿಪಡಿಸುತ್ತಿರುವುದು ಸರಿ ಇದೆ. ಬಹುವರ್ಷಗಳ ನಂತರ ಈ ಕೆಲಸ ಆರಂಭವಾಗಿದ್ದು ಕಂಡು ನಮಗೆ ಬಹಳಷ್ಟು ಖುಷಿ ಆಗಿದೆ. ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆಯು ರಾಯಚೂರ ನಗರದ ಜನರು ಹೆಮ್ಮೆ ಪಡುವಂತಹ ಕೆಲಸ ಮಾಡುತ್ತಿದೆ. ಈ ರೀತಿ ಕಸವನ್ನು ಎತ್ತುವ ಕಾರ್ಯ ಮತ್ತೆ ಮತ್ತೆ ಆಗದಂತೆ ಮತ್ತೆ ಮತ್ತೆ ಕಸ ತುಂಬದ ಹಾಗೆ ಅತ್ಯಂತ ವೈಜ್ಞಾನಿಕ ರೀತಿಯಲ್ಲಿ ಈ ರಾಜಕಾಲುವೆಯ ದುರಸ್ತಿ ಮತ್ತು ಕಾಲುವೆಯನ್ನು ಸರಿಪಡಿಸುವ ಕಾರ್ಯ ನಡೆಯಬೇಕು. ಇಡೀ ರಾಜ್ಯಕ್ಕೆ ಮಾದರಿಯಾಗುವ ಹಾಗೆ ಈ ಕಾಲುವೆಯನ್ನು ವಿನೂತನ ರೀತಿಯಲ್ಲಿ ಸರಿಪಡಿಸುವ ಕಾರ್ಯ ಆಗಬೇಕು ಎಂದು ಸಾರ್ವಜನಿಕರು ಇದೆ ವೇಳೆ ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿದರು.ನಗರದಹೃದಯಭಾಗದ ಜನನಿಬಿಡಪ್ರದೇಶದಲ್ಲಿನಕೋಟೆ ಪಕ್ಕದಲ್ಲಿದ್ದ ಈರಾಜಕಾಲುವೆಯ ಸ್ಥಿತಿಯಿಂದ ರಾಯಚೂರ ನಗರದ ನಿವಾಸಿಗಳಿಗೆ ಸಾಕಷ್ಟು ಕಿರಿಕಿರಿಯಾಗಿತ್ತು. ರಾಯಚೂರ ನಗರವನ್ನು ಪ್ರವೇಶಿಸುವ ಜನತೆಯು ಸಹ ಕಾಲುವೆಯನ್ನು ಕಂಡು ಬೇಸರ ವ್ಯಕ್ತಪಡಿಸುವ ದುಸ್ಥಿತಿಯಿತ್ತು. ಈಗಾಗಲೇ ಕೆಲವು ದಿನಗಳಿಂದ ನಿರಂತರವಾಗಿ ಈ ಕಾಲುವೆಯ ದುರಸ್ಥಿ ಕಾರ್ಯ ನಡೆದಿದೆ. ಇದಕ್ಕೆ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳು ಇದೆ ವೇಳೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.ಈ ರಾಜಕಾಲುವೆಗೆ ಇನ್ಮೇಲೆ ಯಾರು ಸಹ ಕಸವನ್ನು ಎಸೆಯದಂತೆ ವೈಜ್ಞಾನಿಕ ರೀತಿಯಲ್ಲಿ ಕಾಲುವೆಯ ಶುಚಿತ್ವ-ಕ್ಕೆ ಕ್ರಮ ವಹಿಸಲಾಗುವುದು ಎಂದು ಇದೆ ವೇಳೆ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ ಔರಾಧ:ಜೂ.5:ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಎಲ್ಲರೂ ಗಿಡ-ಮರಗಳನ್ನು ಉಳಿಸಬೇಕು. ಸಸಿಗಳನ್ನು ನೆಟ್ಟು ಮಕ್ಕಳಂತೆ ಪೋಷಿಸಬೇಕು ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.ವಿಶ್ವ ಪರಿಸರ ದಿನಾಚರಣೆಯ ನಿಮಿತ್ತ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ವಲಯ ಸಂತಪೂರ ಔರಾದ(ಬಿ) ಹಾಗೂ ಕಮಲನಗರ ವತಿಯಿಂದ ಜೂ.5ರಂದು ಔರಾದ(ಬಿ) ತಾಲ್ಲೂಕಿನ ಬೋರಾಳ ಗ್ರಾಮದಲ್ಲಿ ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಉತ್ತಮ ಆರೋಗ್ಯಕ್ಕಾಗಿ ಮತ್ತು ಮುಂದಿನ ಪೀಳಿಗೆಗೆ ಉತ್ತಮ ವಾತಾವರಣ ಕಲ್ಪಿಸಲು ಪರಿಸರವನ್ನು ಕಾಪಾಡಬೇಕಿದೆ. ಹಾಗಾಗಿ ಪ್ರತಿಯೊಂದು ಮನೆಯಲ್ಲೂ ಗಿಡ-ಮರಗಳನ್ನು ನೆಡಬೇಕು. ಇದಕ್ಕೆ ಹೆಚ್ಚಿನ ಶ್ರಮ ಪಡುವ ಅವಶ್ಯಕತೆಯಿಲ್ಲ. ಪ್ರತಿದಿನ ಸ್ವಲ್ಪ ನೀರು ಕೊಟ್ಟರೆ ಸಾಕು ತಾನಾಗಿಯೇ ಬೆಳೆಯುತ್ತವೆ ಎಂದು ಹೇಳಿದರು.ಅರಣ್ಯ ಇಲಾಖೆಯಿಂದ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ಎಲ್ಲ ಸರ್ಕಾರಿ ಶಾಲೆ-ಕಾಲೇಜು, ಐಟಿಐ, ಪಾಲಿಟೆಕ್ನಿಕ್ ಕಾಲೇಜುಗಳು, ಗ್ರಾಮಪಂಚಾಯಿತಿ,ಅಂಗನವಾಡಿ ಕೇಂದ್ರ, ಆರೋಗ್ಯ ಕೇಂದ್ರ ಹೀಗೆ ಎಲ್ಲ ಕಚೇರಿಗಳಲ್ಲಿಯೂ ಸಸಿಗಳನ್ನು ನೆಡಬೇಕು.ಪರಿಸರದ ಮಹತ್ವದ ಬಗ್ಗೆ ಸಾರ್ವಜನಿಕರಲ್ಲಿ ಇನ್ನಷ್ಟು ಜಾಗೃತಿ ಮೂಡಿಸುವ ಕೆಲಸವಾಗಬೇಕು ಎಂದರು.

ಇದೇ ವೇಳೆ ಶಾಸಕರು ಸರ್ಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಸಸಿ ನೆಟ್ಟರಲ್ಲದೇ ವಿದ್ಯಾರ್ಥಿಗಳಿಗೆ ಸಸಿಗಳನ್ನು ವಿತರಿಸಿದರು.ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ ರಂಗೇಶ, ಆರ್ ಎಫ್ ಓ ಎಂ.ಡಿ ಮುದ್ದಸಿರ್ ಅಹ್ಮದ್, ಪ್ರಕಾಶ ನಿಪ್ಪಾಣಿ, ಗಜಾನಂದ, ಡಿಆರ್ಎಫ್ಓ ಬಾಲಾಜಿ, ನಾಗೇಂದ್ರನಾಥ ಸಿಂಗೋಡೆ, ವೈಜಿನಾಥ, ಅರಣ್ಯ ಪಾಲಕ ಬಸವರಾಜ, ಮುಖ್ಯಗುರು ರಾಜೇಂದ್ರ, ಮುಖಂಡರಾದ ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಶಿವಶಂಕರ ಮಣಿಗೆಂಪೂರ, ಪಂಢರಿ ಆಡೆ, ಬಾಲಾಜಿ ಅಮರವಾಡಿ, ವಿಜಯಲಕ್ಷ್ಮೀ ಪಾಟೀಲ, ಸಹದೇವ ಮಚಕೂರೆ, ನಿವರ್ತಿ ಪಾಟೀಲ, ಬಜರಂಗ ಪಾಂಡ್ರೆ, ಗಣಪತರಾವ ಮಚಕೂರೆ, ಪ್ರದೀಪ ಗುಬನೂರೆ, ದೇವಿದಾಸ ಪಾಂಡ್ರೆ, ಜಗನಾಥ ಮಚಕೂರೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪರಿಸರ ಬಗ್ಗೆ ಎಲ್ಲರೂ ಕಾಳಜಿ ವಹಿಸಿ:ಶಿವಕುಮಾರ್ ಘಾಟೆ




ಮಲ್ಲಮ್ಮನುಡಿ ವಾರ್ತೆ ಔರಾದ :ಜೂ.5:ತಾಲೂಕಿನ ಗುಡಪಳ್ಳಿ ಗ್ರಾಮ ಪಂಚಾಯತಿಯಲ್ಲಿ ಗುರುವಾರ

ಸಾಮಾಜಿಕಲೆಕ್ಕಪರಿಶೋಧನೆ ಗ್ರಾಮ ಸಭೆ ಹಾಗೂ ಪರಿಸರ ದಿನಾಚರಣೆಯ ಅಂಗವಾಗಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಗಿರೀಶ್ ಬದೋಳೆ ಮತ್ತು ಉಪಕಾರ್ಯದರ್ಶಿ ಮುಕ್ಕಣ್ಣ ಕರಿಗಾರ್ ಹೆಸರಿನಲ್ಲಿ ಸಸಿ ನಡಿಸುವ ಮೂಲಕ ಸಾಮಾಜಿಕ ಪರಿಶೋಧನೆಗೆ ಮಾನ್ಯ ಶಿವಕುಮಾರ್ ಘಾಟೆ ಸರ್ ಚಾಲನೆ ನೀಡಿದರು

ಸಭೆಯಲ್ಲಿ ಭಾಗವಹಿಸಿ ಕಡತಗಳನ್ನು ಪರಿಶೀಲಿಸಿ ನರೇಗಾ ಅಡಿ ಕೈಗೊಂಡ ಕಾಮಗಾರಿ ವೀಕ್ಷಿಸಿ, ಸಸಿ ನೆಟ್ಟು ಮಾತನಾಡಿದ ಅವರು ನರೇಗಾ ಸಹಾಯಕ ನಿರ್ದೇಶಕ ಶಿವಕುಮಾರ್ ಘಾಟೆ ಎಲ್ಲರೂ ಪರಿಸರ ಬಗ್ಗೆ ಕಾಳಜಿ ವಹಿಸಬೇಕು. ಸಸಿ ನೆಟ್ಟು ಅದನ್ನು ಪೋಷಿಸಬೇಕು. ಉದ್ಯೋಗಕ್ಕಾಗಿ ನಗರಗಳಿಗೆ ವಲಸೆ ಹೋಗದೆ ತಮ್ಮ ಸ್ವಂತ್ ಗ್ರಾಮದಲ್ಲಿ ನರೇಗಾ ಉದ್ಯೋಗ ಪಡೆದು ಕೆಲಸ ಮಾಡಬೇಕು ಎಂದು ತಿಳಿಸಿದರು.

ಗುಡಪಳ್ಳಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಂತೋಷ ಪಾಟೀಲ್ ಮಾತನಾಡಿ, ಇತ್ತೀಚಿಗೆ ನಾಗರೀಕರಣದಿಂದ ಪರಿಸರ ಸಾಕಷ್ಟು ನಾಶವಾಗುತ್ತಿದೆ ಇದನ್ನು ರಕ್ಷಣೆ ಮಾಡಲು ಮುಂದಾಗಬೇಕು. ಎಲ್ಲರೂ ನರೇಗಾ ಯೋಜನೆ ಲಾಭ ಪಡೆಯಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಸಿಬ್ಬಂದಿಗಳು ಸೇರಿದಂತೆ ಇನ್ನಿತರ ಗ್ರಾಮಸ್ಥರು ಹಾಜರಿದ್ದರು.

# ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ: 5 ಜೂನ್ 2025 ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯಪ್ರತಿಷ್ಠಿತಬಿ.ವಿ.ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಭವ್ಯವಾದ ಕಾರ್ಯಕ್ರಮವನ್ನು ದಿನಾಂಕ 5 ಜೂನ್ 2025 ರಂದು ಆಯೋಜಿಸಲಾಯಿತು. ಈ ಕಾರ್ಯಕ್ರಮದ ಉದ್ಘಾಟನೆಯನ್ನು ಬಿ.ವಿ. ಬಿ ಮಹಾವಿದ್ಯಾಲಯ ಆವರಣದ ಶಾಲಾ ಕಾಲೇಜುಗಳ ಸಂಚಾಲಕರು ಹಾಗೂ ಹೈ.ಕ.ಶಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು ಡಾ. ರಜನೀಶ್ ವಾಲಿ ಅವರು ಸಸಿಗೆ ನೀರೆಯುವ ಮೂಲಕ ನೆರವೇರಿಸಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ರಜನೀಶ್ ವಾಲಿ ಅವರು, "ಪರಿಸರದ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ. ಮುಂದಿನ ಪೀಳಿಗೆಗೆ ಸ್ವಚ್ಛ, ಸುರಕ್ಷಿತ ಪ್ರಕೃತಿಯನ್ನು ತಲುಪಿಸುವುದು ನಾವು ಹೊಂದಿರುವ ಪ್ರಮುಖ ಕರ್ತವ್ಯ" ಎಂದು ಹೇಳಿದರು.



ಮುಖ್ಯ ಅತಿಥಿಯಾಗಿ ಮಾತನಾಡಿದ ಶ್ರೀ ಬಾಬುರಾವ್ ದಾನಿ ಅಧ್ಯಕ್ಷರು, ಜಿಲ್ಲಾ ವಿಜ್ಞಾನ ಸಮಿತಿ, ಬೀದರ ಇವರು "ಹರಿತ ವಾತಾವರಣ ಕೇವಲ ಜೀವನ ಉಳಿಸುವ ಕಾರ್ಯವಲ್ಲ, ಅದು ಮಾನವೀಯ ಸಂಬಂಧಗಳನ್ನೂ ಗಟ್ಟಿಯಾಗಿಸುತ್ತದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಚಟುವಟಿಕೆಗೆ ಮುಂದಾಗಬೇಕು" ಎಂದು ಹೇಳಿದರು. ಇನ್ನೋರ್ವ ಅತಿಥಿಗಳಾದ ಶ್ರೀ ಅನಿಲಕುಮಾರ ಅಣದೂರೆ ಮಾತನಾಡಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಚರಿಸಲಾಗುವ ವಿಶ್ವ ಪರಿಸರ ದಿನಾಚರಣೆಯನ್ನು ನಾವು ಇಂದು ಇಲ್ಲಿ ಸಂಭ್ರಮದಿಂದ ಆಚರಿಸುತ್ತಿದ್ದೇವೆ. ಜೂನ್ 5ನೇ ತಾರೀಖು ದಿನವು ನಮ್ಮ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಹಾಗೂ ನಾವೆಲ್ಲರೂ ಜವಾಬ್ದಾರಿಯಿಂದ ವರ್ತನೆ ತಾಳಬೇಕೆಂಬ ಸಂಕೇತವಾಗಿದ್ದು, ಪ್ರಕೃತಿಯ ಹಿತಕ್ಕಾಗಿ ಸಣ್ಣ ಕೆಲಸಗಳಲ್ಲಿಯೂ ನಂಬಿಕೆಯೊಂದಿಗೆ ಪಾಲ್ಗೊಳ್ಳಬೇಕೆಂದು ಸೂಚಿಸುತ್ತದೆ ಎಂದು ಹೇಳಿದರು.

ಡಾ. ಸೂರ್ಯವಂಶಿ ಪೂಜಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಈ ವರ್ಷವನ್ನು 'ಪ್ಲಾಸ್ಟಿಕ್ ಮುಕ್ತ ಭೂಮಿ' ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದ್ದು, ಪ್ರತಿಯೊಬ್ಬ ವ್ಯಕ್ತಿಯೂ ಪರಿಸರದ ರಕ್ಷಕನಾಗಿ ತೊಡಗಿಸಿಕೊಳ್ಳಬೇಕಾದ ಅಗತ್ಯವಿದೆ. ವಿದ್ಯಾರ್ಥಿಗಳಲ್ಲಿ ಈ ನಿಟ್ಟಿನ ಅರಿವು ಬೆಳೆಸುವುದು ನಮ್ಮ ಮಹತ್ವದ ಉದ್ದೇಶವಾಗಿದ್ದು, ಈ ಕಾರ್ಯಕ್ರಮದ ಮೂಲಕ ನಾವು ಕೆಲವು ಪರಿಣಾಮಕಾರಿ ಸಂದೇಶಗಳನ್ನು ಹರಡಲು ಪ್ರಯತ್ನಿಸುತ್ತಿದ್ದೇವೆ ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಪಿ. ವಿಠ್ಠಲ ರೆಡ್ಡಿಯವರು ನಮ್ಮ ಕಾಲೇಜು ಸದಾ ಪರಿಸರ ಸ್ನೇಹಿ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುತ್ತಾ ಬಂದಿದೆ. ಇಂದಿನ ಕಾರ್ಯಕ್ರಮವೂ ಆ ನಿಟ್ಟಿನಲ್ಲಿ ಒಂದು ಹೆಜ್ಜೆಯಾಗಿದೆ. ಈ ಪವಿತ್ರವೇದಿಕೆಯಲ್ಲಿ ನಾವೆಲ್ಲರೂ ಹಸಿರು ಭೂಮಿಯ ರಕ್ಷಣೆಗಾಗಿ ನಿಲ್ಲೋಣ ಎಂಬ ಆಶಯವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನ್ಯಾಷನಲ್ ಆಂಗ್ಲ ಮಾಧ್ಯಮ ಪಬ್ಲಿಕ್ ಶಾಲೆ ಹಾಗೂ ಸೈನಿಕ ಶಾಲೆಯ ಪ್ರಾಂಶುಪಾಲರಾದ ಡಾ. ಶ್ರೀಲತಾ ಜಿ. ಸ್ವಾಮಿ, ಬೋಧಕ ಬೋಧೇತರ ಸಿಬ್ಬಂದಿ, ಎನ್.ಸಿ.ಸಿ ಕಾಡೆಟ್ಸ್, ಎನ್.ಎಸ್.ಎಸ್. ಸ್ವಯಂ ಸೇವಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಮೊದಲಿಗೆ ಡಾ. ಮಲ್ಲಿಕಾರ್ಜುನ ಕೋಟೆ ಸ್ವಾಗತಿಸಿದರೆ, ಶ್ರೀಮತಿ ಪೃಥ್ವಿ ಸಾಲಿಮಠ ಅವರು ವಂದಿಸಿದರು, ಶ್ರೀ ಮಾರುತಿ ಭೀಮಣ್ಣ ಅವರು ನಿರೂಪಿಸಿದರು,

ಕಾರ್ಯಕ್ರಮದ ಅಂಗವಾಗಿ ಸುಮಾರು 60 ಸಸಿಗಳನ್ನು ಮಹಾವಿದ್ಯಾಲಯದ ಆವರಣದಲ್ಲಿ ನೆಟ್ಟು ಅಲ್ಲದೇ ಸುಮಾರು 100 ಸಸಿಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಲಾಯಿತು.

# ಮಾನವನ ವಿಕಾಸಕ್ಕೆ ಮೂಲ ಕಾರಣ ಪರಿಸರ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 5 ಮಾನವನ ವಿಕಾಸಕ್ಕೆ ಮೂಲ ಕಾರಣವಾದ ಪರಿಸರವನ್ನು ಯೋಗ್ಯ ರೀತಿಯಲ್ಲಿ ಬಳಸಿ, ಮುಂದಿನ ಜನಾಂಗಕ್ಕೆ ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಆಧ್ಯ ಕರ್ತವ್ಯವಾಗಿದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಶ್ರೀ ಚನ್ನಬಸವೇಶ್ವರ ಸಂಸ್ಥಾನ ಹಿರೇಮಠದ ವತಿಯಿಂದ ಆಯೋಜಿಸಿದ ವಿಶ್ವ ಪರಿಸರ ದಿನಾಚರಣೆಯ ನಿಮಿತ್ಯ ಪರಿಸರ ಸಂರಕ್ಷಣೆ ಜನ ಜಾಗೃತಿ ಕಾರ್ಯಕ್ರಮದ ಸನ್ನಿಧಾನ ವಹಿಸಿ ವಾತನಾಡಿದ ಶ್ರೀಗಳು ಪ್ರಕೃತಿ ಮಾನವನ ಮೂಲ ಅಗತ್ಯಗಳನ್ನು ಪೂರೈಸುತ್ತದೆ ಹೊರತು ಆಕಾಂಕ್ಷೆಗಳಲ್ಲ ಎನ್ನುವ ಮಹಾತ್ಮ ಗಾಂಧೀಜಿ ರವರ ಮಾತಿನ ಗಾಂಭೀರ್ಯತೆಯನ್ನು ಅರಿತುಕೊಂಡು ನಿಸರ್ಗದ ಮಡಿಲು ಹಾಳಾಗದಂತೆ ಎಚ್ಚರ ವಹಿಸಬೇಕು.

ಪ್ಲಾಸ್ಟಿಕ್ ದುರ್ಬಳಕೆಯಿಂದ ಆಗುತ್ತಿರುವ ಪರಿಸರ ಮಾಲಿನ್ಯದ ಸೂಕ್ಷ್ಮತೆಯನ್ನು ಅರಿತು ಪ್ರಕೃತಿ ಮಾತೆಯ ಸೇವೆಗಾಗಿ ಸಸ್ಯ ಶಾಮಲೆಯ ಸಂಪಧೀಕರಣಕ್ಕಾಗಿ ಎಲ್ಲರೂ ಕೈಜೋಡಿಸುವಂತೆ ಕರೆ ನೀಡಿದರು.

ಪರಿಸರ ವಾಹಿನಿ ಬೀದರ ಅಧ್ಯಕ್ಷರಾದ ಶೈಲೆಂದ್ರ ಕಾವಡಿ ಪ್ರಾಸ್ತಾವಿಕವಾಗಿ ಮಾತನಾಡಿ ಪ್ಲಾಸ್ಟಿಕ್ ಮಾಲಿನ್ಯ ಭೂಮಿಯಲ್ಲಿ ನೀರು ಇಂಗುವುದಕ್ಕೂ ಅಡ್ಡಿ ಪಡಿಸುವುದರಿಂದ ಅಂತರ್ಜಲ ಮಟ್ಟ ಕುಸಿಯಲು ಕಾರಣವಾಗಿದೆ ಎಂದರು.

ಅಸ್ಲಾಂ ಮಿಯಾ ಚಿಟ್ಟಗುಪ್ಪ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಬೀದರ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಬಿ.ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಪಂಡಿತರಾವ ಪಾಟೀಲ, ವಿಜಯಕುಮಾರ ಸಂಗೊಳಗೆ, ಅಸ್ಲಾಂ ಮಿಯಾ ಚಿಟ್ಟಗುಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶಾಲೆಯ ಆವರಣದಲ್ಲಿ ವಿದ್ಯಾರ್ಥಿಗಳು ತಮ್ಮ ನೆನಪಿಗಾಗಿ ಗಿಡವನ್ನು ನೆಟ್ಟು ಬೆಳಸಬೇಕು: ಭೋಸ್ಲೆ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪರಿಸರವನ್ನು ಸಂರಕ್ಷಿಸುವ ಕಾರ್ಯ ಪ್ರತಿಯೊಬ್ಬ ಪ್ರತಿಯೊಬ್ಬರಲ್ಲೂ ಆದ್ಯ ಕರ್ತವ್ಯವಾಗಿದೆ ಎಂದು ಪಟ್ಟಣದ ಸರ್ಕಾರಿ ಕನ್ಯಾ ಪ್ರೌಢ ಶಾಲೆ ಆವರಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಚಿಟಗುಪ್ಪ ಶಾಖೆ ವತಿಯಿಂದ ಹಮ್ಮಿಕೊಂಡಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಕಸಾಪ ತಾಲೂಕ ಉಪಾಧ್ಯಕ್ಷ ಸಂಜೀವನ ಭೋಸ್ಲೆ ಮಾತನಾಡುತ್ತ ತಿಳಿಸಿದರು.

ವಿದ್ಯಾರ್ಥಿ ಜೀವನದಿಂದಲೇ ಪರಿಸರ ಸಂರಕ್ಷಣೆ ಬಗ್ಗೆ ಕಾಳಜಿ ವಹಿಸಬೇಕು. ವಿದ್ಯಾರ್ಥಿಗಳು ಕನಿಷ್ಠ ಒಂದು ಗಿಡವನ್ನು ನೆಟ್ಟು ಬೆಳೆಸಬೇಕಾಗಿದೆ. ನಶಿಸಿ ಹೋಗುತ್ತಿರುವ ನಮ್ಮ ಪರಿಸರವನ್ನು ಉಳಿಸಿ ಬೆಳೆಸಬೇಕಾಗಿರುವುದು ಲ್ಲರ ಜವಬ್ದಾರಿಯಾಗಿದೆ. ಶಾಲೆಯ ಸುತ್ತಮುತ್ತಲು ಪರಿಸರವನ್ನು ಶುಚಿತ್ವದಿಂದ ಇಡುವುದು ವಿದ್ಯಾರ್ಥಿಗಳ ಕರ್ತವ್ಯವಾಗಿದೆ ಎಂದು ಹೇಳಿದರು. ಶಾಲೆಯ ವಿದ್ಯಾರ್ಥಿಗಳು ತಮ್ಮ ನೆನಪಿಗಾಗಿ ಗಿಡವನ್ನು ನೆಟ್ಟು ಬೆಳಸಬೇಕು. ನಮ್ಮ ಸುತ್ತಲಿನ ಪರಿಸರವನ್ನು ಸಂರಕ್ಷಿಸಿ, ವಿದ್ಯಾರ್ಥಿ ಜೀವನದಿಂದಲೇ ಪರಿಸರ ಪ್ರೇಮವನ್ನು ಮೈಗೂಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.


ಕಸಾಪ ತಾಲುಕಾಧ್ಯಕ್ಷ ಅನೀಲಕುಮಾರ ಸಿಂಧೆ ಮಾತನಾಡಿ, ಇಂದಿನ ದಿನಗಳಲ್ಲಿ ಗಿಡಗಳನ್ನು ನೆಟ್ಟರೆ ಮುಗಿಯುವುದಿಲ್ಲ, ಪ್ರತಿ ದಿನ ಅವುಗಳನ್ನು ಮಕ್ಕಳಂತೆ ನೋಡಿಕೋಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯೂ ಸಹ ಗಿಡಗಳ ಬಗ್ಗೆ ಜಾಗೃತಿ ವಹಿಸಿ ಪೋಷಣೆ ಮಾಡಿದರೆ ಮಾತ್ರ ಪರಿಸರ ದಿನಾಚರಣೆ ಸಾರ್ಥಕ ಎಂದು ಹೇಳಿದರು. ವರ್ಷಕ್ಕೆ ಒಂದು ದಿನ ಪರಿಸರ ದಿನಾಚರಣೆ ಆಚರಿಸಿ ಗಿಡ ನಡುವುದೂ ಅಲ್ಲ ಪ್ರತೀ ದಿನವೂ ಆ ಕಾಳಜಿ ಇರಬೇಕು, ದಿನಾಲೂ ಉಸಿರಾಡಲು ಇಷ್ಟು ಆಮ್ಲಜನಕ ಕೊಟ್ಟಿರುವ ಪ್ರಕೃತಿಗೆ ನಾವೇನಾದರೂ ಕೊಡುಗೆ ಕೊಡಲೇಬೇಕು, ನಾವು ಪರಿಸರ ದಿನದಂದು ಮಾತ್ರ ಉಸಿರಾಡುವುದಿಲ್ಲ, ಪ್ರತೀ ದಿನ ನಮಗೆ ಆಮ್ಲಜನಕ ಪೂರೈಕೆ ಆಗಬೇಕು. ಪ್ರಸ್ತುತ ಆಮ್ಲಜನಕದ ಮಹತ್ವ ನಮಗೆ ಅರಿವಾಗುವ ಕಾಲ ಬಂದಿದೆ. ಇಂದು ಆಮ್ಲಜನಕಕ್ಕಾಗಿ ಹಣ ನೀಡುತ್ತೇವೆ. ಆದರೆ ಪರಿಸರದಲ್ಲಿ ಅದೆಷ್ಟೋ ವರ್ಷಗಳಿಂದ ಬೇರೂರಿ ಉಚಿತ ಗಾಳಿ, ತಂಪು, ಹಣ್ಣು, ಹೂ ನೀಡುವ ಮರವನ್ನು ಚನ್ನಾಗಿ ಸಂರಕ್ಷಿಸಬೇಕು ಎಂದು ಹೇಳಿದರು.

ವಲಯ ಅರಣ್ಯಾಧಿಕಾರಿ ಶ್ರೀಕಾಂತ ರಾಠೋಡ, ಶಾಲೆಯ ಮುಖ್ಯ ಗುರುಗಳಾದ ಬಸವರಾಜ್ ಮೇತ್ರೆ ಅವರು ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ವೀರಯ್ಯಾ ಪೂಜಾರಿ, ಸೈಯದ್ ಪಾಶ, ಸದಾನಂದ, ಮಹೇಶ್, ಮಾಳಪ್ಪ, ಶಿಕ್ಷಕರಾದ ಪಂಚಶೀಲಾ ಕಟ್ಟಿಮನಿ, ಅಂಬಿಕಾ ಮಾಳಗೆ, ಮಲ್ಲಮ್ಮ ಹುಡಗಿ, ಶಿಲ್ಪಾ, ಬ್ಲೇಸಿ ರಾಣಿ, ಸುಮಾ ರೆಡ್ಡಿ, ಆಯಿಷ್ಯ, ಸಿರಿನ ಬೇಗಂ, ಕಸಾಪ ತಾಲೂಕ ಉಪಾಧ್ಯಕ್ಷ ಗುಂಡಪ್ಪ ಕೋ–ರೆ, ಜಗನಾಥ ಗಾದಾ, ನಗರ ಘಟಕ ಅಧ್ಯಕ್ಷ ರಾಜಕುಮಾರ ಆರ್. ಹಡಪದ, ಅಶ್ವಿನಿ ಆರ್. ಚವ್ಹಾಣ, ಉಡಬಾಳ ವಲವ ಅಧ್ಯಕ್ಷ ಲಕ್ಷ್ಮಿಕಾಂತ ತಮ್ಮನೋರ್, ವೆಂಕಟಪ್ಪ, ಶೇಖರ್, ಬಾಲಾಜಿ ಪಾಟೀಲ್, ಶರಥ್, ಡಾ. ದ್ರಾಕ್ಷಣಿ, ಡಾ. ಗೀತಾಶ್ರೀ, ಚಂದ್ರಕಾಂತ ಥೋರೆ, ನಾಗೇಶ ಚಕಡಿ, ಸಂತೋಷ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> ಪರಿಸರವನ್ನು ಉಳಿಸಿದರೆ ಮಾತ್ರ ನಮಗೆ ಆರೋಗ್ಯವಾದ ಜೀವನ ನಡೆಸಲು ಸಾಧ್ಯ.
>
> 
>
> ಪ್ರಕೃತಿ ಸಂರಕ್ಷಣೆ ನಮ್ಮೆಲ್ಲರ ಹೊಣೆ. ಪರಿಸರ ದಿನಾಚರಣೆ ಮುಖ್ಯ ಉದ್ದೇಶ ಪ್ಲಾಸ್ಟಿಕ್ ತ್ಯಾಜ್ಯ ಕಡಿಮೆ ಮಾಡುವುದು, ಪರಿಸರ ಸ್ವಚ್ಛತೆ, ಹಸಿರು ಉಳಿಸಲು ಕ್ರಮ, ಅರಣ್ಯನಾಶದ ವಿರುದ್ಧ ಕ್ರಮ ಕೈಗೊಳ್ಳುವುದುದಾಗಿದೆ
>
> **–ರಾಜಕುಮಾರ ಆರ್. ಹಡಪದ**
> **ಕಸಾಪ ನಗರ ಘಟಕ ಅಧ್ಯಕ್ಷ ಚಿಟಗುಪ್ಪ.**



ಬಸವಕಲ್ಯಾಣ ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಶ್ರೀಮತಿ ಸೋಮಲಿಂಗಮ್ಮ ಶ್ರೀ ಶಿವಕುಮಾರರೆಡ್ಡಿ ದೇಶಮುಖ ಹಾಬಾಳ ಟಿ. ದಂಪತಿಗಳಿಗೆ ಅವರ ವಿವಾಹ ಸುವರ್ಣ ಮಹೋತ್ಸವ ನಿಮಿತ್ಯ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ, ಆಶೀರ್ವದಿಸಿದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :– ಇಲ್ಲಿನ ಹವ್ಯಾಸಿ ಪತ್ರಕರ್ತರು ಹಾಗೂ ಪ್ರೌಢಶಾಲಾ ಶಿಕ್ಷಕರಾದ ನಾಗಪ್ಪಾ ನಿಣ್ಣೆಯವರ 57 ನೇಯ ಜನ್ಮ ದಿನಾಚರಣೆಯನ್ನು ಅನುಭವ ಮಂಟಪದ ಪರಿಸರದಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಪತ್ರಕರ್ತ ಮಾಣಿಕ ಭೂರೆ. ಯವರ ಸಂಪಾದಿತ ಗ್ರಂಥಗಳನ್ನು ನಾಗಪ್ಪಾ ನಿಣ್ಣೆ ಯವರಿಗೆ ನೀಡುವುದರ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಚಿತ್ರಕಲಾವಿದರಾದ ವಿಠ್ಠಲ ಎನ್. ಜಾಧವ. ರೇವಣಸಿದ್ದ ಡೊಂಗರೆ. ಪ್ರಶಾಂತ ಬೇಲೂರೆ. ಸಂಗೀತ ಕಲಾವಿದರಾದ ರಾಜಕುಮಾರ ಹೂಗಾರ. ಅನುಭವ ಮಂಟಪದ ಗಂಗಾಧರ ಸೇರಿದಂತೆ ಅನೇಕರು ಭಾಗವಹಿಸಿ ಶುಭಾಶಯ ಕೋರಿದರು. (ಮಲ್ಲಮ್ಮ ನುಡಿ ಚಿತ್ರ)

# ವಿದ್ಯಾರ್ಥಿಗಳು; ಪರಿಸರ ಕಾಳಜಿ ಬೆಳೆಸಿಕೊಳ್ಳಿ:ಮುಜಿಬೋದ್ದಿನ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಮಾನವನ ದುರಾಸೆಯಿಂದ ಪರಿಸರವು ನಾಶವಾಗುತ್ತಿರುವಪ್ರಸ್ತುತಸಂದರ್ಭದಲ್ಲಿ ವಿದ್ಯಾರ್ಥಿಗಳು ಗಿಡಗಳನ್ನು ಬೆಳೆಸುವ ಜವಾಬ್ದಾರಿಯನ್ನು ಮೈಗೂಡಿಸಿಕೊಳ್ಳಬೇಕಿದೆ ಎಂದು ಪ್ರಾದೇಶಿಕ ವಲಯ ಅರಣ್ಯ ಸಹಾಯಕ ಸಂರಕ್ಷಣಾಧಿಕಾರಿ ಮುಜಿಬೋದ್ದಿನ ತಿಳಿಸಿದರು.




ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸಸಿ ನೆಟ್ಟು ಮಾತನಾಡಿದ ಅವರು, ವಿಶ್ವ ಪರಿಸರ ದಿನವು ಪರಿಸರ ಸಂರಕ್ಷಣೆಗೆ ಸಂಬಂಧಿಸಿದಂತೆ ಜಾಗೃತಿಯನ್ನು ಉತ್ತೇಜಿಸಲು ಪ್ರತಿ ವರ್ಷ ಜೂನ್ 5 ರಂದು ಸ್ಮರಿಸುವ ಜಾಗತಿಕ ಕಾರ್ಯಕ್ರಮವಾಗಿದೆ. ಪ್ರತಿ ವರ್ಷವೂ ಒಂದೊಂದು ಥೀಮ್‌ನಲ್ಲಿ ಪರಿಸರ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ ಪ್ಲಾಸ್ಟಿಕ್ ಮಾಲಿನ್ಯಕ್ಕೆ ಪರಿಹಾರಗಳು ಎಂಬುದು ಥೀಮ್ ಆಗಿದೆ. ನಮ್ಮ ಪರಿಸರದ ಮೇಲೆ ಪ್ಲಾಸ್ಟಿಕ್ ಮಾಲಿನ್ಯದ ದುಷ್ಪರಿಣಾಮ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪ್ಲಾಸ್ಟಿಕ್ ತ್ಯಾಜ್ಯವನ್ನು ಕಡಿಮೆ ಮಾಡುವ ಗುರಿಯಾಗಿದೆ. ಪ್ಲಾಸ್ಟಿಕ್ ಮಾಲಿನ್ಯವು ಪರಿಸರ ವ್ಯವಸ್ಥೆ, ಜಲ ಹಾಗೂ ವನ್ಯ ಜೀವಿಗಳು, ಮಾನವನ ಆರೋಗ್ಯ ಸೇರಿದಂತೆ ಹಲವು ವಿಚಾರಗಳಲ್ಲಿ ಸಮಸ್ಯೆಗಳನ್ನು ತಂದೊಡ್ಡುತ್ತಿದೆ, ಪ್ಲಾಸ್ಟಿಕ್ ತ್ಯಾಜ್ಯವನ್ನು ಮರು ಬಳಕೆ ಮಾಡುವ ಮೂಲಕ ಮತ್ತು ಇತರ ತ್ಯಾಜ್ಯಗಳಿಂದ ಪ್ರತ್ಯೇಕಿಸುವ ಮೂಲಕ ಸರಿಯಾದ ರೀತಿಯಲ್ಲಿ ತ್ಯಾಜ್ಯ ವಿಲೇವಾರಿ ಮಾಡಿ. ನಿಮ್ಮ ಮನೆ ಹಾಗೂ ಕಚೇರಿ, ಕಾರ್ಯಕ್ರಮಗಳಲ್ಲಿ ಮರು ಬಳಕೆಯ ವಸ್ತುಗಳಿಗೆ ಹೆಚ್ಚು ಆದ್ಯತೆ ನೀಡಿ ಎಂದು ಹೇಳಿದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಮಾತನಾಡಿ, ನಮ್ಮ ಪರಿಸರಕ್ಕೆ ಆಗುತ್ತಿರುವ ಹಾನಿಯನ್ನು ಅರಿತು, ಅದರ ಸಂರಕ್ಷಣೆಯಬಗ್ಗೆಯೂ ಆಲೋಚಿಸಬೇಕಾದದ್ದನ್ನು ನೆನಪಿಸುವ ಮಹತ್ತರವಾದ ದಿನ. ನಾವು ಈ ಪರಿಸರದ ಶಿಶುಗಳು, ಪರಿಸರವಿಲ್ಲದೆ ನಮ್ಮ ಅಸ್ತಿತ್ವಕ್ಕೆ ಯಾವುದೇ ರೀತಿಯ ಬೆಲೆಯಿರುವುದಿಲ್ಲ. ಕೈಗಾರೀಕರಣ , ವಿಜ್ಞಾನ, ತಂತ್ರಜ್ಞಾನದ ಅಭಿವೃದ್ಧಿ ಎಂಬ ಹತ್ತು ಹಲವು ಕಾರಣಗಳಿಗೆ ಶರಣಾಗಿ ಅನೇಕ ರೀತಿಯಲ್ಲಿ ಪರಿಸರಕ್ಕೆ ಅರಿತೋ ಅರಿಯದೆಯೋ ತೀವ್ರ ಹಾನಿಯನ್ನುಂಟು ಮಾಡುತ್ತಿದ್ದೇವೆ. ನಮ್ಮ ಪರಿಸರವನ್ನು ರಕ್ಷಿಸುವ, ಸಂರಕ್ಷಿಸುವ ಕರ್ತವ್ಯ ಪ್ರತಿಯೊಬ್ಬರದೂ ಆಗಿದೆ ಎಂದು ಹೇಳಿದರು. ಸಿಪಿಐ ಶ್ರೀನಿವಾಸ ಅಲ್ಲಾಪುರ್ ಮಾತನಾಡಿ, ನಮ್ಮೆಲ್ಲರ ಬದುಕಿಗೆ ಆಧಾರವಾಗಿರುವ ಪರಿಸರದ ರಕ್ಷಣೆಯಬಗ್ಗೆ ಮಕ್ಕಳಿಗೆ ತಿಳಿಹೇಳುವ ಮೂಲಕ ಅವರಲ್ಲಿ ಪರಿಸರ ಪ್ರೇಮ ಬೆಳೆಸುವ ಕಾರ್ಯಕ್ಕೆ ಪ್ರಜ್ಞಾವಂತ ಸಮುದಾಯ ಮುಂದಾಗಬೇಕಿದೆ. ಮುಂದಿನ ದಿನಗಳಲ್ಲಿ ಪರಿಸರ ಉಳಿಯ ಬೇಕಾದರೆ ನಾವೆಲ್ಲ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತರಾಗಬೇಕಿದೆ ಎಂದರು. ಕಾಲೇಜಿನ ಪ್ರಾಂಶುಪಾಲ ಡಾ. ಜಯಕುಮಾರ್ ಎ. ಸಿಂಧೆ ಮಾತನಾಡಿ, ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಿಂದಲೇ ಗಿಡಗಳನ್ನು ಬೆಳೆಸುವುದಕ್ಕೆ ಮುಂದಾಗಬೇಕು, ಪರಿಸರ ಅಸಮತೋಲನ ಉಂಟಾಗುವ ಮೊದಲೇ ಯುವ ಪೀಳಿಗೆ ಜಾಗೃತಿ ವಹಿಸಿದರೆ, ಗಂಡಾಂತರ ತಡೆಯಬಹುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ವಲಯ ಅರಣ್ಯಾಧಿಕಾರಿ ಶ್ರೀಕಾಂತ ರಾಠೋಡ, ಕಸಾಪ ತಾಲುಕಾಧ್ಯಕ್ಷ ಅನೀಲಕುಮಾರ ಸಿಂಧೆ, ಸಂಗಮೇಶ ಜವಾದಿ ಸೇರಿದಂತೆ ಅರಣ್ಯ ಇಲಾಖೆ ಅಧಿಕಾರಿಗಳು, ಕಾಲೇಜಿನ ಉಪನ್ಯಾಸಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿಶ್ವ ಪರಿಸರ ದಿನದ ಅಂಗವಾಗಿ ವಿವಿಧ ಅಭಿವೃದ್ಧಿ ಕಾರ್ಯಗಳ ತರಬೇತಿ ಶಿಬಿರ.



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್ : ತಾಲೂಕಿನ ಕಾಕಲವಾರ ಗ್ರಾಮ ಪಂಚಾಯತ್ ನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಯಾದಗಿರಿ

ಜಲಜೀವನ್ ಮಿಷನ್ (ಎಎಬ) ಮತ್ತು ಸ್ವಚ್ಛ ಭಾರತ್ ಮಿಷನ್ (ಗ್ರಾ)(ಖಃಬ) ಯೋಜನೆಗಳಡಿಯಲ್ಲಿ ಮಾಹಿತಿ ಶಿಕ್ಷಣ ಮತ್ತು ಸಂವಹನ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಕಾರ್ಯಕ್ರಮಗಳ ತರಬೇತಿ ಶಿಬಿರ ಆಯೋಜಿಸಲಾಗಿತ್ತು.

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಮಾಹಿತಿ ಕುರಿತು ಮತ್ತು ನೀರಿನ ಪರೀಕ್ಷೆ ತರಬೇತಿ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಅಧಿಕಾರಿಗಳು ಗ್ರಾಮ ಪಂಚಾಯತ್ ನ ಎಲ್ಲಾ ಗ್ರಾಮಗಳ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಮಾನ್ಯ ಅಧ್ಯಕ್ಷರು, ಕಾರ್ಯದರ್ಶಿಗ 'ಳು, ಪಂಪ್ ಆಪರೇಟರ್ ಗಳು, ಸಿಬ್ಬಂದಿಗಳು ಹಾಗೂ ಸದಸ್ಯರುಗಳಿಗೆ ತರಬೇತಿಯಲ್ಲಿ ಪಾಲ್ಗೊಂಡಿದ್ದರು.



ಬೀದರ:ಎಐಸಿಸಿ ಖಜಾಂಚಿ, ಸಿಡಬ್ಲ್ಯೂಸಿ (ಕಾಂಗ್ರೆಸ್ ವರ್ಕಿಂಗ್ ಕಮಿಟಿ) ಸದ್ಯಸರು ಹಾಗೂ ಕರ್ನಾಟಕದಿಂದ ರಾಜ್ಯ ಸಭಾ ಸದ್ಯಸರಾದ ಶ್ರೀ ಅಜಯ ಮಾಖನ್ ಅವರಿಗೆ ಕೆಪಿಸಿಸಿ ಕಾರ್ಯದರ್ಶಿ ಕಾರ್ಮಿಕ ವಿಭಾಗದ ಜಾನಸನ ಘೋಡೆ ಮತ್ತು ಸಮಾಜ ಸೇವಕರಾದ ಪಂಕಜ್ ಶ್ರೀವಾಸ್ತವ್ ಯುವ ಹೋರಾಟಗಾರ ರಾಜರಥನ್ ಶಿಂಧೆ ನವದೆಹಲಿಯಲ್ಲಿ ಭೇಟಿಯಾಗಿ ಪಕ್ಷ ಸಂಘಟನೆ ಕುರಿತು ಸುದೀರ್ಘವಾಗಿ ಚರ್ಚೆ ಮಾಡಿದರು

# ಅಂಚೆ ಸಿಬ್ಬಂದಿಗೆ ಸಸಿ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 05 : ಭಾರತೀಯಅಂಚೆಇಲಾಖೆಯು ತನ್ನ ಸಿಬ್ಬಂದಿಗೆ ಉಚಿತ ಸಸಿ ವಿತರಿಸುವ ಮೂಲಕ ವಿಶ್ವ ಪರಿಸರ ದಿನವನ್ನುನಗರದಲ್ಲಿ ಗುರುವಾರಅರ್ಥಪೂರ್ಣವಾಗಿ ಆಚರಿಸಿತು.

ಪ್ರಧಾನ ಅಂಚೆ ಕಚೇರಿಯಲ್ಲಿ ಬೀದರ್ ಅಂಚೆ ಅಧೀಕ್ಷಕ ವಿ.ಎಲ್.ಚಿತಕೋಟೆಸಿಬ್ಬಂದಿಗೆ ಸಸಿ ವಿತರಿಸಿದರು. ಕಚೇರಿ ಆವರಣದಲ್ಲೂ ಸಸಿಗಳನ್ನು ನೆಟ್ಟರು. ಅಂಚೆ ಸಿಬ್ಬಂದಿ ಪರಿಸರ ಸ್ನೇಹಿಯಾಗಿ ಬದುಕು ಸಾಗಿಸಬೇಕು. ತಮ್ಮ ಮನೆ ಪರಿಸರದಲ್ಲಿ ತಲಾ ಒಂದು ಸಸಿ ನೆಡಬೇಕು ಎಂದು ವಿ.ಎಲ್. ಚಿತಕೋಟೆ ಸಲಹೆ ಮಾಡಿದರು. ಮಾನವನ ಉಳಿವಿಗೆ ಪ್ರಕೃತಿ ಸಂರಕ್ಷಣೆ ಅಗತ್ಯವಾಗಿದೆ. ಪರಿಸರ ರಕ್ಷಣೆಗೆ ಎಲ್ಲರೂ ಮುಂದಾಗಬೇಕು ಎಂದು ಅಂಚೆ ಉಪ ಅಧೀಕ್ಷಕರಾಗಿ ಅಧಿಕಾರ ವಹಿಸಿಕೊಂಡ ಲೆಫ್ಟಿನೆಂಟ್ ಕರ್ನಲ್ ನಾಗರಾಜ ತಿಳಿಸಿದರು.

ಪ್ರಧಾನ ಅಂಚೆಪಾಲಕ ರಾಜೇಂದ್ರ ವಗ್ಗೆ, ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್, ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ವಿಜಯಕುಮಾರ ಫುಲೆ ಮತ್ತಿತರರು ಇದ್ದರು.

# ನವೀನ್ ಶಾಲೆ: ಸಸಿ ನೆಟ್ಟು ಪರಿಸರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 05 : ಇಲ್ಲಿಯ ಕುಂಬಾರವಾಡ ರಸ್ತೆಯಲ್ಲಿ ಇರುವ ನವೀನ್ ಪಬ್ಲಿಕ್ ಶಾಲೆಯಲ್ಲಿ ಗುರುವಾರ ಸಸಿ ನೆಟ್ಟು ವಿಶ್ವ ಪರಿಸರ ದಿನ ಆಚರಿಸಲಾಯಿತು.

ಶಾಲೆಯ ಆವರಣದಲ್ಲಿ ವಿವಿಧ ಬಗೆಯ ಸಸಿಗಳನ್ನು ನೆಡಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಶಾಲೆಯ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಅವರು, ನೆಮ್ಮದಿಯ ಭವಿಷ್ಯಕ್ಕಾಗಿ ಪರಿಸರ ಸಂರಕ್ಷಣೆ ಬಹಳ ಅವಶ್ಯಕವಾಗಿದೆ ಎಂದು ತಿಳಿಸಿದರು.

ಪರಿಸರ ಚೆನ್ನಾಗಿದ್ದರೆ ಮಾತ್ರ ಮನುಷ್ಯ ಆರೋಗ್ಯಪೂರ್ಣ ಜೀವನ ನಡೆಸಲು ಸಾಧ್ಯವಿದೆ ಎಂದು ಹೇಳಿದರು. ವಾಯು, ಮಣ್ಣು, ಜಲ, ಶಬ್ದ, ಆಹಾರ ಮೊದಲಾದವುಗಳ ಮಾಲಿನ್ಯದಿಂದ ಇಂದು ಮನುಷ್ಯ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾನೆ. ಹೀಗಾಗಿ ಪರಿಸರ ಉಳಿಸಲು ಎಲ್ಲರೂ ಕೈಜೋಡಿಸಬೇಕಾಗಿದೆ ಎಂದು ತಿಳಿಸಿದರು.

ಶಾಲೆಯ ಕಾರ್ಯದರ್ಶಿ ಶೀಲಾ ಚಿಕ್ಕಬಸೆ, ಸಿಬ್ಬಂದಿ ಸುಧಾರಾಣಿ, ದೀಪಾರಾಣಿ, ಸುಜಾತಾ, ಆರತಿ, ಅಲ್ಕಾರಾಣಿ, ಸಪ್ನಾ, ಅಹಿತಲ್, ಕುಂದಮ್ಮ, ಭಾನುಪ್ರಿಯಾ, ಆಶಾರಾಣಿ, ರತ್ನಮಾಲಾ, ಮಹಾನಂದ, ಪಂಚಶೀಲಾ, ಅನುಸೂಯಾ, ಪಂಡಿತ ಇದ್ದರು.

# ಪತ್ರಿಕಾ ಭವನದಲ್ಲಿ ಪರಿಸರ ದಿನಾಚರಣೆ



ಬೀದರ. ಜೂ. 05 : ಇಂದು ವಿಶ್ವದೆಲ್ಲೆಡೆ ಪರಿಸರ ದಿನಆಚರಿಸುತ್ತಿರುವ ಸಂದಭ ರ್ದಲ್ಲಿಬೀದರ್‌ನಗರದಲ್ಲಿರುವ ಪತ್ರಕರ್ತರದೇಗುಲವಾಗಿರುವಜಿಲ್ಲಾ ಪತ್ರಿಕಾಭವನದಲ್ಲಿಗುರುವಾರಪರಿಸರ ದಿನ ಆಚರಿಸಲಾಯಿತು. ಪತ್ರಿಕಾ ಭವನ ನಿರ್ವಹಣಾ ಸಮಿತಿಯ ಉಪಾಧ್ಯಕ್ಷರು ಹಾಗೂ ಹಿರಿಯ ಪತ್ರಕರ್ತ ಬಾಬು ವಾಲಿ ಸಸಿ ನೆಟ್ಟು, ನೀರುಣಿಸಿ ನಂತರ ಮಾತನಾಡಿ, ಜಿಲ್ಲೆಯ ಶಾಸಕರ, ಸಂಸದರ ಅನುದಾನ ಪಡೆದು ಪತ್ರಿಕಾ ಭವನ ಇನ್ನಷ್ಟು ಅಭಿವೃದ್ಧಿಪಡಿಸಬೇಕಿದೆ, ಪತ್ರಿಕಾ ಭವನ ಮುಂಭಾಗದಲ್ಲಿ ಸುಸಜ್ಜಿತ ಕಂಪೌಂಡ್ ಗೋಡೆ ನಿರ್ಮಿಸಿ, ಅದಕ್ಕೆ ಬಲಿಷ್ಟಗೇಟ್ ಅಳವಡಿಸಿ ಒಳಗಡೆ ಸುಂದರ ಕೈತೋಟ ನಿರ್ಮಿಸಲಾಗುವುದೆಂದರು. ಸಮಿತಿಯ ಮತ್ತೋರ್ವ ಉಪಾಧ್ಯಕ್ಷರು ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಡಿ.ಕೆ ಗಣಪತಿ ಮಾತನಾಡಿ, ಇಂದು ಅಳಿವಿನ ಅಂಚಿನಲ್ಲಿರುವ ಪರಿಸರ ಸಂರಕ್ಷಣೆ ಈ ದೇಶದ ಪ್ರತಿಯೊಬ್ಬ ಜವಾಬ್ದಾರಿ ನಾಗರಿಕರದ್ದು. ಹಾಗಾಗಿ ಪತ್ರಿಕಾ ಭವನದ ಸುತ್ತ ಮುತ್ತ ವಿವಿಧ ರೀತಿಯ ಸಸಿಗಳು ನೆಟ್ಟು ಪರಿಸರ ಸಂರಕ್ಷಣೆಗೆ ಒತ್ತು ಕೊಡೋಣವೆಂದರು.

ಸಮಿತಿಯ ಹಿರಿಯ ಸದಸ್ಯರು ಹಾಗೂ ಐ.ಎಫ್. ಡಬ್ಲ್ಯೂ. ಜೆ ಸದಸ್ಯ ಅಪ್ಪಾರಾವ ಸೌದಿ ಹಾಗೂ ಮಾಳಪ್ಪ ಅಡಸಾರೆ ಮಾತನಾಡಿದರು. ಸಮಿತಿಯ ಸದಸ್ಯರು ಹಾಗೂ ಕೆ ಯು ಡಬ್ಲ್ಯೂ ಜೆ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಪತ್ರಿಕಾ ಭವನದ ಸಿಬ್ಬಂದಿ ರಾಮಣ್ಣ ಕೊಂಡಾ, ತುಳಜಮ್ಮ ಹಾಗೂ ಇತರರು ಈ ಸಂದರ್ಭದಲ್ಲಿದ್ದರು.

# ಹೋರಾಟಗಾರರ ಮೇಲೆ ಪೋಲಿಸರ ದೌರ್ಜನ್ಯ ಖಂಡಿಸಿ 19ರಂದು ಚಳುವಳಿ: ವಾಲದೊಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.05:ಜಿಲ್ಲೆಯಲ್ಲಿ ತಮ್ಮ ತಮ್ಮ ಹಕ್ಕುಗಳಿಗೆ ಹೋರಾಡುವ ಹೋರಾಟಗಾರರ ಮೇಲೆ ದಿನಕ್ಕೊಂದು ಕೇಸ್ ದಾಖಲಿಸಿ ಪ್ರತಿಭಟನೆ ಹತ್ತಿಕ್ಕುವ ಷಡ್ಯಂತ್ರ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಪೋಲಿಸರ ದೌರ್ಜನ್ಯ ಖಂಡಿಸಿ ಈ ತಿಂಗಳ 19ರಂದು ಬೀದರ್‌ನಲ್ಲಿ ರಾಜ್ಯದ ವಿವಿಧೆಡೆಯಿಂದ 5 ಸಾವಿರ ಪ್ರತಿಭಟನಾಕಾರರು ಆಗಮಿಸುತ್ತಲಿದ್ದು, ಬೀದರ್ ಚಲೊ ಎಂಬ ರಾಜ್ಯವ್ಯಾಪಿ ಹೋರಾಟ ನಡೆಸಲಾಗುತ್ತದೆ ಎಂದು ಕರ್ನಾಟಕ ಭೀಮ ಸೇನೆ ಸಂಘಟನೆಯ ರಾಜ್ಯ ಕಾರ್ಯದರ್ಶಿ ವಿಷ್ಣುವರ್ಧನ್ ವಾಲದೊಡ್ಡಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಜಿಲ್ಲೆಯಲ್ಲಿ ಪ್ರಜಾಪ್ರಭುತ್ವ ಮೂಲೆಗುಂಪಾಗಿ ಪೋಲಿಸ್ ಆಡಳಿತ ಎಂಬಂತಾಗಿದೆ. ನಮ್ಮ ಹಕ್ಕಿಗಾಗಿ ಹೋರಾಟ ನಡೆಸಲು ಮುಂದಾದರೆ ಅಂಥವರನ್ನು ಗೃಹ ಬಂಧನದಲ್ಲಿರಿಸುವುದು ಅಥವಾ ಇಡೀ ಜಿಲ್ಲೆ ಸುತ್ತಾಡಿಸುವುದು ಮಾಡುತ್ತಿದ್ದಾರೆ. ಕೆಲವು ವಿಷಯಗಳು ಕೋರ್ಟ್‌ನಲ್ಲಿ ವಿಚಾರಣೆಯಲ್ಲಿದ್ದರೂ ಅಂತಹ ವಿಷಯಗಳಲ್ಲಿ ಮಧ್ಯಸ್ಥಿಕೆ ವಹಿಸುವುದು ಸಹ ನಡೆಯುತ್ತಿದ್ದು, ಇಂತಹದ್ದೊಂದು ಪ್ರಕರಣ ಇತ್ತೀಚೀಗೆ ಟೌನ್ ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ ಎಂದು ಆರೋಪಿಸಿದರು.

ಇಂತಹ ಪ್ರಕರಣಗಳಲ್ಲಿ ಖುದ್ದು ಪೋಲಿಸ್‌ರು ಶಾಮಿಲಾಗಿ ಕಾನೂನು ಕೈಗೆತ್ತಿಕೊಂಡು ಅಮಾಯಕರ ವಿರೂದ್ಧ ಕ್ರಮ ಜರುಗಿಸುತ್ತಿರುವರು, ಪ್ರತಿಭಟನಾಕಾರರಿಗೆ ಹೆದರಿಸುವುದು, ಬಂಧಿಸುವುದು ಇದೆಲ್ಲವು ನಡೆಯುತ್ತಿದ್ದು, ಇದೊಂದು ತೋಘಲಕ್ ದರ್ಬಾರ್‌ನಂತಾಗಿದೆ. ಈ ವಿಚಾರವಾಗಿ 19ರ ಪ್ರತಿಭಟನೆಗೂ ಮುನ್ನ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಪೋಲಿಸ್‌ರ ದೌರ್ಜನ್ಯದ ವಿರೂದ್ಧ ಮನವಿ ಸಲ್ಲಿಸಲಾಗುವುದು ಹಾಗೇ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು ಹಾಗೇ ಕಲಬುರಗಿ ಐ.ಜಿ.ಪಿ ಮತ್ತು ಬೆಂಗಳೂರು ಡಿ.ಜಿ.ಪಿಗೆ ಮನವಿ ಸಲ್ಲಿಸಲಾಗುವುದೆಂದು ವಾಲದೊಡ್ಡಿ ಎಚ್ಚರಿಸಿದ ಅವರು, ಟೌನ್ ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ಎಲ್ಲ ಕಿರಾಣಿ ಅಂಗಡಿಗಳಲ್ಲಿ ಮಧ್ಯ ಮಾರಾಟ ರಾಜಾರೋಷವಾಗಿ ಮಾಡಲಾಗುತ್ತಿದೆ.

ಈ ವಿಚಾರವಾಗಿ ಅಲ್ಲಿಯ ಪೋಲಿಸ್ ಅಧಿಕಾರಿಗಳಿಗೆ ತಿಳಿಸಿದರೆ ಎರಡು ದಿನ ಬಂದ್ ಆಗುತ್ತದೆ. ಮತ್ತೆ ತನ್ನಿಂದ ತಾನೆ ಪುನ ಮಾರಾಟ ಮುಂದುವರೆಯುತ್ತದೆ. ಎಂದು ದೂರಿದರು. ಇಂಥ ಸಮಾಜದ್ರೋಹಿ ಚಟುವಟಿಕೆಗಳಿಗೆ ಕಡಿವಾಣ ಹಾಕುವುದನ್ನು ಬಿಟ್ಟು ನಮ್ಮಂತಹ ಪ್ರತಿಭಟನಾಕಾರರನ್ನು ಹತ್ತಿಕ್ಕುವ ಮೂಲಕ ಗುಬ್ಬಿ ಮೇಲೆ ಬ್ರಹ್ಮಾಸ್ತ್ರ ಪ್ರಯೋಗ ನಿಲ್ಲಿಸಬೇಕೆಂದು ವಿಷ್ಣುವರ್ಧನ್ ಆಗ್ರಹಿಸಿದರು.

ಕರ್ನಾಟಕ ಭೀಮ ಸೇನೆ ಸಂಘಟನೆಯ ಜಿಲ್ಲಾಧ್ಯಕ್ಷ ಅಮರೇಶ ಕುದರೆ, ಮುಖಂಡರಾದ ಅಮೃತ ಮುತ್ತಂಗಿಕರ್ ಪತ್ರಿಕಾಗೋಷ್ಠಿಯಲ್ಲಿದ್ದರು.

# ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಬೀದರ,ಜೂ.5:ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ಅನುಷ್ಠಾನಗೊಳ್ಳಿಸುತ್ತಿರುವ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಲ ಯೋಜನೆ, ಶೈಕ್ಷಣಿಕ ಸಾಲ ಯೋಜನೆ, ಸ್ವಾತಂತ್ರ ಅಮೃತ ಮುನ್ನಡೆ ಯೋಜನೆಗಳಲ್ಲಿ ಸೌಲಭ್ಯಕ್ಕಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರಣ ಅರ್ಹರು ಸದರಿ ಯೋಜನೆಗಳಲ್ಲಿ ಸೌಲಭ್ಯ ಪಡೆಯಬಯಸುವ ಒಕ್ಕಲಿಗ ಸಮುದಾಯದ ಅರ್ಜಿದಾರರು ಸೇವಾಸಿಂಧು ಪೋರ್ಟಲ್ ಗ್ರಾಮಒನ್ / ಬೆಂಗಳೂರು ಒನ್ / ಕರ್ನಾಟಕ ಒನ್ ದಲ್ಲಿ ಅನ್‌ಲೈನ್‌ನಲ್ಲಿ ಹಾಗೂ ಸ್ವಾತಂತ್ರ ??ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು ಕೌಶಲ್ಯ ಕರ್ನಾಟಕ ಅಭಿವೃದ್ಧಿ ನಿಗಮದ ತಂತ್ರಾಂಶದ Àhttps://www.kaushalkar.com ನಲ್ಲಿ ಅರ್ಜಿಯನ್ನು ದಿನಾಂಕ: 02-07-2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಜಾಲತಾಣ https://kvcdc.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ: 080-29904350,29904268 ಅನ್ನು ಸಂಪರ್ಕಿಸುವುದು ಅಥವಾ ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ನಂ. 9-8-15/5ಬಿ, ಬಿವ್ಹಿಬಿ ಕಾಲೇಜ ರಸ್ತೆ, ಮೈಲೂರ ಕ್ರಾಸ್, ಬಸವನಗರ-585403 ದೂರವಾಣಿ ಸಂ:08482-223515 ಗೆ ಸಂಪರ್ಕಿಸಬಹುದಾಗಿದೆಂದು ಅವರು ತಿಳಿಸಿದ್ದಾರೆ.

# ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಅರ್ಜಿ ಅಹ್ವಾನ

ಮಲ್ಲಮ್ಮನುಡಿವಾರ್ತೆಬೀದರ, ಜೂ.5 : ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ(ಸ್ವಯಂ ಉದ್ಯೋಗ ನೇರ ಸಾಲ ಸಹಾಯಧನ), ಜೀಜಾವು ಜಲಭಾಗ್ಯ ಯೋಜನೆ (ಗಂಗಾ ಕಲ್ಯಾಣ ನೀರಾವರಿ ಯೋಜನೆ), ಅರಿವು ಶೈಕ್ಷಣಿಕ ಸಾಲ ಯೋಜನೆ, ರಾಜಶ್ರೀ ಶಾಹು ಮಹಾರಾಜ ವಿದೇಶಿ ವಿಶ್ವವಿದಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಮರಾಠ ಮಿಲ್ಟ್ರಿ ಹೊಟೆಲ್ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ ??ಅಮೃತ ಮಹೋತ್ಸವ ಮುನ್ನಡೆ ಯೋಜನೆಗಳ ಸೌಲಭ್ಯಗಳಿಗಾಗಿ ಅರ್ಜಿ ಅಹ್ವಾನಿಸಲಾಗಿದೆ ಎಂದು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರಣ ಅರ್ಹರು ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ದಲ್ಲಿ ಅನ್‌ಲೈನ್‌ದಲ್ಲಿ ಹಾಗೂ ಹಾಗೂ ಸ್ವಾತಂತ್ರ ?? ಅಮೃತ್ ಮಹೋತ್ಸವ ಮುನ್ನಡೆ ಯೋಜನೆಗೆ https://www.kaushalkar.com ನಲ್ಲಿ ದಿನಾಂಕ:30-06-2025 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ:8867537799/ ದೂ.ಸಂ:080-29903994 ಗಳಿಗೆ ವೆಬ್‌ಸೈಟ್ https://kmcdc.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ನಂ. 9-8-15/5ಬಿ, ಬಿವ್ಹಿಬಿ ಕಾಲೇಜ ರಸ್ತೆ, ಮೈಲೂರ ಕ್ರಾಸ್, ಬಸವನಗರ-585403 ದೂರವಾಣಿ ಸಂ:08482-223515 ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಪರಿಸರದ ಸಮೃದ್ಧಿಯು ಆರೋಗ್ಯಕರ ಜೀವನದ ಅಸ್ತಿತ್ವಕ್ಕೆ ಕಾರಣ: ಡಾ. ಮಲ್ಲಿಕಾರ್ಜುನ ಚ. ಕನಕಟ್ಟೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 05 : ಹಸಿರು ಪರಿಸರ ನಿರ್ಮಾಣಕ್ಕೆ ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ, ಬೀದರ್ ಹಲವಾರು ಉಪಕ್ರಮಗಳನ್ನು ಕೈಗೊಂಡಿರುವುದು ಎಲ್ಲರಿಗೂ ಮಾದರಿಯಾಗಿದೆ ಎಂದು ಪ್ರಾಚಾರ್ಯ ಡಾ. ಮಲ್ಲಿಕಾರ್ಜುನ ಚ. ಕನಕಟ್ಟೆ ಅಭಿಪ್ರಾಯ ಪಟ್ಟರು.



ಗುರುವಾರ ನಗರದ ಬಿ.ವಿ.ಬಿ ಮಹಾವಿದ್ಯಾಲಯದ ಪರಿಸರದಲ್ಲಿರುವ ಬಸವೇಶ್ವರ ಬಿ.ಇ.ಡಿ ಕಾಲೇಜನಲ್ಲಿ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರ ವಹಿಸುತ್ತದೆ. ಪರಿಸರದ ಸಮೃದ್ಧಿ ಆರೋಗ್ಯಕರ ಜೀವನ ಮತ್ತು ಭೂಮಿಯ ಮೇಲಿನ ಪ್ರತಿಯೊಂದು ಜೀವಿಯ ಜೀವನದ ಅಸ್ತಿತ್ವಕ್ಕೆ ಕಾರಣವಾಗಿದೆ. ಕೇವಲ ಮಾನವರಿಗಷ್ಟೇ ಅಲ್ಲ ಇತರೆ ಪ್ರಾಣಿ, ಪಕ್ಷಿಗಳು ಸೇರಿದಂತೆ ಪ್ರತಿಯೊಂದು ಜೀವ ಸಂಕುಲ ಆಹಾರ, ಗಾಳಿ, ನೀರು ಇತರೆ ಅಗತ್ಯೆಗಳಿಗಾಗಿ ಪರಿಸರ ಅವಲಂಬಿಸಿದೆ ಎಂದರೆ ತಪ್ಪಾಗಲಾರದು. 2025ರ ಘೋಷ ವಾಕ್ಯವಾದ "ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು" ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಮಾನವನ ದುರಾಸೆಯಿಂದ ಗಾಳಿ, ನೀರು, ಮಣ್ಣು, ಅಕ್ರಮ ವನ್ಯಜೀವಿ ವ್ಯಾಪಾರ, ಪ್ಲಾಸ್ಟಿಕ್ ಮಾಲಿನ್ಯ, ಸುಸ್ಥಿರವಲ್ಲದ ಬಳಕೆ ಮುಂತಾದವು ಪರಿಸರದ ಪ್ರತಿಯೊಂದು ಅಂಶವೂ ಕಲುಷಿತಗೊಂಡಿದೆ. ನಾವು ಕುಡಿಯುವ ನೀರು, ಆಹಾರ ನಮ್ಮ ದೇಹದಲ್ಲಿ ಸೇರುತ್ತಿವೆ. ಮನುಷ್ಯ ತನ್ನ ಅಭಿವೃದ್ಧಿಗಾಗಿ ಅರಿವಿಲ್ಲದಂತೆ ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಅತ್ಯಂತ ಸುಂದರವಾದ ದೃಶ್ಯವೆಂದರೆ ನಮ್ಮ ಪರಿಸರ, ಆದ್ದರಿಂದ ಅದು ಹೆಚ್ಚು ಬೆಳೆಯುವುದನ್ನು ನೋಡಲು ಅದನ್ನು ರಕ್ಷಿಸಿ ಮತ್ತು ಸಂರಕ್ಷಿಸಲು ನಾವು ಕಾರ್ಯಪ್ರವೃತರಾಗಬೇಕು. ಜೊತೆಗೆ ಯಾವ ವಸ್ತುವನ್ನು ಪುರ್ನಬಳಕೆ ಮಾಡಲು ಸಾಧ್ಯವಿಲ್ಲವೋ ಆ ವಸ್ತುವನ್ನು ಬಳಸಲೇಬೇಡಿ ಎಂದು ಹೇಳಿದರು.

ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕಿ ವೀಣಾ ಎಸ್. ಜಲಾದೆ ಪ್ರಸ್ತಾವಿಕ ಮಾತನಾಡಿ, ಪ್ರತಿಯೊಬ್ಬರಲ್ಲೂ ಪರಿಸರದ ಬಗ್ಗೆ ಕಾಳಜಿ ಮೂಡಿಸುವ ಸಲುವಾಗಿ ವಿಶ್ವ ಪರಿಸರ ದಿನ ಆಚರಿಸಲಾಗುತ್ತದೆ. ವಿಶ್ವದಾದ್ಯಂತ ಪರಿಸರದ ಬಗ್ಗೆ ಜಾಗೃತಿ ಮತ್ತು ನಮ್ಮ ಪರಿಸರದ ರಕ್ಷಣೆಗೆ ಉತ್ತೇಜಿಸಲು ಈ ದಿನ ಆಚರಿಸಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಸಂತೋಷಕುಮಾರ ಸಜ್ಜನ್, ಶಿಲ್ಪಾ ಹಿಪ್ಪರಗಿ, ರಾಜಕುಮಾರ ಸಿಂಧೆ, ಡಾ. ಸಿದ್ದರಾಮ ಎಸ್. ನೆಂಗಾ, ಪಾಂಡುರಂಗ ಕುಂಬಾರ ಹಾಗೂ ಸಿಬ್ಬಂದಿ ವರ್ಗದವರಾದ ಸಂಗೀತಾ ಪಾಟೀಲ, ಸುವರ್ಣಾ ಪಾಟೀಲ, ಪುಷ್ಪಾವತಿ, ರೇವಣಪ್ಪಾ ಮತ್ತು ಬಿ.ಎಡ್ ಸೇರಿದಂತೆ ಕಾಲೇಜಿನ ಪ್ರಶಿಕ್ಷಣಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂನ್ 5–:ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಇದೇ ಜೂ.6 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಶ್ರೀಶೈಲ ಜಿ.ಬಿದರಕುಂದಿ ಅವರು ತಿಳಿಸಿದ್ದಾರೆ.

2025ರ ಜೂನ್ 6ರ ಶುಕ್ರವಾರ ರಂದು ಬೆಳಿಗ್ಗೆ 10 ಗಂಟೆಗೆ ಶಹಾಪೂರ ಆಗಮಿಸಿ ಸಾರ್ವಜನಿಕರ ಕುಂದುಕೊರತೆಗಳ ವಿಚಾರಣೆ ಆಲಿಸುವರು, ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

ನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 5 : 2025–26ನೇ ಶೈಕ್ಷಣಿಕ ಸಾಲಿನ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸುರಪುರ ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಅವರು ತಿಳಿಸಿದ್ದಾರೆ.

ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ವಸತಿ ನಿಲಯಕ್ಕೆ ಹೊಸದಾಗಿ ಪ್ರವೇಶ ನೀಡಲು ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಸುರಪುರ ತಾಲೂಕಿನ ವ್ಯಾಪ್ತಿಯಲ್ಲಿ ವಿದ್ಯಾಭ್ಯಸ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿನಿಯಗಳು ಆನ್‌ಲೈನ್ shp.karnataka.gov.in ನಲ್ಲಿ ಮೂಲಕ ಅರ್ಜಿಸಲ್ಲಿಸಿ ಈ ಕಛೇರಿಗೆ ಸಲ್ಲಿಸಬೇಕು, ಅರ್ಜಿಸಲ್ಲಿಸಲು ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಆಧಾರ ಕಾರ್ಡ್, ಹಿಂದಿನ ಸಾಲಿನ ಅಂಕಪಟ್ಟಿ, ಬ್ಯಾಂಕ್ ಪಾಸ್ ಬುಕ್, 2 ಫೋಟೋ ದಾಖಲಾತಿಗಳೊಂದಿಗೆ 2025ರ ಜೂನ್ 30ರಒಳಗೆಅರ್ಜಿಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸುರಪುರ ಕಛೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಕ್ರೀದ್ ಹಬ್ಬದ ಆಚರಣೆ ಶಾಂತಿ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 5– 2025ರ ಜೂನ್ 7 ರಂದು ಬಕ್ರೀದ್ ಹಬ್ಬದ ಆಚರಣೆ ಹಿನ್ನೆಲೆ ಶಾಂತಿ ಸಭೆಯು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರ ಅಧ್ಯಕ್ಷತೆಯಲ್ಲಿ ಯಾದಗಿರಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜೂ.6 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೊಳ ಅವರು ತಿಳಿಸಿದ್ದಾರೆ.

ಬಕ್ರೀದ್ ಹಬ್ಬದ ಆಚರಣೆ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆಯಿಂದ ಆಚರಣೆ ಮಾಡುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವ ಕುರಿತು ಶಾಂತಿ ಸಭೆ ಅಂದು ನಡೆಯಲಿದೆ. ಈ ಸಭೆಗೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಹಾಗೂ ಸಂಘ ಸಂಸ್ಥೆಯ ಪ್ರತಿನಿಧಿಗಳು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**BEFORE THE WHOM SO MAY IT EVER CONCERN**
**(AFFIDAVIT)**

I Ravi S/o Pandhari. Jadhav aged about 36 yrs Occu: Private job R/o Torana wadi Tq:Kamalanagar Dist:Bidar, do hereby state on oath as under:-

1. That, I am the citizen of Indai
2. I the deponent is a native of Village Torana wadi Tq:Kamalanagar Dist: Bidar and I was Mechanic
3. That, I hereby declare that, my name is mentioned in the school records, as " Ravi S/o Pandhari." But in the adhar card my name is mentioned as Ravi S/o Pandhari. Jadhav
4. That, hereby declare that, both name pertain to the one and same person i.e Ravi S/o Pandhari. Jadhav
5. That, my Real name is Ravi S/o Pandhari. Jadhav

**VERIFICATION**

6. That, the contents of this affidavit are true and correct to the best of my Knowledge and belief

Hence, deposed on this the 4th day of June 2025

No. of Corr (three)
Indentified by:

**Sd/-**
Ravi S/o Pandhari. Jadhav
R/o Torana wadi Tq:Kamalanagar

**Notary By**
Advocate
Patil Sanjay Kumar D
Advocate & Notary C/o H.R patil Advocate
Aurad (B)


# ಅನಧೀಕೃತ ಜಾನುವಾರುಗಳ ವಧೆ ಮತ್ತು ಸಾಗಾಣಿಕೆ ಮೇಲೆ ತೀವ್ರ ನಿಗಾವಹಿಸಿ – ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜೂನ್ 7ರಂದು ಆಚರಿಸಲಾಗುವ ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಅನಧೀಕೃತ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆ ಮೇಲೆ ತೀವ್ರ ನಿಗಾವಹಿಸುವಂತೆ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಬಕ್ರೀದ್ ಆಚರಣೆ ಸಂದರ್ಭದಲ್ಲಿ ಅನಧೀಕೃತ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ತಡೆಗಟ್ಟುವ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕರ್ನಾಟಕ ಜಾನುವಾರು ಹತ್ಯೆ ಪ್ರತಿಭಂದಕ ಕಾಯ್ದೆ ಮತ್ತು ಸಂರಕ್ಷಣೆ ಅಧಿನಿಯಮ–2020ರ ಅನ್ವಯ ಗೋ ಹತ್ಯೆ ನಿಷೇಧಿಸಲಾಗಿದೆ. ಪ್ರಾಣಿಗಳ ಸಾಗಾಣಿಕೆ ನಿಯಮ ಬಾಹಿರವಾಗಿದ್ದು, ಎಲ್ಲಾ ವಯಸ್ಸಿನ ಆಕಳು, ಆಕಳು ಕರು, ಹೋರಿ, ಎತ್ತು ಅಲ್ಲದೆ 13 ವರ್ಷದೊಳಗಿನ ಎಮ್ಮೆ, ಕೋಣ ಹಾಗೂ ಉಚ್ಚ ನ್ಯಾಯಾಲಯದ ಆದೇಶದನ್ವಯ ಒಂಟೆಗಳನ್ನು ಹತ್ಯೆ ಮಾಡುವಂತಿಲ್ಲ. ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಯಾವುದೇ ರೀತಿಯ ಕಾಯ್ದೆ ಉಲ್ಲಂಘನೆಯಾಗದಂತೆ ನೋಡಿಕೊಳ್ಳುವ ಅತ್ಯವಶ್ಯಕತೆ ಇದ್ದು, ಈ ಕುರಿತು ಪಶು ಇಲಾಖೆ, ಪೊಲೀಸ್ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ತಂಡಗಳನ್ನು ರಚಿಸಿ, ಸೂಕ್ತ ನಿಗಾ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಲಾದ ಸ್ಥಳಗಳಲ್ಲಿ ಚೆಕ್‌ಪೋಸ್ಟ್ ತೆರೆಯಬೇಕು. ಚೆಕ್‌ಪೋಸ್ಟಗಳಲ್ಲಿ ಪೊಲೀಸ್ ಹಾಗೂ ಪಶು ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳು ಕಾರ್ಯನಿರ್ವಹಿಸಬೇಕು. ಕರ್ನಾಟಕ ಗೋವಧೆ ಪ್ರತಿಭಂಧಕ ಮತ್ತು ಜಾನುವಾರು ಪರಿ ರಕ್ಷಣೆ ಅಧಿ ನಿಯಮಗಳ ಪ್ರಕಾರ ನಿರ್ದಿಷ್ಟಪಡಿಸಿದ ಪ್ರಾಣಿ, ಗೋವುಗಳ ವಧೆಗೆ ನಿಷೇಧವಿರುತ್ತದೆ. ಅದೇ ರೀತಿ ಕೆಲ ನಿರ್ದಿಷ್ಟಪಡಿಸಿದ ಪ್ರಾಣಿ ಅಥವಾ ಗೋವುಗಳ ವಧೆಗೆ ವಿನಾಯ್ತಿ ನೀಡಲಾಗಿರುತ್ತದೆ. ವಿನಾಯ್ತಿ ಇರುವ ಪ್ರಾಣಿಗಳನ್ನು ಹೊರತುಪಡಿಸಿ ನಿಷೇಧ ಇರುವ ಪ್ರಾಣಿಗಳ ವಧೆಯನ್ನು ತಡೆಯಬೇಕಾಗಿರುತ್ತದೆ. ಪ್ರಾಣಿವಧೆ, ಜಾನುವಾರು ಸಾಗಣೆ ತಡೆಗಟ್ಟಲು ಸಂಬಂಧಪಟ್ಟ ಅಧಿಕಾರಿಗಳು ಜಾನುವಾರು ಹತ್ಯೆ ಪ್ರತಿಭಂದಕ ಕಾಯ್ದೆಯನ್ವಯ ಅಗತ್ಯ ಕ್ರಮ ವಹಿಸಬೇಕು. ಬಕ್ರೀದ್ ಹಬ್ಬವನ್ನು ಶಾಂತಿಯಿಂದ ಆಚರಣೆಗೆ ಎಲ್ಲರೂ ಸಹಕರಿಸಬೇಕು. ಪ್ರಾಣಿ ವಧೆಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳಿಂದ ಪ್ರತ್ಯೇಕ ಸ್ಥಳ ನಿಗದಿಪಡಿಸಿ, ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಬಕ್ರೀದ್ ಪ್ರಯುಕ್ತ ಜೂನ್ 6 ರೊಳಗಾಗಿ ಜಿಲ್ಲೆಯ ಎಲ್ಲಾ ಪೋಲಿಸ್ ಠಾಣೆಗಳಲ್ಲಿ ಜನಪ್ರತಿನಿಧಿಗಳು ಹಾಗೂ ಮುಖಂಡರ ಸಮ್ಮೂಖದಲ್ಲಿ ಶಾಂತಿ ಸಭೆಯನ್ನು ಕರೆದು, ಈ ಸಭೆಯಲ್ಲಿ ಪ್ರಾಣಿಗಳ ಅಕ್ರಮ ಸಾಗಾಣಿಕೆ ಮತ್ತು ವಧೆಯನ್ನು ತಡೆಯಲು ಅಗತ್ಯ ಕ್ರಮವಹಿಸಬೇಕು. ಕರ್ನಾಟಕ ಗೋವಧೆ ಪ್ರತಿಭಂಧಕ ಮತ್ತು ಜಾನುವಾರು ಪರಿ ರಕ್ಷಣೆ ಅಧಿ ನಿಯಮ 1964ರ ಪ್ರಕಾರ ಒಂಟೆಗಳ ವಧೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಭಕ್ರೀದ್ ಹಬ್ಬದ ಸಮಯದಲ್ಲಿ ಒಂಟೆಗಳನ್ನು ತಂದು ವಧೆ ಮಾಡುವ ಸಂಭವಗಳಿರುವುದರಿಂದ ಒಂಟೆಗಳ ಸಾಗಾಣಿಕೆ ಮತ್ತು ವಧೆಯನ್ನು ತಡೆಯಲು ಅಗತ್ಯ ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ ಅವರು ಮಾತನಾಡಿ, ರಾಜ್ಯದಲ್ಲಿ ಜಾನುವಾರು ಹತ್ಯೆ ಪ್ರತಿಬಂಧಿಸುವುದಕ್ಕಾಗಿ ಮತ್ತು ಜಾನುವಾರುಗಳ ಸಂರಕ್ಷಣೆಗಾಗಿ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ–2021 ಕಾಯ್ದೆ ಜಾರಿಯಾಗಿದೆ. ಈ ಕಾಯ್ದೆಯನ್ವಯ "ಜಾನುವಾರು" ಎಂದರೇ, ಎಲ್ಲಾ ವಯಸ್ಸಿನ ಆಕಳು, ಆಕಳ ಕರು, ಗೂಳಿ ಮತ್ತು ಎತ್ತು ಹಾಗೂ ಹದಿಮೂರು ವರ್ಷದೊಳಗಿನ ಕೋಣ ಮತ್ತು ಎಮ್ಮೆ ಸೇರಿವೆ. ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಅನಧೀಕೃತ ಜಾನುವಾರುಗಳ ಸಾಗಾಟದ ಮೇಲೆ ನಿಗಾವಹಿಸಲು ಪಶು ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳ ಸಹಯೋಗದಲ್ಲಿ ತಂಡಗಳನ್ನು ರಚಿಸಿ ಕ್ರಮ ವಹಿಸಲಾಗುತ್ತಿದೆ ಎಂದರು.

ಜಾನುವಾರು ಸಾಗಾಣಿಕೆಯ ಮೇಲೆ ನಿರ್ಬಂಧ: ರೈತರು ಕೃಷಿ ಉದ್ದೇಶಕ್ಕೆ ಸ್ಥಳೀಯವಾಗಿ 15 ಕಿಲೋಮೀಟರ್ ದೂರದವರೆಗೆ ಪರವಾನಗಿ ಇಲ್ಲದೆ ಎರಡು ಹಸು ಮತ್ತು ಎರಡು ಕರುಗಳನ್ನು ಮಾತ್ರ ಕೊಂಡೊಯ್ಯಬಹುದು. ರಾತ್ರಿವೇಳೆ ಗೋವುಗಳ ಸಾಗಣೆ ಸಂಪೂರ್ಣ ನಿಷೇಧವಿದೆ. ಕೃಷಿ ಅಥವಾ ಪಶುಸಂಗೋಪನೆಯ ಉದ್ದೇಶಕ್ಕೆ ಹಸು, ಕರು, ಎತ್ತು, ಎಮ್ಮೆ, ಕೋಣಗಳನ್ನು ಸಾಗಿಸುವಾಗಲೂ ಸಾಗಣೆಯ ಪರವಾನಗಿ ಹೊಂದಿರಬೇಕಾದುದು ಕಡ್ಡಾಯ. ಅದರೊಂದಿಗೆ ಮಾಲೀಕತ್ವದ ದಾಖಲೆ ಮತ್ತು ಪಶುವೈದ್ಯಕೀಯ ಪ್ರಥಮ ಚಿಕಿತ್ಸಾ ಪೆಟ್ಟಿಗೆಯನ್ನೂ ಹೊಂದಿರಬೇಕು. ವಾಹನದಲ್ಲಿರುವ ಗೋವುಗಳ ಸಂಖ್ಯೆ, ಕಳುಹಿಸಿದವರು ಮತ್ತು ಪಡೆಯುವವರ ಹೆಸರು, ವಿಳಾಸ, ದೂರವಾಣಿ ಸಂಖ್ಯೆಯನ್ನು ದೊಡ್ಡ ಅಕ್ಷರಗಳಲ್ಲಿ ವಾಹನದ ಮೇಲೆ ಬರೆಯುವುದು ಕಡ್ಡಾಯ. ಜಾನುವಾರುಗಳ ಮಾಲೀಕರು ಮಾಲೀಕತ್ವದ ದಾಖಲೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ ಎಂದು ಹೇಳಿದರು.

ಪ್ರಾಣಿ ಬಲಿ ನಿಷೇದ ಕಾಯ್ದೆ–1959 ಕಾಯ್ದೆಯ ಸೆಕ್ಷನ್ (3) ರನ್ವಯ ಸಾರ್ವಜನಿಕ ಸ್ಥಳಗಳಲ್ಲಿ, ಪೂಜಾ ಸ್ಥಳಗಳಲ್ಲಿ ಮತ್ತು ಅವುಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಯಾವುದೇ ರೀತಿಯ ಪ್ರಾಣಿಯ ಬಲಿಯನ್ನು ಸಂಪೂರ್ಣವಾಗಿ ನಿಷೇದಿಸಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು ಸಭೆಯಲ್ಲಿ ವಿವರಿಸಿದರು.

ಸಭೆಯಲ್ಲಿ ಕೊಪ್ಪಳ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ, ಕೊಪ್ಪಳ ಡಿವೈಎಸ್ಪಿ ಮುತ್ತಣ್ಣ ಸರವಗೋಳ ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕಿನ ಪಶುವೈದ್ಯಾಧಿಕಾರಿಗಳು ಸೇರಿದಂತೆ ಇತರೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಗೊಂಡಬಾಳ ಗ್ರಾಮ ಪಂಚಾಯತಿಗೆ ಜಿಲ್ಲಾ ಪಂಚಾಯತಿ ಸಿಇಒ ಭೇಟಿ ವಸತಿ ಯೋಜನೆ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ವಿವಿಧ ವಸತಿ ಯೋಜನೆಗಳ ಪ್ರಗತಿ ಪರಿಶೀಲನೆಗಾಗಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ದಿನಾಂಕ:05–06–2025ರಂದು ಗೊಂಡಬಾಳ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಪರಿಶೀಲಿಸಿದರು.

ಗ್ರಾಮ ಪಂಚಾಯತಿಯಿಂದ ವಿವಿಧ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡುತ್ತಿದ್ದು ಹಂತವಾರು ಸಹಾಯಧನ ಫಲಾನುಭವಿಗೆ ದೊರಕುವಂತೆ ಕ್ರಮವಹಿಸಬೇಕೆಂದು ಪಂಚಾಯತ ಅಭಿವೃದ್ಧಿ ಅಧಿಕಾರಿಗೆ ಸೂಚಿಸಿದರು. ಫಲಾನುಭವಿಗಳನ್ನು ಆಯ್ಕೆ ಸಂದರ್ಭದಲ್ಲಿ ಕಾಯ್ದಿರಿಸಿದ ಪಟ್ಟಿಯಲ್ಲಿರುವವರಿಗೆ ಮನೆ ಮಂಜೂರಾತಿ ಮಾಡುವಂತೆ ಸೂಚಿಸಿದರು. 2018–19 ರಿಂದ 2025–26ನೇ ಸಾಲಿನ ವರೆಗೆ ಮನೆ ಮಂಜೂರಾತಿಯಾಗಿರುವ ಫಲಾನುಭವಿಗಳ ಪಟ್ಟಿಯನ್ನು ಖುದ್ದು ಪರಿಶೀಲಿಸಿದರು. ಗ್ರಾಮ ಪಂಚಾಯತಿಯಲ್ಲಿ ವಸತಿರಹಿತರು ಮತ್ತು ನಿವೇಶನರಹಿತರ ಒಂದು ಅಂತಿಮಪಟ್ಟಿಯನ್ನು ಸಿದ್ದಪಡಿಸಿಕೊಂಡು ಗ್ರಾಮ ಪಂಚಾಯತಿಗೆ ಮನೆ ಮಂಜೂರಾದ ಸಂದರ್ಭದಲ್ಲಿ ಅರ್ಹರಿಗೆ ಮನೆ ಮಂಜೂರಾತಿ ನೀಡಬೇಕೆಂದು ನಿರ್ದೇಶಿಸಿದರು.

ತ್ಯಾಜ್ಯ ಸಂಗ್ರಹಣೆ ಶುಲ್ಕ ವಸೂಲಾತಿಗೆ ಒತ್ತು:–ಸಂಜಿವಿನಿ ಒಕ್ಕೂಟದ ಸದಸ್ಯರು ಪ್ರತಿ ಮನೆ ಮನೆಗೆ ತೆರಳಿ ತ್ಯಾಜ್ಯ ಸಂಗ್ರಹಣೆ ಶುಲ್ಕವನ್ನು ಪಾವತಿಸುವಂತೆ ಮನವೊಲಿಸುವಂತೆ ಒಕ್ಕೂಟ–ದ ಸದಸ್ಯರಿಗೆ ಸೂಚಿಸಿದರು. ಇದರಿಂದ ಗ್ರಾಮದಲ್ಲಿ ಕಸ ವಿಲೇವಾರಿಯಾಗುವದರ ಜೊತೆಗೆ ಗ್ರಾಮದಲ್ಲಿ ನೈರ್ಮಲ್ಯದಿಂದ ಕೂಡಿರುತ್ತದೆ. ಕಸ ಸಂಗ್ರಹಣೆ ಮತ್ತು ಪ್ರತ್ಯೇಕಿಸುವ ಸಲುವಾಗಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ವೇತನ ಪಾವತಿಗೆ ಅನುಕೂಲವಾಗುತ್ತದೆ ಎಂದರು. ಪ್ರತಿ ಮನೆಗೆ ತಿಂಗಳಿಗೆ ರೂ.30 ಹಾಗು ಹೊಟೆಲ್ ಗಳಿಗೆ ರೂ.50/–ನಿಗದಿಪಡಿಸಲಾಗಿದ್ದು ಈ ತಿಂಗಳು ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಸಂಗ್ರಹಣೆ ಶುಲ್ಕವನ್ನು ವಸೂಲಾತಿ ಮಾಡಬೇಕೆಂದು ಒಕ್ಕೂಟದ ಸದಸ್ಯರಿಗೆ ಸೂಚಿಸಿದರು.

ಗೊಂಡಬಾಳ ಕೂಸಿನ ಮನೆ ಪರಿವೀಕ್ಷಣೆ:–ಗ್ರಾಮದ ಕೂಸಿನ ಮನೆಗೆ ಭೇಟಿ ನೀಡಿ ಮಕ್ಕಳು ದಾಖಲಾಗಿರುವ ಕುರಿತು ಕೇರ್ ಟೇಕರ್ಸ್‌ಗಳು ಮಾಹಿತಿ ನೀಡಿದರು. ಪ್ರಸ್ತುತ 29 ಮಕ್ಕಳು ಪ್ರತಿ ದಿನ ಕೂಸಿನ ಮನೆಗೆ ಬರುತ್ತಿದ್ದು ಬೆಳಿಗ್ಗೆ ಹಾಲು, ಬಾಳೆಹಣ್ಣು, ದಾಲ್ ಖಿಚಡಿ, ಹೆಸರು ಬೇಳೆ ಪಾಯಸ, ಶಾವಿಗೆ ಪಾಯಸ, ಮೊಟ್ಟೆ ನೀಡುತ್ತಿರುವ ಕುರಿತು ವಿವರಿಸಿದರು. ಕೇರ್ ಟೇಕರ್ ಗಳಿಗೆ ವೇತನ ನೀಡವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ ವಿ, ತಾಲೂಕ ಪಂಚಾಯತ ಸಹಾಯಕ ನಿರ್ದೇಶಕ ಮಹೇಶ್, ಪಂಚಾಯತ ಅಭಿವೃದ್ಧಿ ಅಧಿಕಾರಿ ಜಯಲಕ್ಷ್ಮೀ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಗ್ರಾಮ ಪಂಚಾಯತಿ ಸದಸ್ಯ ಕೊಟ್ರೇಶ್, ಗ್ರಾಮ ಪಂಚಾಯತ ಕಾರ್ಯದರ್ಶಿ ಗವಿಸಿದ್ದಯ್ಯ ಹಾಗು ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

## ಮರಗಳನ್ನು ಬೆಳಸಿ, ಪ್ಲಾಸ್ಟಿಕನ್ನು ತ್ಯಜಿಸಿ ಪರಿಸರ ಸಂರಕ್ಷಿಸಿ : ಶಿವಸಾಗರ್ ಜಗದಾಲೆ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಪ್ರತಿಯೊಬ್ಬರು ಒಂದು ಸಸಿ ನೆಟ್ಟು ಪೋಷಣೆ ಮಾಡುವ ಮೂಲಕ ಪರಿಸರ ರಕ್ಷಣೆಗೆ ಮುಂದಾಗಬೇಕು ಜೊತೆಗೆ ಪರಿಸರದಲ್ಲಿನ ಹಾನಿಕಾರಕ ಪ್ಲಾಸ್ಟಿಕ್ ಬಳಕೆಯನ್ನು ತ್ಯಜಿಸಬೇಕು ಎಂದು ಮಹಿಕೋ ಸೀಡ್ಸ್ ಕಂಪನಿಯ ಕುಷ್ಟಗಿ ಮತ್ತು ಕೊಪ್ಪಳ ಕೇಂದ್ರ ಪ್ರಭಾರಿ

ಶಿವಸಾಗರ್ ಜಗದಾಲೆ ಹೇಳಿದರು.

ತಾಲ್ಲೂಕಿನ ಕದ್ರಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಹಿಕೋ ಸೀಡ್ಸ್ ಕಂಪನಿ ವತಿಯಿಂದ ವಿಶ್ವ ಪರಿಸರ ದಿನವನ್ನು ಸಸಿ ನೆಡುವ ಮೂಲಕ ಸಸಿಗಳಿಗೆ ನೀರುಣಿಸಿ ಮಾತನಾಡಿದರು.

ಪರಿಸರ ದಿನಾಚರಣೆ ಅಂಗವಾಗಿ ಮಹಿಕೋ ಕಂಪನಿಯಿಂದ ವಿದ್ಯಾರ್ಥಿಗಳಿಗೆ ರಂಗೋಲಿ, ಚಿತ್ರಕಲೆ, ಪ್ರಬಂಧ ಮತ್ತು ಭಾಷಣ ಸ್ಪರ್ಧೆಯನ್ನು ಏರ್ಪಡಿಸಿ ಪ್ರಥಮ ಮತ್ತು ದ್ವಿತೀಯ ಬಹುಮಾನ ವಿತರಣೆ ಮಾಡಲಾಯಿತು.

ನಂತರ ಮಹಿಕೋ ಕಂಪನಿ ವತಿಯಿಂದ ಸುಮಾರು ನೂರ–ಕ್ಕೆ ಹೆಚ್ಚು ಸಸಿಗಳನ್ನು ರೈತರಿಗೆ ವಿತರಣೆ ಮಾಡಿ ಅವುಗಳನ್ನು ಉಳಿಸಿ ಬೆಳಸಿ ಪೋಷಿಸುವಂತೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯ ವೆಂಕಪ್ಪ ಅರಕಲ್, ಮಹಿಕೋ ಕಂಪನಿ ಸಿಬ್ಬಂದಿಗಳಾದ ಸಂದೀಪ್ ಶರಿಗಾರ, ರಿಯಾಜ್ ಮುಂಜಾವರ್, ಪಂಪನಗೌಡ ಮಾಲಿ ಪಾಟೀಲ್, ಹನುಮೇಶ ಹಳ್ಳಿಗುಡಿ

ಬಸವರಾಜ ಲಗಳೂರು, ಶಂಕ್ರಪ್ಪ ,ಮಂಜುನಾಥ,,ಪ್ರವೀಣ್ ಮುತ್ತಾಳ, ಸಹಶಿಕ್ಷಕ ಯಮನೂರಪ್ಪ ಬಜೇಂತ್ರಿ ಹಾಗೂ ಎಸ್.ಡಿ.ಎಂ.ಸಿ.ಅಧ್ಯಕ್ಷರು ಉಪಾಧ್ಯಕ್ಷರು, ಗ್ರಾ.ಪಂ.ಸದಸ್ಯರು ಶಿಕ್ಷಕರು ಮತ್ತು ವಿಧ್ಯಾರ್ಥಿ ವಿಧ್ಯಾರ್ಥಿನಿಯರು ಸೇರಿದಂತೆ ಇತರರು ಇದ್ದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಗೀತಾಂಜಲಿ ಮುಗಳಿ ಕರೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ: ಮನೆಗೊಂದು ಮರ ಬೆಳೆಸೋಣ ಇಂದು ದಿನಾಂಕ 05/06/2025 ರಂದು ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಾವಿತ್ರಿಬಾಯಿ ಶಿಕ್ಷಕಿಯರ ಸಂಘ ಜಿಲ್ಲಾ ಘಟಕ ಯಾದಗಿರಿ ಹಾಗೂ ತಾಲೂಕ ಘಟಕ ಶಹಪೂರ್ವಕರಿಂದ ನೂತನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಪ್ಲಾಸ್ಟಿಕ್ ಮುಕ್ತ ಪರಿಸರ ಕುರಿತು ಸಂಘದ ಜಿಲ್ಲಾಧ್ಯಕ್ಷರಾಗಿರುವ ಶ್ರೀಮತಿ ಗೀತಾಂಜಲಿ ಮುಗುಳಿ ಅವರು ಮಾತನಾಡಿದರು ಹಾಗೂ ತಾಲೂಕಾ ಅಧ್ಯಕ್ಷರಾಗಿರುವ ಶ್ರೀಮತಿ ಅರುಂಧತಿ ಕುಲಕರ್ಣಿ ಅವರು ಪರಿಸರ ಮಾಲಿನ್ಯ ಕುರಿತು ಮಾತನಾಡಿದರು ಈ ಕಾರ್ಯಕ್ರಮದಲ್ಲಿ ಚನ್ನಬಸವರೆಡ್ಡಿ ಸರ್. ಸಿದ್ದರಾಮಪ್ಪ ಮಲ್ಲಿಕಾರ್ಜುನ್ ಸೂಡಿ ತಾಲೂಕ ನೂತನ ಅಧ್ಯಕ್ಷರಾಗಿರುವ ಲಕ್ಷ್ಮಣ್ ಸರ್ ರಾಮನಗೌಡ ಶ್ರೀಮತಿ ಗೋವಿಂದಮ್ಮ ಪಲ್ಮಾರಿ ರಜಿಯಾಬೇಗಂ ಚಂದ್ರಕಲಾ ಜಮಖಂಡಿ ಶರಣಮ್ಮ ನಾಗರತ್ನ ಪದ್ಮಾವತಿ ಶಾರದಾ ಬಸಮ್ಮ ಪಾಟೀಲ್ ವಿಜಯಲಕ್ಷ್ಮಿ ಸಾವಿತ್ರಿ ಕೋರಿ ಶೆಟ್ಟಿ ಮಂಜುಳಾ ಘವಳಕರ್ ಉಮಾ ಚಂದ್ರಕಲಾ ಚಂದ್ರಕಲಾ ಸೇರಿಸು ಮಲ್ಲು. ನಾಗಮ್ಮ ಮಾದೇವಿ ಶೋಭಾ ಚಂದ್ರಕಲಾ ಇತರರು ಇದ್ದರು.

### ಮಹಿಳೆಯರ ಸುರಕ್ಷಿತ, ಭದ್ರತೆ, ಸಬಲೀಕರಣ, ಅರಿವು ಕಾರ್ಯಕ್ರಮ

## ಎಲ್ಲಾ ಸಹಕಾರ ಇದ್ದಲ್ಲಿ ಮಾತ್ರ ಬಾಲ್ಯ ವಿವಾಹ, ಬಾಲ ಗರ್ಭಿಣಿ ನಿರ್ಮೂಲನೆ ಮಾಡಲು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 5: ಬಾಲ್ಯ ವಿವಾಹ ಒಂದು ಅನಿಷ್ಟಾ ಪದ್ಧತಿಯಾಗಿದ್ದು, ಇದನ್ನು ಸಂಪೂರ್ಣವಾಗಿ ತೊಲಗಿಸಬೇಕಾಗಿದೆ, ಬಾಲ್ಯ ವಿವಾಹ ನಿಷೇಧ ಹಾಗೂ ಪೋ–ಕ್ಸೋ ಕಾಯ್ದೆಗಳಲ್ಲಿ ತುಂಬಾ ಕಠಿಣ ಶಿಕ್ಷೆಗಳಿವೆ. ಬಾಲ್ಯ ವಿವಾಹ ಮಾಡಿದರೆ ಕುಟುಂಬಗಳು ಹಾಗೂ ಅಪ್ರಾಪ್ತ ಬಾಲಕಿ ಸಹಿತ ಸಂಕಷ್ಟಕ್ಕೆ ಸಿಲುಕುತ್ತಾರೆ. ಅಪ್ರಾಪ್ತ ಬಾಲಕಿಯು ವೈವಾಹಿಕ ಜೀವನ ನಡೆಸಲು ದೈಹಿಕವಾಗಿ ಸಮರ್ಥರಾಗಿರುವುದಿಲ್ಲ, ಎಲ್ಲಾ ಸಹಕಾರ ಇದ್ದಲ್ಲಿ ಮಾತ್ರ ಬಾಲ್ಯ ವಿವಾಹ ಮತ್ತು ಬಾಲ ಗರ್ಭಿಣಿ ನಿರ್ಮೂಲನೆ ಮಾಡಲು ಸಾಧ್ಯ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ವೀರನಗೌಡ ಹೇಳಿದರು. ಯಾದಗಿರಿ ನಗರದ ಪದವಿಪೂರ್ವ ಬಾಲಕಿಯರ ಕಾಲೇಜುನಲ್ಲಿ ಜೂನ್ 5ರ ಗುರುವಾರ ರಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಿಷನ್ ಶಕ್ತಿ ಯೋಜನೆಯಡಿಯಲ್ಲಿ "ಕಾಲೇಜು ವಿದ್ಯಾರ್ಥಿನಿಯರಿಗೆ" ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ–2012ರ, ಮಕ್ಕಳು ಮತ್ತು ಮಹಿಳೆಯರ ಸಹಾಯವಾಣಿ ಗಳಾದ–1098, 112, 181 ಹಾಗೂ ಮಹಿಳೆಯರ ಸುರಕ್ಷಿತ, ಭದ್ರತೆ ಮತ್ತು ಸಬಲೀಕರಣ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ಸಾಮಾಜಿಕ ಪಿಡುಗು ಆಗಿದ್ದು, ಇಂತಹ ಅನಿಷ್ಟಾ ಪದ್ಧತಿಯನ್ನು ಹೋಗಲಾಡಿಸಲು ಯುವಕ, ಯುವತಿಯರು, ಪಾಲಕರು ಮತ್ತು ಸಾರ್ವಜನಿಕರ ಪಾತ್ರ ಬಹು ಮುಖ್ಯವಾಗಿದೆ, ಸರ್ವರ ಸಹಕಾರ ಇದ್ದಲ್ಲಿ ಮಾತ್ರ ಬಾಲ್ಯ ವಿವಾಹ ಮತ್ತು ಬಾಲ ಗರ್ಭಿಣಿ ನಿರ್ಮೂಲನೆ ಮಾಡಲು ಸಾಧ್ಯವಾಗುವುದು ಎಂದು ತಿಳಿಸಿ ಹಾಗೂ ಮಕ್ಕಳು ಮತ್ತು ಮಹಿಳೆಯರ ಸಹಾಯವಾಣಿ ಗಳಾದ–1098,112,181ಸೇವಗಳ ಕುರಿತು ವಿದ್ಯಾರ್ಥಿನಿಯರಿಗೆ ವಿವರವಾಗಿ ತಿಳಿಸಿದರು. ಅತಿಥಿಗಳಾಗಿ ಯಾದಗಿರಿ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಮಹಾವಿದ್ಯಾಲಯ ಉಪನ್ಯಾಸಕಿ ಶ್ರೀಮತಿ ನಿರ್ಮಲಾ ಅವರು ಮಾತನಾಡಿ, ಬಾಲ್ಯ ವಿವಾಹವನ್ನು 10 ದಶಕಗಳಿಂದ ನಿರ್ಮೂಲನೆ ಮಾಡುವಲ್ಲಿ ನಿರಂತರ ಜಾಗೃತಿ ಮೂಡಿಸಿದರು ಸಹ ಇಲ್ಲಿಯವರೆಗೆ ಬಾಲ್ಯ ವಿವಾಹ ಸಂಪೂರ್ಣ ನಿಷೇದ ಆಗಿರುವುದಿಲ್ಲ. ಇದಕ್ಕೆ ಕಾರಣ ಶಿಕ್ಷಣ ಮತ್ತು ಅರಿವಿನ ಕೊರತೆ ಎಂದು ತಿಳಿಸಿ ಇಂತಹ ಜಾಗೃತಿ ಕಾರ್ಯಕ್ರಮಗಳಲ್ಲಿ ನಾವು ಸಕ್ರೀಯವಾಗಿ ಭಾಗವಹಿಸಿ ವಿಷಯವನ್ನು ತಿಳಿದುಕೊಂಡು ಮುಂದೆ ನಮ್ಮ ಸುತ್ತಮುತ್ತಲು ಬಾಲ್ಯ ವಿವಾಹಗಳು ಆಗದಂತೆ ತಡೆಯಲು ಸ್ವ–ಇಚ್ಛೆಯಿಂದ ಶ್ರಮಿಸಬೇಕು ಎಂದು ಹೇಳಿದರು.

ಯಾದಗಿರಿ ಜಿಲ್ಲಾ ಮಿಷನ್ ಸಂಯೋಜಕರು ಶ್ರೀ ಯಲ್ಲಪ್ಪ. ಕೆ ಅವರು ಮಾತನಾಡಿ, ವಿದ್ಯಾರ್ಥಿಗಳನ್ನು ಉದ್ದೇಶಿಸಿ ಜೀವನ ಕೌಶಲ್ಯಗಳ ಕುರಿತು ತಿಳಿಸಿದರು.

ಯಾದಗಿರಿ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಮಹಾವಿದ್ಯಾಲಯಪ್ರಾಂಶುಪಾಲರಾದ ಬಿಸಲಪ್ಪ ಕಟ್ಟಿಮನಿ ಮಾತನಾಡಿ, ಕುಟುಂಬದಿಂದ ಹಿಡಿದು ಸಮಾಜದ ಪರಿವರ್ತನೆಯಲ್ಲಿ ಮಹಿಳೆಯರು, ಹೆಣ್ಣುಮಕ್ಕಳ ಪಾತ್ರ ತುಂಬ ಮುಖ್ಯವಾಗಿದೆ ಹಾಗೂ ದೇಶದ ಅಭಿವೃದ್ಧಿಯಲ್ಲೂ ಕೂಡ ಹೆಣ್ಣು ಮಕ್ಕಳು ಸಮಾನವಾದ ಶ್ರಮ ಇದೆ,ಹೆಣ್ಣು ಮಕ್ಕಳ ಮುಂದಿನ ಭವಿಷ್ಯಕ್ಕಾಗಿ ಬಾಲ್ಯ ವಿವಾಹ ತಡೆಯುವಲ್ಲಿ ಪ್ರತಿಯೊಬ್ಬರ ಜವಾಬ್ದಾರಿಯಾಗಿರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯಾದಗಿರಿ ಜೆಂಡರ್ ಸ್ಪೆಷಲೀಸ್ಟ್, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಶ್ರೀಮತಿ ಬಸಲಿಂಗಮ್ಮ ಕಾರ್ಯಕ್ರಮದ ನಿರೂಪಿಸಿದರು. ಯಾದಗಿರಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಹಾಗೂ ಹಣಕಾಸು ಸಾಕ್ಷರತೆ ತಜ್ಞರು ಲೆಕ್ಕಾಧಿಕ್ಷಕರಾದ ಮಹಾದೇವಪ್ಪ ವಂದನಾರ್ಪಣೆ ನೆರವೇರಿಸಿದರು.

# ಬಳ್ಳಾರಿ: ಜಿಲ್ಲಾ ನ್ಯಾಯಾಲಯದಲ್ಲಿ 'ವಿಶ್ವ ಪರಿಸರ ದಿನಾಚರಣೆ'

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05- ಜಿಲ್ಲಾಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಜಿಲ್ಲಾ ವಕೀಲರ ಸಂಘ ಮತ್ತು ಅರಣ್ಯ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ "ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವ ಕಡೆಗೆ" ಎಂಬ ಘೋಷವಾಕ್ಯದೊಂದಿಗೆ ಗುರುವಾರ ನಗರದ ತಾಳೂರು ರಸ್ತೆಯಲ್ಲಿನ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಆವರಣದಲ್ಲಿ 'ವಿಶ್ವ ಪರಿಸರ ದಿನಾಚರಣೆ' ಆಚರಿಸಲಾಯಿತು.




ಜಿಲ್ಲಾ ನ್ಯಾಯಾಲಯದ ವಿವಿಧ ನ್ಯಾಯಾಲಯಗಳ ನ್ಯಾಯಾಧೀಶರುಗಳು ಆವರಣದಲ್ಲಿ ವಿವಿಧ ಬಗೆಯ ಗಿಡಗಳನ್ನು ನೆಟ್ಟು ನೀರುಣಿಸುವ ಮೂಲಕ ಗಿಡ ನೆಟ್ಟು ಪೋಷಿಸೋಣ ಎಂಬ ಸಂದೇಶ ನೀಡಿದರು.

ಈ ಸಂದರ್ಭದಲ್ಲಿ ಒಂದನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪ್ರಮೋದ.ಬಿ.ಜಿ., ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಘವೇಂದ್ರ ಗೌಡ.ಬಿ.ಜಿ., 3ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಡಿ.ಪಿ ಕುಮಾರಸ್ವಾಮಿ, 4ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಾಸುದೇವ ರಾಧಕಾಂತ್ ಗುಡಿ, ಜಿಲ್ಲಾ ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ವೆಂಕಟೇಶ್, ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರು ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಅಪರ್ಣ, ಎರಡನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ನಸ್ರತ್ ಮುಖ್ತಾರ್ ಅಹ್ಮದ್ ಖಾನ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಪ್ರಿನ್ಸಿಪಲ್ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ನಾಗೇಶ್ ನಾಯ್ಕ, 1ನೇ ಅಪರ ಸಿವಿಲ್ ನ್ಯಾಯಾಧೀಶರಾದ ಸಿದ್ಧಲಿಂಗಯ್ಯ ಗಂಗಾಧರಮಠ, 2ನೇ ಅಪರ ಸಿವಿಲ್ ನ್ಯಾಯಾಧೀಶರಾದ ವಿನುತಾ.ಬಿ.ಎಸ್., 3ನೇ ಅಪರ ಸಿವಿಲ್ ನ್ಯಾಯಾಧೀಶರಾದ ಮುದುಕಪ್ಪ ಒಡನ್, ಅರಣ್ಯ ಇಲಾಖೆಯ ಅಧಿಕಾರಿ ದಾಸನಗೌಡ ಬಿ.ಪಾಟೀಲ್ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ: ವಿವಿಧ ಸಾಲ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05–ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯಕ್ಕಾಗಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

*ಯೋಜನೆಗಳ ವಿವರ:*

ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು–ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ (ಈ ಯೋಜನೆಯಡಿ ಅರ್ಜಿ ತಿತಿತಿ.ಇಚಿಣ್ಣುಚಿಟಇಚಿಡಿ.ಛಿಂಟ ನಲ್ಲಿ ಸಲ್ಲಿಸಬೇಕು).

ಅರ್ಜಿಗಳನ್ನು ಬೆಂಗಳೂರು–ಒನ್/ಕರ್ನಾಟಕ–ಒನ್/ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್‌ನಡಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂ.30 ಕೊನೆಯ ದಿನವಾಗಿದೆ.

*ಅರ್ಹತೆ:*

ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸವಿತಾ ಸಮಾಜ ಸಮುದಾಯ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾನುಭಾವಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್ ನ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ: 08392–267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೌಲ್ ಬಜಾರ್ ಬಡಾವಣೆಯಲ್ಲಿ ನಾಯಿ ಕಡಿತ–ಹಾವು ಕಡಿತದ ಜನಜಾಗೃತಿ

# ನಾಯಿ ಕಡಿತ; ತಪ್ಪದೇ ರೇಬಿಸ್ ಲಸಿಕೆ ಹಾಕಿಸಿರಿ: ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಸಲಹೆ

ಬಳ್ಳಾರಿ,ಜೂ.05–

ನಾಯಿ ಕಚ್ಚಿದ ದಿನವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ರೇಬಿಸ್ ರೋಗ ತಡೆಯುವ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಸಲಹೆ ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಸರ್ವೇಕ್ಷಣಾ ಘಟಕ, ಮಹಾನಗರ ಪಾಲಿಕೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಬಂಡಿಹಟ್ಟಿ–ಆಶ್ರಯ ಕಾಲೋನಿ ಇವರ ಸಂಯುಕ್ತಾಶ್ರಯದಲ್ಲಿ ಕೌಲ್‌ಬಜಾರ್‌ನ ದಾನಪ್ಪ ಸ್ಟ್ರೀಟ್‌ನಲ್ಲಿ ನಾಯಿ ಕಡಿತ ಹಾಗೂ ಹಾವು ಕಡಿತ ಕುರಿತು ಬುಧವಾರ ಏರ್ಪಡಿಸಿದ್ದ ಜನಜಾಗೃತಿ ಶಿಬಿರದಲ್ಲಿ ಅವರು ಮಾತನಾಡಿದರು.

ಸಾಕಿದ ಅಥವಾ ಬೀದಿ ನಾಯಿ ಕಚ್ಚಿದರೆ, ಉಗುರಿನಿಂದ ಗಿರಿದರೆ ಅಥವಾ ನಮ್ಮ ಮೈಮೇಲೆ ಈಗಾಗಲೇ ಇರುವ ಗಾಯವನ್ನು ನಾಲಿಗೆಯಿಂದ ನೆಕ್ಕಿದರೆ ಅದನ್ನು ನಿರ್ಲಕ್ಷ ವಹಿಸುವಂತಿಲ್ಲ. ನಾಯಿ ಕಚ್ಚಿದ ಜಾಗವನ್ನು ಸೋಪು ಮತ್ತು ನೀರಿನಿಂದ ತೊಳೆದು ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ಸಲಹೆಯಂತೆ ಲಸಿಕೆ ಪಡೆಯಬೇಕು ಎಂದು ತಿಳಿಸಿದರು.

ರೇಬೀಸ್ ಸೋಂಕುವುಳ್ಳ ನಾಯಿ ಕಚ್ಚಿದಾಗ ರೇಬೀಸ್ ನಿರೋಧಕ ಚುಚ್ಚುಮದ್ದು ಪಡೆಯದಿದ್ದರೆ ಅಂತಹ ವ್ಯಕ್ತಿಗೆ ರೇಬೀಸ್ ಕಾಯಿಲೆಯ ಸೋಂಕಿಗೆ ಒಳಗಾಗುವ ಸಾಧ್ಯತೆ ಇರುತ್ತದೆ. ಅವರು ಕ್ರಮೇಣ ನೀರು ಕುಡಿಯುವುದಿಲ್ಲ, ಗಾಳಿ ಬಿಸಿದರೆ ಹೆದರುತ್ತಾರೆ, ಬೆಳಕು ಕಂಡರೆ ಭಯ ಪಡುತ್ತಾರೆ, ರೋಗ ದೀರ್ಘವಾದಾಗ ಮರಣ ಸಂಭವಿಸಬಹುದು. ಅಲ್ಲದೆ ನಾಯಿ ಕಡಿತ ಮೆದುಳಿಗೆ (ತಲೆಗೆ) ಹತ್ತಿರವಾಗಿದ್ದಲ್ಲಿ ಅಪಾಯ ಹೆಚ್ಚು. ಹಾಗಾಗಿ ವೈದ್ಯರ ಸಲಹೆಯಂತೆ ರೇಬಿಸ್ ಚುಚ್ಚುಮದ್ದನ್ನು ಕಚ್ಚಿದ ಮೊದಲ ದಿನ, 3ನೇ ದಿನ, 7ನೇ ದಿನ ಮತ್ತು 28 ದಿನದಂದು ತಪ್ಪದೇ ಲಸಿಕೆ ಹಾಕಿಸಬೇಕು ಎಂದು ತಿಳಿಸಿದರು.

**ಹಾವು ಕಡಿತ ಜಾಗೃತಿ:**

ಹಾವು ಕಚ್ಚಿದಾಗ ಗಾಬರಿಗೊಳ್ಳದೇ, ಕಚ್ಚಿರುವ ಭಾಗವು ಹೃದಯದ ಕೆಳಗೆ ಬರುವ ಹಾಗೆ ನಿಗಾವಹಿಸಿ ವ್ಯಕ್ತಿಯನ್ನು ಯಾವುದೇ ವಾಹನ ಅಥವಾ 108 ಅಂಬುಲೆನ್ಸ್ ಮೂಲಕ ಹತ್ತಿರದ ಆಸ್ಪತ್ರೆಗೆ ಕರೆದುಕೊಂಡು ಹೋಗಲು ಮೊದಲ ಆದ್ಯತೆ ನೀಡಬೇಕು. ವ್ಯಕ್ತಿಯ ರಕ್ತಪರಿಚಲನೆಗೆ ತಡೆಯಾಗುವಂತಹ ಕೈಗಡಿಯಾರ, ಬಳೆ, ಉಂಗುರ ಮುಂತಾದವುಗಳನ್ನು ತೆಗೆಯಬೇಕು. ಕಚ್ಚಿದ ಭಾಗವು ಅಲುಗಾಡದಂತೆ ನೋಡಿಕೊಳ್ಳಬೇಕು ಎಂದು ಆಶ್ರಯ ಕಾಲೋನಿ ವೈದ್ಯಾಧಿಕಾರಿ ಡಾ.ಕಾಶೀಪ್ರಸಾದ್ ಅವರು ಜಾಗೃತಿ ಮೂಡಿಸಿದರು.

ಮುಖ್ಯವಾಗಿ ಆಸ್ಪತ್ರೆಗೆ ಹೋಗುವಾಗ ವ್ಯಕ್ತಿಯ ರೋಗ ಲಕ್ಷಣಗಳಾದ ತೇಲುಗಣ್ಣು, ಕಣ್ಣುಮುಚ್ಚುವುದು, ನಾಲಿಗೆ ತೊದಲುವಿಕೆ, ನುಂಗಲು ಕಷ್ಟವಾಗುವುದು, ಉಸಿರಾಡಲು ಕಷ್ಟವಾಗಬಹುದು ಮುಂತಾದವುಗಳನ್ನು ಗಮನಿಸಬೇಕು. ಈ ರೀತಿಯಾದಲ್ಲಿ ನರಮಂಡಲಕ್ಕೆ ಹಾನಿ ಮಾಡುವ ವಿಷದ ಅಂಶ ಲಕ್ಷಣವಾಗಿರುತ್ತದೆ. ಹಾಗೆಯೇ ಗಾಯದ ಜಾಗದಲ್ಲಿ ತೀವ್ರ ಉರಿ, ನೋವುಹರಡುವಿಕೆ ಅಥವಾ ಊದುವಿಕೆ ಗಾಯದ ಸುತ್ತ ಬಣ್ಣಹೀನವಾಗುವುದು, ಕೆಳಬೆನ್ನಿನಲ್ಲಿ ನೋವು ಮುಂತಾದ ಲಕ್ಷಣಗಳು ಅಂಗಾಂಗಕ್ಕೆ ಹಾನಿ ಮಾಡುವ ವಿಷದ ಅಂಶವಾಗಿರುತ್ತದೆ. ಈ ಲಕ್ಷಣಗಳನ್ನು ರೋಗಿಯ ಜೊತೆಗಿರುವ ವ್ಯಕ್ತಿಗಳು ವೈದ್ಯರಿಗೆ ತಿಳಿಸುವ ಮೂಲಕ ವ್ಯಕ್ತಿಯ ಜೀವ ಕಾಪಾಡಲು ಸಾಧ್ಯವಾಗುವ ಚಿಕಿತ್ಸೆ ಒದಗಿಸಲು ಸಹಾಯಕವಾಗುವುದು ಎಂದರು.

ಹಾವು ಕಚ್ಚಿದಾಗ ಕಚ್ಚಿದ ಜಾಗದ ಪಕ್ಕದಲ್ಲಿ ಬಟ್ಟೆಯನ್ನು ಕಟ್ಟುವುದು, ಬ್ಲೇಡ್ ಅಥವಾ ಚಾಕುವಿನಿಂದ ಗಾಯ ಮಾಡುವುದು, ಗಾಯವನ್ನು ಸುಡುವುದು, ನಾಟಿ ಔಷಧಿಗಳನ್ನು ನೀಡುವುದು ಮುಂತಾದವುಗಳನ್ನು ಮಾಡಬಾರದು ಎಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಸೋಂಕಿತ ಈಡಿಸ್ ಸೊಳ್ಳೆ ಕಚ್ಚುವಿಕೆಯಿಂದ ಹರಡುವ ಡೆಂಗ್ಯು, ತಂಬಾಕು ಸೇವನೆಯ ದುಷ್ಪರಿಣಾಮ, ಶುದ್ಧ ನೀರಿನ ಮಹತ್ವ, ಕೈತೊಳೆಯುವಿಕೆ ವಿಧಾನಗಳ ಕುರಿತು ಸಾರ್ವಜನಿಕರಿಗೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಸಾಂಕ್ರಾಮಿಕ ರೋಗ ತಜ್ಞರಾದ ಡಾ. ವಿಶಾಲಾಕ್ಷಿ, ತಂಬಾಕು ನಿಯಂತ್ರಣ ವಿಭಾಗದ ಸರಸ್ವತಿ, ಜಿಲ್ಲಾ ಕಾಲರಾ ನಿಯಂತ್ರಣ ತಂಡದ ಕೆ. ಎಮ್.ಶಿವಕುಮಾರ್, ತಿಪ್ಪೇಸ್ವಾಮಿ, ಉಮಾದೇವಿ, ಸವಿತಾ, ಖಾಸಿಂ ವಲಿ, ಹೆಚ್‌ಐಓ ಮಹಾಲಿಂಗ, ದುರ್ಗಾಪ್ರಸಾದ್, ಪಿಹೆಚ್‌ಸಿಓ ದಾನಕುಮಾರಿ, ಕೌಸರ್, ವಿಜಯ ಲಕ್ಷ್ಮೀ, ಸುಮಿತ್ರಾ, ರಾಧಿಕಾ ಸೇರಿದಂತೆ ಆಶಾ ಕಾರ್ಯಕರ್ತೆಯರು, ತಾಯಂದಿರು, ಸಾರ್ವಜನಿಕರು ಹಾಜರಿದ್ದರು.

ಬಳ್ಳಾರಿಯಲ್ಲಿ ಅರ್ಥಪೂರ್ಣ ವಿಶ್ವ ಪರಿಸರ ದಿನಾಚರಣೆ

# ಪರಿಸರ ಉಳಿಸಿ, ಬೆಳೆಸೋಣ: ನ್ಯಾ. ರಾಜೇಶ್ ಎನ್.ಹೊಸಮನೆ ಕರೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05–ಭೂಮಿಯ ಮೇಲೆ ಇರುವ ಸಜೀವ ಮತ್ತು ನಿರ್ಜೀವ ವಸ್ತು ಸೇರಿದರೆ ಅದು ಪರಿಸರ. ಪರಿಸರವು ದೇವರಿದ್ದಂತೆ, ಹಾಗಾಗಿ ಪರಿಸರವನ್ನು ಉಳಿಸುವ ಮತ್ತು ಬೆಳೆಸುವ ಕಾರ್ಯವಾಗಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಕರೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭೂಮಿಗೆ 5 ಬಿಲಿಯನ್ ವರ್ಷಗಳ ಇತಿಹಾಸವಿದೆ. ಪ್ರಕೃತಿಯಲ್ಲಿನ ಕೀಟ, ಜಂತು, ಬ್ಯಾಕ್ಟೀರಿಯಾಗಳು, ಪ್ರಾಣಿ–ಪಕ್ಷಿಗಳು, ಸಕಲ ಜಲಚರ ಜೀವಿಗಳೆಲ್ಲವೂ ಮನುಷ್ಯನ ಬದುಕಿಗೆ ಪೂರಕವಾಗಿದ್ದು, ಅದರಲ್ಲಿ ಪರಿಸರವು ಮುಖ್ಯವಾಗುತ್ತದೆ. ಪರಿಸರಕ್ಕೆ ಮಾನವನ ಅಗತ್ಯವಿಲ್ಲ, ಆದರೆ ಮಾನವನಿಗೆ ಪರಿಸರವು ಅತೀ ಮುಖ್ಯವಾಗುತ್ತದೆ ಎಂಬುದನ್ನು ನಾವೆಲ್ಲರೂ ಅರ್ಥೈಸಿಕೊಳ್ಳಬೇಕು ಎಂದರು.

ಪ್ರಸ್ತುತ ವಿದ್ಯಮಾನದಲ್ಲಿ ಮಾನವನು ಅನೇಕ ಆವಿಷ್ಕಾರಗಳಿಂದ ಅತೀ ಮುಂಚೂಣಿಯಾಗಿ ಮುಂದುವರೆಯುತ್ತಿದ್ದಾನೆ. ಸ್ವಲ್ಪ ನಿಧಾನಗತಿಯಲ್ಲಿ ಚಲಿಸಿದರೆ ಉತ್ತಮ ಎಂದು ಅವರು ಅಭಿಪ್ರಾಯ ಪಟ್ಟರು.

ಮಾನವನ ಅಗತ್ಯೆಗಳಿಗಾಗಿ ಒಂದು ಮರವನ್ನು ಕಟಾವು ಮಾಡಿದರೆ, ಮುಂದೆ 20 ಗಿಡಗಳನ್ನು ನೆಟ್ಟು ಪೋಷಿಸುವ ಸಂಕಲ್ಪ ಹೊಂದಬೇಕು. ಪ್ರತಿಯೊಬ್ಬರೂ ತಮ್ಮ ಮನೆಯ ಸುತ್ತ–ಮುತ್ತ ಆವರಣದಲ್ಲಿ ಜಾಗವಿದ್ದರೆ ಗಿಡ ನೆಟ್ಟು ಬೆಳೆಸುವ ಕಾರ್ಯ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಈ ವರ್ಷದ ಘೋಷವಾಕ್ಯವಾದ 'ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು' ಎಂಬಂತೆ ಪ್ರತಿಯೊಬ್ಬರೂ ಪ್ಲಾಸ್ಟಿಕ್ ಬಳಕೆಯನ್ನು ಆದಷ್ಟು ಕಡಿಮೆಗೊಳಿಸಲು ಪಣತೊಡೋಣ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಟಿ.ಎಂ.ಸಿದ್ದೇಶ್ವರ ಬಾಬು ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರಪಂಚದಲ್ಲಿ ಸಕಲ ಜೀವಿಗಳ ಏಳಿಗೆಗೆ ಪರಿಸರವು ಅತ್ಯಾವಕಾಶವಾಗಿದ್ದು, ಪರಿಸರ ಇಲ್ಲದಿದ್ದರೆ ನಾವಿಲ್ಲ, ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದ್ದು, ಅದನ್ನು ರಕ್ಷಿಸಿ ಮುಂದಿನ ಪೀಳಿಗೆಗೆ ನೀಡೋಣ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ರೌಢ ಮತ್ತು ಕಾಲೇಜು ಮಟ್ಟದಲ್ಲಿ ಏರ್ಪಡಿಸಿದ್ದ ಪ್ರಬಂಧ ಮತ್ತು ಚಿತ್ರಕಲೆ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ, ಪ್ರಮಾಣ ಪತ್ರ ಮತ್ತು ಗಿಡ ವಿತರಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಆವರಣದಲ್ಲಿ ಗಣ್ಯರು ಗಿಡ ನೆಟ್ಟು ನೀರುಣಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಅಂತರ್ಜಲ ಇಲಾಖೆಯ ಹಿರಿಯ ಭೂ ವಿಜ್ಞಾನಿ ಅರುಣ್.ವಿ., ಬಳ್ಳಾರಿ ಬಿಸಿನೆಸ್ ಕಾಲೇಜಿನ ನಿರ್ದೇಶಕ ಅಮರ್ ರಾಜ್ ಭೂಪಾಲ್, ಕನ್ನಡ ಉಪನ್ಯಾಸಕ ಪ್ರಭಾಕರ್ ಜೋಯಿಸ್ ಮತ್ತು ಸ್ಮಯೋರ್ ಕಂಪನಿಯ ಸಿಒಒ ಮಂಜುನಾಥ, ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ವಿಭಾಗದ ತರಬೇತಿದಾರ ನಾಗರಾಜ ಸೇರಿದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮತ್ತು ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ: ವಿವಿಧ ಯೋಜನೆ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05–ಕರ್ನಾಟಕ ವಿರಶೈವ ಲಿಂಗಾಯತ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯಕ್ಕಾಗಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

*ಅರ್ಹತೆ:*

ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ವಿರಶೈವ ಲಿಂಗಾಯತ ಸಮುದಾಯ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು.

ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿರಬೇಕು. ನಿಗಮವು ಅನುಷ್ಠಾನಗೊಳಿಸುವ ಈ ಮೇಲ್ಕಂಡ ಯೋಜನೆಗಳಲ್ಲಿ ಸರ್ಕಾರದ ವಿವೇಚನಾ ಕೋಟಾ ಮತ್ತು ನಿಗಮದ ಅಧ್ಯಕ್ಷರು ಹಾಗೂ ನಿರ್ದೇಶಕರು ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಬಯಸುವವರೂ ಸಹ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಬಹುದು.

ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾನುಭಾವಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

*ಯೋಜನೆಗಳ ವಿವರ:*

ಶೈಕ್ಷಣಿಕ ಸಾಲ ಯೋಜನೆಯಡಿ ಬಸವ ಬೆಳಗು ಯೋಜನೆ (ಹೊಸದು) ಮತ್ತು (ನವೀಕರಣ), ವಿದೇಶ ವಿದ್ಯಾ ವಿಕಾಸ ಯೋಜನೆ (ಹೊಸದು), ಜೀವ ಜಲ ಯೋಜನೆ, ಕಾಯಕ ಕಿರಣ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಲಂಭಿ ಸಾರಥಿ ಯೋಜನೆ, ಸ್ವ ಸಹಾಯ ಸಂಘಗಳಿಗೆ ಉತ್ತೇಜನ, ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ (ಈ ಯೋಜನೆಯಡಿ ಅರ್ಜಿ ತಿತಿತಿ.ಇಚಿಣ್ಣುಚಿಟಇಚಿಡಿ.ಛಿಂಟ ನಲ್ಲಿ ಸಲ್ಲಿಸಬೇಕು).

ಅರ್ಜಿಗಳನ್ನು ಬೆಂಗಳೂರು–ಒನ್/ಕರ್ನಾಟಕ–ಒನ್/ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್‌ನಡಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂ.30 ಕೊನೆಯ ದಿನವಾಗಿದೆ.

ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kvldcl.karnataka.gov.in ಅಥವಾ ನಿಗಮದ ಕೇಂದ್ರ ಕಚೇರಿಯ ದೂ. 080 22865522, ಮೊ.9900012351,9900012352 ಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್ ನ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ: 08392–267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ: ಕೆ.ಇ.ಚಿದಾನಂದಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05–ಶ್ವಪರಿಸರ ದಿನಾಚರಣೆ ಅಂಗವಾಗಿ ಅರಣ್ಯ ಇಲಾಖೆ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಗುರುವಾರ ಸಸಿಗಳನ್ನು ನೆಡುವ ಮೂಲಕ ವಿಶ್ವ ಪರಿಸರ ದಿನ ಆಚರಿಸಲಾಯಿತು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಸಸಿ ನೆಟ್ಟು ನೀರು ಹಾಕಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು ಪ್ರಕೃತಿ ಮತ್ತು ಪರಿಸರದ ರಕ್ಷಣೆ ನಮ್ಮೆಲ್ಲರ ಹೊಣೆ, ಶುದ್ಧ ಗಾಳಿ, ಸರಿಯಾದ ಮಳೆ, ಬೆಳೆ ಆಗಬೇಕೆಂದರೆ ಹೆಚ್ಚು ಹೆಚ್ಚು ಗಿಡ ಮರಗಳನ್ನು ಬೆಳೆಸಬೇಕು ಮತ್ತು ಪ್ಲಾಸ್ಟಿಕ್ ನಿಂದ ಪರಿಸರಕ್ಕೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಆರ್‌ಎಫ್‌ಓ ಪರುಶುರಾಮ ಸೇರಿದಂತೆ ಜಿಲ್ಲಾ ಪಂಚಾಯತ್ ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

ಬಕ್ರೀದ್ ಹಬ್ಬ ಹಿನ್ನಲೆ: ಜಿಲ್ಲೆಯಾದ್ಯಂತ ಅನಧೀಕೃತ

# ಗೋವು, ಒಂಟೆ ಸಾಗಾಣಿಕೆ ಮತ್ತು ವಧೆ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05–ಬಕ್ರೀದ್ ಹಬ್ಬದ ನಿಮಿತ್ತ ಜಿಲ್ಲೆಯಲ್ಲಿ ಅನಧೀಕೃತ ಗೋವು, ಒಂಟೆಗಳ ಸಾಗಾಣಿಕೆ ಮತ್ತು ವಧೆ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೇಶದಲ್ಲೆಡೆ ಅನಧಿಕೃತ ಗೋವು, ಒಂಟೆಗಳ ಸಾಗಾಣಿಕೆ ಮತ್ತು ವಧೆಯನ್ನು ನಿಷೇಧಿಸಲಾಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬಕ್ರಿದ್ ಹಬ್ಬದ ಆಚರಣೆ ಪ್ರಯುಕ್ತ ಅಕ್ರಮ ಗೋವು, ಒಂಟೆಗಳ ಸಾಗಾಣಿಕೆ ಮತ್ತು ವಧೆಯನ್ನು ತಡೆಗಟ್ಟಲು ಸೂಕ್ತ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಎಲ್ಲಾ ಸಂಬಂಧಪಟ್ಟ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ.

ಜಿಲ್ಲೆಯಾದ್ಯಂತ ಇರುವ ಚೆಕ್‌ಪೋಸ್ಟ್‌ಗಳಲ್ಲಿ ಪಶುಸಂಗೋಪನಾ ಇಲಾಖೆ ಅಧಿಕಾರಿಗಳು, ಪೊಲೀಸ್ ಇಲಾಖೆ ಮತ್ತು ಆರ್.ಟಿ.ಓ ಇಲಾಖೆ ಅಧಿಕಾರಿಗಳು ಕಾರ್ಯನಿರ್ವಹಿಸಿ ಕಟ್ಟುನಿಟ್ಟಿನ ನಿಗಾವಹಿಸಲು ಸೂಚಿಸಿದ್ದಾರೆ.

ಹಾಗಾಗಿ ಅಕ್ರಮ ಗೋವು, ಒಂಟೆಗಳ ಸಾಗಾಣಿಕೆ ಮತ್ತು ವಧೆ ಕಂಡುಬಂದಲ್ಲಿ ಸಾರ್ವಜನಿಕರು ಪಶುಸಂಗೋಪನಾ ಇಲಾಖೆಯ ಮೊ.80392–275146 ಅಥವಾ 112 ಗೆ ಕರೆಮಾಡಿ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ತಿಳಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸವಿತಾ ಸಮಾಜ ಅಭಿವೃದ್ಧಿ ನಿಗಮ: ವಿವಿಧ ಸಾಲ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.05–ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯಕ್ಕಾಗಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ಅರ್ಹತೆ:** ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸವಿತಾ ಸಮಾಜ ಸಮುದಾಯ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು.

ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24 ಮತ್ತು 2024–25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾನುಭಾವಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

*ಯೋಜನೆಗಳ ವಿವರ:*

ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು–ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ (ಈ ಯೋಜನೆಯಡಿ ಅರ್ಜಿ ತಿತಿತಿ.ಇಚಿಣ್ಣುಚಿಟಇಚಿಡಿ.ಛಿಂಟ ನಲ್ಲಿ ಸಲ್ಲಿಸಬೇಕು).

ಅರ್ಜಿಗಳನ್ನು ಬೆಂಗಳೂರು–ಒನ್/ಕರ್ನಾಟಕ–ಒನ್/ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂ.30 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್ ನ ಸವಿತಾ ಸಮಾಜ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ 08392–267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಸಿತ ಕೃಷಿ ಸಂಕಲ್ಪ ಅಭಿಯಾನ ವಿಜ್ಞಾನಿಗಳಿಂದ ರೈತರಿಗೆ ಬಿತ್ತನೆಯ ಸೂಕ್ತ ತಳಿಗಳ ಮಾಹಿತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.5–ಮುಂಗಾರು ಬಿತ್ತನೆಗೆರೈತರುತಯಾರಿನಡೆಸುತ್ತಿದ್ದು, ಕೃಷಿ ಇಲಾಖೆ ಬಿತ್ತನೆಗೆ ಸೂಕ್ತ ತಳಿಗಳ ಮಾಹಿತಿಯನ್ನು ರೈತರಿಗೆ ನೀಡುವ ಸಂಬಂಧ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಆರಂಭಿಸಿದೆ.

ಕೃಷಿ ವಿಜ್ಞಾನ ಕೇಂದ್ರ, ತೆ–ೋಟಗಾರಿಕೆ ವಿಶ್ವವಿದ್ಯಾಲಯ ಹಾಗೂ ಕೃಷಿ ಇಲಾಖೆಗಳ ಸಹಯೋಗದಲ್ಲಿ ಬಾಗಲಕೋಟೆ ಹೋಬಳಿಯ ಬೇವಿನಮಟ್ಟಿ, ಕಿರಸೂರ ಹಾಗೂ ನೀರಲಕೇರಿ ಗ್ರಾಮಗಳಲ್ಲಿ ಬುಧವಾರ 'ವಿಜ್ಞಾನಿಗಳ ನಡೆ ರೈತರ ಕಡೆ ' ಕಾರ್ಯಕ್ರಮ ನಡೆಸಿ, ಮುಂಗಾರು ಹಂಗಾಮಿಗೆ ಬಿತ್ತನೆ ಮಾಡುವ ಬೀಜಗಳ ಸೂಕ್ತ ತಳಿಗಳ ಆಯ್ಕೆಗೆ ವಿಜ್ಞಾನಿಗಳು ರೈತರಿಗೆ ಮಾಹಿತಿ ನೀಡಿ ಪ್ರಾತ್ಯಕ್ಷಿಕೆ ಮೂಲಕ ಬೀಜೋಪಚಾರ ಮಾಡುವ ವಿಧಾನ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೃಷಿ ವಿಜ್ಞಾನಿ ಡಾ.ಭವ್ಯಾ, ರೈತರು ಮುಂಗಾರು ಹಂಗಾಮಿಗೆ ಬಿತ್ತನೆ ಮಾಡಬಹುದಾದ ಹೆಸರು, ತೆ–ೂಗರಿ, ಈರುಳ್ಳಿ, ಮೆಣಸಿನಕಾಯಿ ಬೆಳೆಗಳ ಸೂಕ್ತ ತಳಿಗಳನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಹೇಳಿ, ಸಮಗ್ರ ಬೇಸಾಯ ಕ್ರಮಗಳು ಮಾಹಿತಿ ಒದಗಿಸಿದರು.

ಇನ್ನೋರ್ವ ವಿಜ್ಞಾನಿ ಡಾ.ಸಿದ್ದಪ್ಪ ಅಂಗಡಿ, ಮಣ್ಣು ಪರೀಕ್ಷೆಯ ಮಹತ್ವ ಹಾಗೂ ಮಣ್ಣು ತೆಗೆಯುವ ವಿಧಾನವನ್ನು ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿದರು. ಹವಾಮಾನ ತಜ್ಞ ಬಸವರಾಜ, ಮುಂಗಾರು ಹಂಗಾಮಿಗೆ ಬೇಕಿರುವ ಮಳೆಯ ಪ್ರಮಾಣ ಮತ್ತು ಮುಂದಿನ 15.ದಿನಗಳ ಮಳೆಯ ಮಾಹಿತಿ ನೀಡಿದರು.

ಕೃಷಿ ಇಲಾಖೆಯ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕಿ ಸ್ನೇಹಾ ಕರಣಿ, ಆತ್ಮ ಉಪಯೋಜನಾ ನಿರ್ದೇಶಕ ವಿವೇಕ ಪಾಟೀಲ, ರೈತರಾದ ಷಣ್ಮುಖ ಅಂಗಡಿ, ಹಣಮಂತ ಮಳಗಾವಿ, ರಂಗಪ್ಪ ಇಂಗಳಗಿ, ರಂಗಪ್ಪ ಪೂಜಾರಿ, ತಿಪ್ಪಣ್ಣ ಮಜ್ಜಗಿ, ವಿಠ್ಠಲ ವಾಲೀಕಾರ, ಗದಿಗೆಪ್ಪ ಕರಡಿ ಪಾಲ್ಗೊಂಡಿದ್ದರು.

# ಶಿರೂರಿನಲ್ಲಿ ವಿಶ್ವ ಪರಿಸರ ದಿನಾಚರಣೆ ಪ್ಲಾಸ್ಟಿಕ್ ಬಳಕೆಯ ಅವಲಂಬನ ಬಿಡಿ–ಪಿಎಸ್‌ಐ ಸಂಗಳದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.5–ಪರಿಸರ ವ್ಯವಸ್ಥೆಯ ಮೇಲೆ ಬಹಳಷ್ಟು ದುಷ್ಪರಿಣಾಮ ಬೀರುವ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ಕೈಬಿಡಬೇಕು. ಆ ಮೂಲಕ ಪರಿಸರ ಸಂರಕ್ಷಣೆ ಮಾಡಬೇಕು ಎಂದು ಬಾಗಲಕೋಟೆ ಗ್ರಾಮೀಣ ಪೋಲಿಸ್ ಠಾಣೆಯ ಪಿಎಸ್‌ಐ ಶರಣಬಸಪ್ಪ ಸಂಗಳದ ಹೇಳಿದರು.

ತಾಲೂಕಿನ ಶಿರೂರಿನಲ್ಲಿ ಗುರುವಾರ ಸ್ಥಳೀಯ ಸಿದ್ದಲಿಂಗೇಶ್ವರ ಗೆಳೆಯರ ಬಳಗ, ಮಾಜಿ ಸೈನಿಕರು ಹಾಗೂ ಪಟ್ಟಣ ಪಂಚಾಯತ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಾವು ಪರಿಸರವನ್ನು ರಕ್ಷಿಸಿದರೆ ನಮಗೆ ಉತ್ತಮ ಆರೋಗ್ಯ ಲಭಿಸುತ್ತದೆ. ಹೀಗಾಗಿ ಉತ್ತಮ ಆರೋಗ್ಯಕ್ಕಾಗಿ ಪರಿಸರವನ್ನು ಉಳಿಸುವ ಕೆಲಸವನ್ನು ಮಾಡಬೇಕಿದೆ. ಪ್ಲಾಸ್ಟಿಕ್ ಬಳಕೆಯ ಅವಲಂಬನೆಯಿಂದ ಹೊರಬರಬೇಕಿದೆ ಎಂದ ಸಂಗಳದ, ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮ ತಿಳಿದರೆ ಆರೋಗ್ಯವಂತ ಬದುಕು ನಮ್ಮದಾಗುತ್ತದೆ ಎಂದರು.

> ಕಳೆದ ತಿಂಗಳು ಸಿದ್ದಲಿಂಗೇಶ್ವರ ಗೆಳೆಯರ ಬಳಗ ಕ್ರಿಕೆಟ್ ಪಂದ್ಯಾವಳಿ ಏರ್ಪಡಿಸಿ ಪಂದ್ಯಾವಳಿಯಲ್ಲಿ ಪತನಗೊಂಡ ವಿಕೆಟ್(314ವಿಕೆಟ್)ಗೆ ಒಂದು ಸಸಿ ನೆಡುವ ಸಂಕಲ್ಪ ಮಾಡಿತ್ತು. ಅದರಂತೆ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬುಧವಾರದಿಂದ ಗ್ರಾಮದ ರುದ್ರಭೂಮಿ, ಶಾಲಾ–ಕಾಲೇಜು ಮತ್ತು ರಸ್ತೆ ಪಕ್ಕದಲ್ಲಿ ಗಿಡಗಳನ್ನು ನೆಡುವ ಕಾರ್ಯವನ್ನು ಗೆಳೆಯರ ಬಳಗ ಮಾಜಿ ಸೈನಿಕರೊಡಗೂಡಿ ಮಾಡುತ್ತಿದೆ.

ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ಮಾತನಾಡಿ, ಪರಿಸರ ದಿನಾಚರಣೆ ಕೇವಲ ನಿಮಿತ್ತಕ್ಕೆ ಮಾತ್ರ ಆಗಬಾರದು. ಪ್ರತಿಯೊಬ್ಬರು ಗಿಡ ನೆಟ್ಟು ಬೆಳೆಸುವ ಜವಾಬ್ದಾರಿ ತೆಗೆದುಕೊಳ್ಳಬೇಕು. ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಧ್ಯೇಯವಾಗಬೇಕು ಎಂದು ಹೇಳಿದರು. ಬಸವರಾಜ ಬಿಲ್ಲಾರ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿ ತನ್ನ ಹುಟ್ಟುಹಬ್ಬದ ಸವಿನೆನಪಿಗೆ ಒಂದು ಸಸಿ ನೆಟ್ಟು ಅದನ್ನು ಬೆಳೆಸುವ ಸಂಕಲ್ಪ ಮಾಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಿದ್ದೇಶ್ವರ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ತಮ್ಮಣ್ಣ ಗಿರಿಜಾ, ಕ್ರಿಕೆಟ್ ಪಂದ್ಯಾವಳಿ ನಡೆಸಿ ವಿಕೆಟ್‌ಗೊಂದು ಸಸಿ ನೆಡುವ ಕಾರ್ಯ ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಪಟ್ಟಣ ಪಂಚಾಯತಿ ನಾಮನಿರ್ದೇಶಿತ ಸದಸ್ಯರಾದ ಹನಮಂತ ಆಡಿನ, ಸಿದ್ದಪ್ಪ ಗಾಳಿ, ರಂಗಪ್ಪ ಮಳ್ಳಿ, ಮಾಜಿ ಸೈನಿಕ ಹನಮಂತ ಬೊಮ್ಮನಹಳ್ಳಿ, ಮುಖ್ಯಾಧ್ಯಾಪಕ ಎಲ್.ಟಿ.ಪೂಜಾರ, ಸಂಜಯ ನಡುವಿನಮನಿ, ಸಿದ್ದಲಿಂಗೇಶ್ವರ ಗೆಳೆಯರ ಬಳಗದ ರವಿ ಮೇಟಿ, ಅನ್ವರ ಅಮರಗೋಳ, ಸಿದ್ದು ಅಂಗಡಿ ವೇದಿಕೆಯಲ್ಲಿದ್ದರು.

ನಂತರ ಪ್ರೌಢಶಾಲೆಯ ಆವರಣದಲ್ಲಿ ವಿವಿಧ ಬಗೆಯ ಸಸಿಗಳನ್ನು ನೆಡಲಾಯಿತು. ಮಾಜಿ ಸೈನಿಕರು, ಗ್ರಾಮಸ್ಥರು, ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಹುನಗುಂದ, ಇಳಕಲ್ಲಗೆ ಸಿಇಓ ಭೇಟಿ–ಕಾಮಗಾರಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.5–ಜಿಲ್ಲೆಯ ಹುನಗುಂದ ಮತ್ತು ಇಲಕಲ್ಲ ತಾಲೂಕಿನ ವಿವಿಧ ಗ್ರಾಮಗಳಿಗೆ ಗುರುವಾರ ಭೇಟಿ ನೀಡಿದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಕಟ್ಟಡ ಕಾಮಗಾರಿ, ಶಾಲೆ, ಆಸ್ಪತ್ರೆ, ಚರಂಡಿ ನಿರ್ಮಾಣ ಕಾಮಗಾರಿ ಗುರುವಾರ ಪರಿಶೀಲನೆ ನಡೆಸಿದರು. ಹುನಗುಂದ ತಾಲೂಕಿನ ಹೊನಗನಹಳ್ಳಿ ಗ್ರಾಮದಲ್ಲಿ ನೂತನ ಕಟ್ಟಡ, ಹಿರೇಬಾದವಾಡಗಿಯಲ್ಲಿ ನೂತನ ಗ್ರಾಮ ಪಂಚಾಯತ ಕಟ್ಟಡ ಕಾಮಗಾರಿ, ಯಡಹಳ್ಳಿ ಗ್ರಾಮದ ಗ್ರಾ.ಪಂ ಕಟ್ಟಡ, ನಾಗೂರ ಗ್ರಾಮದ ಚರಂಡಿ ನಿರ್ಮಾಣ ಕಾಮಗಾರಿ, ಇಲ್ಲಾಳ ಗ್ರಾಮದ ಬಹು ಗ್ರಾಮ ಕುಡಿಯುವ ನೀರಿನ ಘಟಕಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿ ಉತ್ತಮ ಗುಣಮಟ್ಟದ ಸಾಮಗ್ರಿಗಳನ್ನು ಬಳಸಿಕೊಂಡು ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

ನಂತರ ಬೇವಿನಮಟ್ಟಿ ಗ್ರಾಮದ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿದ ಸಿಇಓ ಶಾಲಾ ಮಕ್ಕಳ ಜೊತೆ ಸಂವಾದ ನಡೆಸಿ ವಿಶ್ವ ಪರಿಸರ ದಿನದ ಪ್ರಯುಕ್ತ ಮಕ್ಕಳೊಂದಿಗೆ ಸಸಿ ನೆಟ್ಟರು. ಇಲಕಲ್ಲಿನ ಸರಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜು ಹಾಗೂ ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಸತಿ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಮೂಲ ಸೌಕರ್ಯಗಳಾದ ತರಗತಿ ಕೊಠಡಿ, ಬಾಲಕ, ಶೌಚಾಲಯ, ಕುಡಿಯುವ ನೀರಿನ ಸೌಲಭ್ಯ ಸೇರಿದಂತೆ ಇತರೆ ಸೌಕರ್ಯಗಳ ಪರಿಶೀಲಿಸಿ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಲು ಸೂಚನೆ ನೀಡಿದರು.

ನಂತರ ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸಿ ನಿಲಯಗಳಲ್ಲಿ ಕುಂದು ಕೊರತೆ ಬಗ್ಗೆ ಚರ್ಚೆ ನಡೆಸಿದರು. ಮಧ್ಯಾಹ್ನದ ಬಿಸಿ ಊಟ ಯೋಜನೆಯಡಿ ಮಕ್ಕಳಿಗೆ ನೀಡುತ್ತಿರುವ ಆಹಾರ ಉತ್ತಮ ಗುಣಮಟ್ಟ ಹಾಗೂ ಶುಚಿತ್ವದಿಂದ ಕೂಡಿರಬೇಕು ಎಂದರು.

ಇಲಕಲ್ಲ ತಾಲೂಕಾ ಆಸ್ಪತ್ರೆಗೆ ಭೇಟಿ ನೀಡಿದ ಸಿಇಓ ಕುರೇರ, ಕೋವಿಡ್ ಮುಂಜಾಗ್ರತೆಯಾಗಿ ಕೈಗೊಂಡ ಕ್ರಮಗಳ ಕುರಿತು ಪರಿಶೀಲನೆ ನಡೆಸಿದರು. ಆಸ್ಪತ್ರೆಯಲ್ಲಿರುವ ರೋಗಿಗಳ ಆರೋಗ್ಯವನ್ನು ವಿಚಾರಿಸಿದರು. ಇಲಕಲ್ಲ ಡಯಟ್ ಹಾಗೂ ಪ್ರಾಥಮಿಕ ಶಾಲೆಗಳಿಗೆ ಭೇಟಿ ನೀಡಿ ಪಾಲಕರ ಸಭೆಯಲ್ಲಿ ಪಾಲ್ಗೊಂಡು ಮಕ್ಕಳೊಂದಿಗೆ ಸಸಿಗಳನ್ನು ನೆಟ್ಟರು.

ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಮಲ್ಲನಗೌಡ ಬಿರಾದಾರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಕೆ.ಡಿ.ನಾಯ್ಕ, ಕಾರ್ಯನಿರ್ವಾಹಕ ಅಭಿಯಂತರ ಸೋಮು ಅಂಟ–ರದಾಣಿ ಉಪಸ್ಥಿತರಿದ್ದರು.

# ವಿಶ್ವ ಪರಿಸರ ದಿನಾಚರಣೆ–ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ ಬದುಕಿನ ವಿಧಾನ ಪರಿಸರಕ್ಕೆ ಪೂರಕವಾಗಿರಲಿ :ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.5–ನಮ್ಮ ಬದುಕಿನ ವಿಧಾನವನ್ನು ಪರಿಸರಕ್ಕೆ ಪೂರಕವಾಗಿ ಬಳಸಿಕೊಂಡರೆ ಮಾತ್ರ ಮುಂದಿನ ಪೀಳಿಗೆ ನೆಮ್ಮದಿಯಿಂದ ಬದುಕಲು ಸಾಧ್ಯವೆಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ನವನಗರದ ಆದರ್ಶ ವಿದ್ಯಾಲಯದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಅರಣ್ಯ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಹಾಗೂ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಜೀವಿತದ ಕೊನೆಯವರೆಗೂ ಪರಿಸರಕ್ಕೆ ಕೃತಜ್ಞತಾ ಪೂರ್ವಕವಾಗಿ ಇರಬೇಕಾಗುತ್ತದೆ. ಪರಿಸರ ಇಲ್ಲದೇ ಯಾವ ಜೀವಿಯೂ ಉಸಿರಾಡಲು ಸಾಧ್ಯವಾಗುವದಿಲ್ಲವೆಂದರು.


ದೈನಂದಿನ ಬದುಕಿನಲ್ಲಿ ಪ್ಲಾಸ್ಟಿಕ್ ಬಳಕೆ ಕಡಿಮೆಯಾಗಬೇಕಿದೆ. ಪ್ರತಿ ಊರಲ್ಲಿ ಪ್ಲಾಸ್ಟಿಕ ರಾಶಿ ಸ್ವಾಗತಿಸುತ್ತದೆ. ನೀರಿನ ಮೂಲ ಕೊಳದ ಸಮೀಪ ಪ್ಲಾಸ್ಟಿಕ್ ತೊಟ್ಟಿಗಳನ್ನು ಮಾಡಿರುತ್ತಾರೆ. ಮಾನವ ಕುಲ ಮಾತ್ರ ಪರಿಸರಕ್ಕೆ ವಿಮುಖವಾಗಿ ಕೆಲಸ ಮಾಡುತ್ತಿದೆ. ನಾವೆಲ್ಲರೂ ಪರಿಸರಕ್ಕೆ ಋಣಿಯಾಗಿದ್ದು, ಪ್ಲಾಸ್ಟಿಕ್ ಬಳಕೆ ಮಾಡುವದನ್ನು ಕಡಿಮೆ ಮಾಡಬೇಕಿದೆ ಎಂದು ಜಾನಕಿ ತಿಳಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್ ಪಿ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ ಮಾತನಾಡಿ, ವಿಶ್ವ ಪರಿಸರ ದಿನಾಚರಣೆ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲು ಆಚರಿಸಲಾಗುವ ಒಂದು ಜಾಗತಿಕ ಕಾರ್ಯಕ್ರಮವಾಗಿದೆ. ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು ಈ ವರ್ಷದ ಥೀಮ್ ಆಗಿದ್ದು, ಪರಿಸರ ಸಂರಕ್ಷಣೆಯು ನಮ್ಮ ಗೃಹ, ಸಮುದಾಯಗಳು ಮತ್ತು ಆರ್ಥಿಕತೆಯನ್ನು ಕಾಪಾಡಿಕೊಳ್ಳಲು ಮೂಲಾಧಾರವಾಗಿವೆ. ಇದನ್ನು ರಕ್ಷಿಸುವ ಅಗತ್ಯತೆ ಇದೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿ ಡಾ.ಅನುಲಕುಮಾರ ತಳಗೇರಿ, ಇಂದು ಮಕ್ಕಳು, ಯುವಕರು ಹಾಗೂ ಸಾರ್ವಜನಿಕರಲ್ಲಿ ಪರಿಸರ ಜಾಗೃತಿ ಮೂಡಿಸುವುದು ಅವಶ್ಯವಾಗಿದೆ ಎಂದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಸಾಮಾಜಿಕ ಅರಣ್ಯ ವಿಭಾಗದ ಉಪ ಸಂರಕ್ಷಣಾಧಿಕಾರಿ ಸಿ.ಜಿ.ಮಿರ್ಜಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಸಹಾಯಕ ಅರಣ್ಯ ಅಧಿಕಾರಿ ರೂಪಾ ವಿ, ಆದರ್ಶ ವಿದ್ಯಾಲಯದ ಮುಖ್ಯೋಪಾದ್ಯಾಯರು ಹಾಗೂ ಇತರರು ಉಪಸ್ಥಿತರಿದ್ದರು.

# ಕಳ್ಳಬಟ್ಟಿ ನಿರ್ಮೂಲನೆಗೆ ಜಾಗೃತಿ ಅಗತ್ಯ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.5–ಕಳ್ಳಬಟ್ಟಿ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಜಿಲ್ಲೆಯಲ್ಲಿ ಕಳ್ಳಬಟ್ಟಿ ಸಾರಾಯಿ ಸಂಪೂರ್ಣ ನಿರ್ಮೂಲನೆ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಕಳ್ಳಬಟ್ಟಿ ನಿರ್ಮೂಲನೆ ಕುರಿತು ನಡೆದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮುಚಖಂಡಿ ತಾಂಡಾ–1 ಹಾಗೂ ಅಮೀನಗಡ ತಾಂಡಾದಲ್ಲಿ ಮಾತ್ರ ಕಳ್ಳಬಟ್ಟಿ ಕೇಂದ್ರಗಳು ಇರುತ್ತವೆ. ಈ ಭಾಗದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಕೈಗೊಂಡು ಕಳ್ಳಬಟ್ಟಿ ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕು ಎಂದರು.

ಇಂತಹ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಗುರುತಿಸಿ ಬೇರೆ ಉದ್ಯೋಗ ಕೈಗೊಳ್ಳಲು ಅಗತ್ಯ ತರಬೇತಿ ನೀಡುವ ಕೆಲಸವಾಗಬೇಕು. ಅಲ್ಲದೇ ಸರಕಾರದಿಂದ ದೊರೆಯುವ ಸೌಲಭ್ಯಗಳನ್ನು ಅವರಿಗೆ ದೊರಕಿಸಿ ಕೊಡಬೇಕು. ಅಂದಾಗ ಮಾತ್ರ ಅವರ ಆರ್ಥಿಕಮಟ್ಟ ಉತ್ತಮವಾಗಿರಿಸಲು ಸಾಧ್ಯವಾಗುತ್ತದೆ. ಹಂತಹಂತವಾಗಿ ಕಳ್ಳಬಟ್ಟಿ ಸರಾಯಿ ಸಂಪೂರ್ಣವಾಗಿ ನಿರ್ಮೂಲನೆಗೆ ಕ್ರಮವಹಿಸಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಜಿಲ್ಲೆಯಲ್ಲಿ ಕಳ್ಳಬಟ್ಟಿ ಸಂಪೂರ್ಣವಾಗಿ ನಿರ್ಮೂಲನೆ ಆಗಬೇಕು. ಕುಡಿತ ಕಡಿಮೆ ಆದರೆ ಮಾತ್ರ ಕಾನೂನು ಸುವ್ಯವಸ್ಥೆ ಚೆನ್ನಾಗಿರಲು ಸಾಧ್ಯವಾಗುತ್ತದೆ. ಕಳ್ಳಬಟ್ಟಿ ಕೇಂದ್ರ ಹೊಂದಿರುವ ಮುಚಖಂಡಿ ಹಾಗೂ ಅಮೀನಗಡ ಪಟ್ಟಣದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಅಬಕಾರಿ, ಪೊಲೀಸ್, ಅರಣ್ಯ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಕೈಗೊಳ್ಳಲು ತಿಳಿಸಿದರು. ಗ್ರಾಮ ವಾಸ್ತವ್ಯ ಕಾರ್ಯಕ್ರಮಗಳನ್ನು ಸಹ ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದರು.

ಅಬಕಾರಿ ಉಪ ಆಯುಕ್ತ ಹನಮಂತಪ್ಪ ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಜುಲೈ–2024 ರಿಂದ ಇಲ್ಲಿಯವರೆಗೆ 1903 ದಾಳಿಗಳನ್ನು ನಡೆಸಲಾಗಿದ್ದು, 495 ಪ್ರಕರಣಗಳನ್ನು ದಾಖಲಿಸಿ 495 ಆರೋಪಿಗಳನ್ನು ಬಂಧಿಸಲಾಗಿದೆ. 9868 ಲೀಟರ ಮದ್ಯ, 18 ಲೀ. ಹೊರ ರಾಜ್ಯದ ಮದ್ಯ, 4 ಲೀಟರ್ ಬೀಯರ್, 39 ಲೀ ಸೇಂದಿ, 467 ಲೀ. ಕಳ್ಳಬಟ್ಟಿ ಸಾರಾಯಿ, 585 ಲೀಟರ ಬೆಲ್ಲದ ಕೊಳೆ ಹಾಗೂ 1 ಅಟೋ, 1 ಕಾರು, 21 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಬಾಗಲಕೋಟೆ ಶಹರದಲ್ಲಿ ಬೆಲ್ಲ ಮಾರಾಟ ಮಾಡುತ್ತಿರುವ ಮಾಹಿತಿಯನ್ನು ಕಲೆ ಹಾಕುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ಕುಂಬಾರಿಕೆ ನಡೆಸುತ್ತಿರುವ ವ್ಯಕ್ತಿಗಳಿಗೆ ಖುದ್ದಾಗಿ ಸಂಪರ್ಕಿಸಿ ಕಳ್ಳಬಟ್ಟಿ ತಯಾರಿಕೆಗೆ ಗಡಿಗೆಯ ಮೇಲೆ ಮುಚ್ಚುವ ಉಪಕರಣ ತಯಾರಿಸದಂತೆ ನೋಟಿಸ್ ನೀಡಲಾಗಿದೆ. ತಹಶೀಲ್ದಾರ ಅಧ್ಯಕ್ಷತೆಯಲ್ಲಿ ರಚಿಸಿದ ಸ್ಥಾಯಿ ಸಮಿತಿ ಸಭೆಗಳನ್ನು ಜರುಗಿಸಿ ಕಳ್ಳಬಟ್ಟಿ ಸಂಪೂರ್ಣ ನಿರ್ಮೂಲನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಚಟುವಟಿಕೆಯಲ್ಲಿರುವ ಹಾಗೂ ವೀಚಕ್ಷಣೆಯಲ್ಲಿರುವ ಕಳ್ಳಬಟ್ಟಿ ಕೇಂದ್ರಗಳ ಮೇಲೆ ಸಾಮೂಹಿಕವಾಗಿ ಅಬಕಾರಿ ದಾಳಿಗಳನ್ನು ಕೈಗೊಳ್ಳಲು ತಂಡಗಳನ್ನು ರಚಿಸಲಾಗಿದೆ. ರಜಾ ದಿನಗಳಲ್ಲಿಯೂ ಅಧಿಕಾರಿ ಹಾಗೂ ಸಿಬ್ಬಂದಿಗಳಿಂದ ಗಸ್ತು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಅಬಕಾರಿ ಉಪ ಅಧೀಕ್ಷಕ ಅನೀಲಕುಮಾರ ನಂದೇಶ್ವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಆರ್.ಎಲ್.ಹೊಸಮನಿ ಸೇರಿದಂತೆ ಆಯಾ ತಾಲೂಕಿನ ಅಬಕಾರಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಸಾಪ ವತಿಯಿಂದ ಕೃಷ್ಣರಾಜ್ ಒಡೆಯರ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.5–ಸರ್ವ ಜನಾಂಗದ ಅಭಿವೃದ್ಧಿಗೆ ಶ್ರಮಿಸುವ ಮೂಲಕ ಸಮ ಸಮಾಜ ನಿರ್ಮಾಣ ಮಾಡುವ ಕನಸು ಕಂಡವರು ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ ಎಂದು ಬಾದಾಮಿಯ ಟಿಎಪಿಎಂಎಸ್ ನಿರ್ದೇಶಕ ರಾಘವೇಂದ್ರ ಮೆಳ್ಳಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಹಮ್ಮಿಕೊಂಡ ನಾಲ್ವಡಿ ಕೃಷ್ಣರಾಜ ಒಡೆಯರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರ ಅವರ ಕಾಲದ ಯೋಜನೆಗಳು ಜನಮಾನಸದಲ್ಲಿ ಉಳಿದಿವೆ ಎಂದರು.

ವಿಜಯಶ್ರೀ ಮುರನಾಳ ಉಪನ್ಯಾಸ ನೀಡಿದರು. ಮುಖ್ಯ ಅತಿಥಿಯಾಗಿ ಬಾದಾಮಿ ಟಿಎಪಿಎಂಎಸ್ ನಿರ್ದೇಶಕ ಜಿ.ಆಯ್.ಸರಕಾರ, ಬೀಳಗಿ ಶಿಕ್ಷಣ ಸಂಯೋಜಕ ಜಗದೀಶ ಖೋತ ಭಾಗವಹಿಸಿದ್ದರು. ನಿವೃತ್ತ ಶಿಕ್ಷಣಾಧಿಕಾರಿ ವಿ.ಬಿ.ಗೋವಿಂದಪ್ಪನವರ, ಬಾಗಲಕೋಟೆ ಜಿಲ್ಲಾ 11ನೇ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷ ತಾತಾಸಾಹೇಬ ಬಾಂಗಿ, ಡಾ.ಉಮಾ ಅಕ್ಕಿ, ಡಾ.ಗೀತಾ ದಾನಶೆಟ್ಟಿ, ಪುಂಡಲಿಕ ಹಲಕುರ್ಕಿ, ಅಮರೇಶ ಕೊಳ್ಳಿ, ಸಿ.ಕೆ.ಬೆನಕಟ್ಟಿ, ನಾವಿ ಗುರುಗಳು ಉಪಸ್ಥಿತಿರಿದ್ದರು. ಪ್ರಿಯಾ ಕಟ್ಟಿ ನಿರೂಪಿಸಿದರು. ಎಚ್.ಬಿ.ಗೌಡರ ಪ್ರಾರ್ಥಿಸಿದರು.



ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ತಂಡದ ಗೆಲುವಿನ ಸಂಭ್ರಮ ಆಚರಣೆ ವೇಳೆ ನೂಕುನುಗ್ಗಲು ಉಂಟಾಗಿ ಗಾಯಗೊಂಡಿದ್ದ ಗಾಯಾಳುಗಳನ್ನು ಡಾ. ಶರಣಪ್ರಕಾಶ ಪಾಟೀಲ್ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಬೌರಿಂಗ್ ಆಸ್ಪತ್ರೆ ಹಾಗೂ ವೈದೇಹಿ ಆಸ್ಪತ್ರೆಗೆ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸಿ, ಮೃತರ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

# ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಮಕ್ಕಳು ಸಸಿ ನೆಟ್ಟರು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಗುರುವಾರ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಗಿಡ ನೆಡುವ ಕಾರ್ಯಕ್ರಮದಲ್ಲಿ ಮಕ್ಕಳು ಸಸಿ ನೆಟ್ಟು ಸಂಭ್ರಮದಿಂದ ವಿಶ್ವ ಪರಿಸರ ದಿನಾಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಮಾತನಾಡಿ, ಸಸಿ ನೆಟ್ಟು ಮರವಾಗಿ ಬೆರಳೆಸುವುದರಿಂದ ಉತ್ತಮ ಪರಿಸರಕ್ಕೆ ನಾವೂ ಪರೋಕ್ಷ ಕೊಡುಗೆ ನೀಡಿದಂತಾಗುತ್ತದೆ ಎಂದು ಶಾಲೆ ಹೇಳಿದರು.

ಭಾಷಣ–ಪೋಷಣೆಗಳಿಂದ ಪರಿಸರ ಸಂರಕ್ಷಣೆ ಸಾಧ್ಯವಿಲ್ಲ. ಪರಿಸರ ಸಂರಕ್ಷಣೆಗೆ ನೂಜಕಳಕಳಿ ಮತ್ತು ಪ್ರಾಮಾಣಿಕ ಪ್ರಯತ್ನ ಸಹ ಅಗತ್ಯ. ನೆಟ್ಟ ಸಸಿ ಮರವಾಗಿ ಬೆಳೆದಾಗ ಹಲವು ಬಗೆಯಲ್ಲಿ ಉಪಕಾರಿಯಾಗುತ್ತದೆ ಎಂದರು.

ವಿವೇಕಾನಂದ ಟ್ರಸ್ಟ್ ಅಧ್ಯಕ್ಷ ಸಂಗಮೇಶ್ವರ ಬಿರಾದಾರ ಮಾತನಾಡಿದರು. ಸಂಗೀತಾ ಕಾಂಬಳೆ, ಶೀತಲ ಹಂಗರಗೆ, ಅಂಜಲಿ ಕಾಂಬಳೆ, ಮಲ್ಲಿಕಾರ್ಜುನ ಮೇತ್ರೆ, ಸುದೀಪ, ದಿನೇಶ, ಸೌಮ್ಯ, ಚೇತನ ಜ್ಞಾನ ಲತಾ, ಚರಣ, ಮಹಾದೇವ, ಸಾಯಿನಾಥ, ಸುಮೀತ, ಸ್ನೇಹಾ, ಸೌರ್ಯ ಹಂಗರಗೆ, ಮಡಿವಾಳಪ್ಪ ಹಾಗೂ ಅನೇಕ ಮುದ್ದು ಮಕ್ಕಳಿದ್ದರು.

# ವಿಶ್ವ ಪರಿಸರ ದಿನದ ಅಂಗವಾಗಿ ವಿವಿಧ ಅಭಿವೃದ್ಧಿ ಕಾರ್ಯಗಳ ತರಬೇತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ. ಜು.05. ತಾಲೂಕಿನ ಕಾಕಲವಾರ ಗ್ರಾಮ ಪಂಚಾಯತ್ ನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಯಾದಗಿರಿ

ಜಲ ಜೀವನ್ ಮಿಷನ್ (ಎಎಒ) ಮತ್ತು ಸ್ವಚ್ಛ ಭಾರತ್ ಮಿಷನ್ (ಗ್ರಾ)(ಖಃಒ)ಯೋಜನೆಗಳಡಿಯಲ್ಲಿ ಮಾಹಿತಿ ಶಿಕ್ಷಣ ಮತ್ತು ಸಂವಹನ



ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಕಾರ್ಯಕ್ರಮಗಳ ತರಬೇತಿ ಶಿಬಿರ ಆಯೋಜಿಸಲಾಗಿತ್ತು.

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಮಾಹಿತಿ ಕುರಿತು ಮತ್ತು ನೀರಿನ ಪರೀಕ್ಷೆ ತರಬೇತಿ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಅಧಿಕಾರಿಗಳು ಗ್ರಾಮ ಪಂಚಾಯತ್ ನ ಎಲ್ಲಾ ಗ್ರಾಮಗಳ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಮಾನ್ಯ ಅಧ್ಯಕ್ಷರು, ಕಾರ್ಯದರ್ಶಿಗಳು, ಪಂಪ್ ಆಪರೇಟರ್ ಗಳು, ಸಿಬ್ಬಂದಿಗಳು ಹಾಗೂ ಸದಸ್ಯರುಗಳಿಗೆ ತರಬೇತಿಯಲ್ಲಿ ಪಾಲ್ಗೊಂಡಿದ್ದರು.

# ವಿವಿಧ ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂನ್.05–ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ವಿವಿಧ ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಲಬುರಗಿ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಜೂ.12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಜಾಥಾ-ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂ.5: ಇದೇ ಜೂನ್.12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಬೃಹತ್ ಜಾಥಾ ಮತ್ತು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. ಈ ಜಾಥಾವು ಜಿಲ್ಲಾಧಿಕಾರಿ ಕಚೇರಿಯಿಂದ ಭಗತಸಿಂಗ್ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಕೆ.ಎಂ. ಕರಿಯಪ್ಪ ವೃತ್ತದ ಮೂಲಕ ರಂಗಮಂದಿರ ತಲುಪುವುದು ನಂತರ 10 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಜಾಥಾದಲ್ಲಿ 600 ಪ್ರೌಢ ಶಾಲಾ ಮಕ್ಕಳು ಭಾಗವಹಿಸುವಂತೆ ನೋಡಿಕೊಳ್ಳಲು ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು. ಈ ಜಾಥಾದಲ್ಲಿ ಅಂಗನವಾಡಿ ಮೇಲ್ವಿಚಾರಕಿಯರು ಮತ್ತು ಕಾರ್ಯಕರ್ತೆಯರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಧಾಭಾ ಮತ್ತು ಕಾರ್ಖಾನೆ ಮಾಲೀಕರು ಭಾಗವಹಿಸುವಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಕಾರ್ಯಕ್ರಮ ಅಂಗವಾಗಿ ಪ್ರಬಂಧ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಭಾಷಣ, ಕಿರು ನಾಟಕ ಪ್ರದರ್ಶನ ನಡೆಸುವಂತೆ ತಿಳಿಸಿದರು.

ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬೆಳಿಗ್ಗೆ 11 ಗಂಟೆಗೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು



ಪ್ರಮಾಣ ವಚನ ಬೋಧಿಸಬೇಕು ಮತ್ತು ಜಿಲ್ಲೆಯ ಪ್ರತಿ ಗ್ರಾಮಗಳಲ್ಲಿ ಪಂಚಾಯಿತಿ ವತಿಯಿಂದ ಡಂಗೂರ ಸಾರಿಸುವುದು ಹಾಗೂ ಎಲ್ಲಾ ಗ್ರಾಮ ಪಂಚಾಯಿತಿ, ಪುರಸಭೆ, ನಗರಸಭೆ ವತಿಯಿಂದ ಕಸ ವಿಲೇವಾರಿ ವಾಹನಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ನಿರ್ಮೂಲನೆ ಕುರಿತು ಧ್ವನಿವರ್ಧಕ ಮೂಲಕ ಘೋಷಣೆ ಕೂಗಿಸಬೇಕೆಂದರು.

ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಅಥವಾ ತಾಲೂಕಾ ಟಾಸ್ಕ್‌ಫೋರ್ಸ್ ಸಮಿತಿ ಅಧಿಕಾರಿಗಳು ಜೂನ್ 13 ರಿಂದ ಜೂನ್.30 ವರೆಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ರಕ್ಷಣಾ ಅಭಿಯಾನ ಕಾರ್ಯಕ್ರಮ ಆಯೋಜಿಸಲು ಅಧಿಕಾರಿಗಳಿಗೆ ಸೂಚಿಸಿದರು. ನಂತರ ಜಿಲ್ಲಾಧಿಕಾರಿಗಳು ಜಿಲ್ಲಾ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿ ಜಿಲ್ಲೆಯಲ್ಲಿ ಎಲ್ಲೇ ಬಾಲಕಾರ್ಮಿಕರು ಕಂಡು ಬಂದಲ್ಲಿ ಅಂತಹವರನ್ನು ನೇರವಾಗಿ ಮುರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ದಾಖಲಿಸಿ ಶಿಕ್ಷಣ ನೀಡಲು ಅಧಿಕಾರಿಗಳಿಗೆ ತಿಳಿಸಿದರು ಹಾಗೂ ಎಲ್ಲಾ ಕಾರ್ಖಾನೆ, ಧಾಭಾ, ಹೋಟೆಲ್, ಗ್ಯಾರೇಜ್, ಅಂಗಡಿ ಮುಂಗಟ್ಟುಗಳಗೆ ಭೇಟಿ ನೀಡಿ ಪರಿಶೀಲನೆ ಪಡಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧಿಕಾರಿ ಅರ್ಜುನ. ಎಸ್ ಮಾತನಾಡಿ, ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜನಜಾಗೃತಿ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಖಅಕ/ಖಿಖಕ ಅಡಿಯಲ್ಲಿ 56 ಗೋಡೆ ಬರಹಗಳು, 2 ದಿನ ಆಟೋ ಮೂಲಕ ಪ್ರಚಾರ, 2 ಜಿಲ್ಲಾ ಮಟ್ಟದ ಮತ್ತು 7 ತಾಲೂಕು ಮಟ್ಟದ ಕಾನೂನು ಅರಿವು ಕಾರ್ಯಕ್ರಮ, ಜಿಲ್ಲಾ ಮಟ್ಟದ 1 ಹಾಗೂ ತಾಲೂಕು ಮಟ್ಟದ 19 ಟಾಸ್ಕ್ ಫೋರ್ಸ್ ಸಮಿತಿ ಸಭೆ, 1489 ಕರಪತ್ರಗಳ ಹಂಚುವಿಕೆ, 189 ಬಿತ್ತಿ ಪತ್ರಗಳ ಅಂಟಿಸುವಿಕೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಾಯೋಗಿಕತ್ವದ ಅಡಿಯಲ್ಲಿ ಬಾಲಕಾರ್ಮಿಕ ಮಕ್ಕಳಿಗೆ (ಪಾಲಕಾರಿಲ್ಲದ ಅಥವಾ ಏಕಪೋಷಕ ಮಕ್ಕಳಿಗೆ) 2024-25 ನೇ ಸಾಲಿನಲ್ಲಿ 5 ಮಕ್ಕಳಿಗೆ ಪ್ರತಿ ಮಗುವಿಗೆ 4000 ರೂ. ರಂತೆ ಶಿಷ್ಯ ವೇತನ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ ಲಕ್ಷ್ಮಣ ಕುಳಲಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಗುರುರಾಜ, ಜಿಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಾರದಾ ಎನ್. ಕಲ್ಮೇಲ್ಕರ್, ಬೀದರ ತಾಲೂಕು ಕಾರ್ಮಿಕ ನಿರೀಕ್ಷಕ ಅಧಿಕಾರಿ ಸುವರ್ಣ ಕೆ. ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಪರಿಸರ ನಾಶದಿಂದ ಜಾಗತಿಕ ತಾಪಮಾನ ಹೆಚ್ಚಳ: ಮಲ್ಲಿನಾಥ್ ನಾಗನಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.5: ಮನುಷ್ಯ ಭೌತಿಕ ಸುಖದತ್ತ ಹೋರಳುತ್ತಿದಂತೆ, ಪರಿಸರದ ಮೇಲಿನ ಕಾಳಜಿ ಕಡಿಮೆಯಾಗುತ್ತಿದೆ. ಅರಣ್ಯ ನಾಶ, ಹಸಿರು ಪ್ರದೇಶ ಕುಸಿತ, ಮಾಲಿನ್ಯ, ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ಅತಿವೃಷ್ಟಿ, ಅನಾವೃಷ್ಟಿ, ಜಾಗತಿಕ ತಾಪಮಾನ ವೃದ್ಧಿಗೆ ಪರಿಸರ ನಾಶವೇ ಕಾರಣ ಎಂದು ಕೂಟನೂರ್ (ಡಿ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮಲ್ಲಿನಾಥ್ ಎಸ್. ನಾಗನಹಳ್ಳಿ ಕಳವಳ ವ್ಯಕ್ತಪಡಿಸಿದರು. ಗುರುವಾರ ಕೂಟನೂರ್ (ಡಿ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ವಿಶೇಷ ಕಾರ್ಯಕ್ರಮದಲ್ಲಿ ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮುಂಗಾರು ಭದ್ರವಾಗಿ ಶುರುವಾಗಿದೆ. ರೈತರು ತಮ್ಮ ಹೊಲಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ನೆಟ್ಟು ಹಸಿರು ಭೂಮಿ ನಿರ್ಮಿಸಬೇಕು ಎಂದು ಹೇಳಿದರು.

ನಾವು ಆರೋಗ್ಯವಾಗಿರಬೇಕಾದರೆ, ಪರಿಸರ ಸಂರಕ್ಷಣೆ ಅತ್ಯಗತ್ಯ. ಮಕ್ಕಳಲ್ಲಿ ಪರಿಸರದ ಬಗ್ಗೆ ಅರಿವು ಮೂಡಿಸುವ ಜತೆಗೆ, ಗಿಡಗಳನ್ನು ಬೆಳೆಸುವ ಪ್ರಾಮುಖ್ಯತೆ ಸಾರಬೇಕು. ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಯಿಂದ ಶೀಘ್ರದಲ್ಲೇ ಉಚಿತ ಸಸಿಗಳ ವಿತರಣೆ ರೈತರಿಗೆ ಕಲ್ಪಿಸಲಾಗುತ್ತದೆ ಎಂದು ಹೇಳಿದರು.

ಈ ಸಂಧರ್ಭದಲ್ಲಿ ನಿರ್ದೇಶಕ ಶಾಮ ನಾಟಿಕಾರ್, ಶಾಮರಾವ್ ಪಾಟೀಲ್, ಶಾಮರಾವ್ ಪಾಟೀಲ್, ಭೀಮಾಶಂಕರ್ ನಾಗನಹಳ್ಳಿ ನಾಯಕ, ದಸ್ತಾಯ್ಯ ಗುತ್ತೇದಾರ, ಸಂಗ್ಗಣ್ಣಗೌಡ ಪಾಟೀಲ್ ಸೀತನೂರ್, ಜಯಾನಂದ್ ಮಾಹುರ್, ರೈತರಾದ ಗುಂಡೆರಾವ್ ಬಿರಾದಾರ್, ನಾಗರಾಜ್ ಪಾಟೀಲ್ ಅನ್ವರ್ ಪಟೇಲ್ ಸೀತನೂರ್ ಮತ್ತು ಕಾರ್ಯದರ್ಶಿ ಭೀಮಾಶಂಕರ್ ಕೂಟನೂರ್ ಇದ್ದರು.

## ಮಕ್ಕಳನ್ನು ಸರ್ಕಾರಿ ಶಾಲೆಯಲ್ಲಿ ಓದಿಸಿ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಜೂ.5:ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಉತ್ತಮ ಕಟ್ಟಡ, ಶಿಕ್ಷಕರು ಸೇರಿದಂತೆ ಎಲ್ಲ ರೀತಿಯ ಮೂಲಸೌಕರ್ಯಗಳನ್ನು ಕಲ್ಪಿಸಿ, ಕಲಿಕೆಗೆ ಪೂರಕವಾದ ವಾತಾವರಣ ನಿರ್ಮಿಸಲಾಗುತ್ತಿದೆ. ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಲ್ಲಿ ದಾಖಲಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಸಾರ್ವಜನಿಕರಲ್ಲಿ ಕೋರಿದರು.

ಔರಾದ(ಬಿ) ತಾಲ್ಲೂಕಿನ ಬೋರಾಳ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡವನ್ನು ಜೂನ್ 5ರಂದು ಉದ್ಘಾಟಿಸಿ ಅವರು ಮಾತನಾಡಿದರು. ಎಲ್ಲ ಅಭಿವೃದ್ಧಿಗಳಿಗೆ ಶಿಕ್ಷಣವೇ ಆಧಾರಸ್ಥಂಬವೆಂದು ನಂಬಿರುವ ನಾನು ಶಾಸಕನಾದ ನಂತರ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗಾಗಿ ಸಾಕಷ್ಟು ಕೆಲಸ ಮಾಡಿದ್ದೇನೆ. ಪ್ರತಿ ಹಳ್ಳಿಯಲ್ಲಿ ಶಾಲೆ ನಿರ್ಮಿಸಿದ್ದು, ಅಗತ್ಯ ಸೌಕರ್ಯಗಳನ್ನು ಒದಗಿಸುತ್ತಿದ್ದೇನೆ ಎಂದು ಹೇಳಿದರು.

ಎಲ್ಲ ಕಡೆಗಳಲ್ಲಿ ಖಾಸಗಿ ಶಾಲೆಗಳ ಹಾವಳಿ ಹೆಚ್ಚಾಗಿದೆ. ಶಿಕ್ಷಣದ ಹೆಸರಿನಲ್ಲಿ ಬಡ ಜನರ ಸುಲಿಗೆ



ನಡೆಯುತ್ತಿದೆ. ಹಣ ಪಾವತಿಸಲು ನಾನಾ ರೀತಿಯ ಸಂಕಷ್ಟಗಳನ್ನು ಎದುರಿಸುತ್ತಿರುವುದು ನಾನು ಕಣ್ಣಾರೆ ನೋಡಿದ್ದೇನೆ. ಹಾಗಾಗಿ ಖಾಸಗಿ ಶಾಲೆಯವರ ಬಣ್ಣದ ಮಾತುಗಳಿಗೆ ಮರುಳಾಗಿ ಹಣ ಕಳೆದುಕೊಳ್ಳಬೇಡಿ. ಸಾಲ-ಸೂಲ ಮಾಡಿ ಜೀವನವನ್ನು ನರಕ ಮಾಡಿಕೊಳ್ಳಬೇಡಿ. ಸರ್ಕಾರಿ ಶಾಲೆಗಳಲ್ಲಿ ಉತ್ತಮ ವಾತಾವರಣ ನಿರ್ಮಾಣವಾಗಿದೆ. ಏನಾದೂ ಕೊರತೆಗಳಿದ್ದಲ್ಲಿ ನನ್ನ ಗಮನಕ್ಕೆ ತಂದು ಸರಿಪಡಿಸಿಕೊಳ್ಳಿ ಆದರೆ ಎಲ್ಲರೂ ತಮ್ಮ ಮಕ್ಕಳಿಗೆ ಸರ್ಕಾರಿ ಶಾಲೆಯಲ್ಲಿ ದಾಖಲು ಮಾಡಿ ಎಂದು ಶಾಸಕರು ವಿನಂತಿಸಿದರು.

ಬೋರಾಳ ಗ್ರಾಮದಲ್ಲಿ ಹೊಸ ಸರ್ಕಾರಿ ಶಾಲೆ ನಿರ್ಮಿಸಬೇಕೆಂಬ ಬೇಡಿಕೆ ಬಂದ ಕೂಡಲೇ ತಕ್ಷಣ ಅನುದಾನ ಮಂಜೂರು ಮಾಡಿಸಿ ಕೆಲಸ ಆರಂಭಿಸಿದ್ದೇನೆ. ಈಗ ಉತ್ತಮ ಶಾಲೆ ನಿರ್ಮಾಣಗೊಂಡಿದೆ. ಹೊಸ ಶಾಲೆ ನಿರ್ಮಿಸುವಾಗ ಅಂದಾಜು ಪಟ್ಟಿಯಲ್ಲಿ ಕಡ್ಡಾಯವಾಗಿ ಶೌಚಾಲಯ ಸೇರಿಸುವಂತೆ ಹೇಳಿದರೂ ಅಧಿಕಾರಿಗಳು ನಿರ್ಲಕ್ಷ ?? ವಹಿಸಿದ್ದಾರೆ. ಗ್ರಾಮ ಪಂಚಾಯಿತಿಯಿಂದ ಶೌಚಾಲಯ, ಕುಡಿಯುವ ನೀರು, ಆಟದ ಮೈದಾನ ಹಾಗೂ ಸಸಿ ನೆಡುವ ಕಾರ್ಯಕ್ರಮ ತುರ್ತಾಗಿ ಆಗಬೇಕೆಂದು ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಾಕಷ್ಟು ಸರ್ಕಾರಿ ಶಾಲೆಗಳನ್ನು ರೆಜಿಸ್ಟ್ರೇಷನ್ ಆಗದ ಕಾರಣ ಜಮೀನು ಒತ್ತುವರಿಯಾಗುತ್ತಿದೆ. ಹಿಂದೆ ದಾನವಾಗಿ ನೀಡಿದ ಜಮೀನುಗಳನ್ನು ವಾರಸುದಾರರು ಪುನಃ ವಾಪಸ್ಸು ಪಡೆಯುತ್ತಿರುವ ಘಟನೆಗಳು ನಡೆಯುತ್ತಿವೆ. ಹಾಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ತಹಸೀಲ್ದಾರರು ಸಮನ್ವಯತೆಯಿಂದ ಎಲ್ಲ ಸರ್ಕಾರಿ ಶಾಲೆಗಳನ್ನು ರೆಜಿಸ್ಟ್ರೇಷನ್ ಮಾಡಲು ಕ್ರಮ ವಹಿಸಬೇಕು ಎಂದರು.

ಶಾಲೆಯ ಅಭಿವೃದ್ಧಿಗೆ ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಶಿಕ್ಷಕರು ಮಾಡಿರುವ ಕೆಲಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಿರುವ ಶಾಸಕರು, ಗ್ರಾಮದ ಹಿತದೃಷ್ಟಿಯಿಂದ ಎಲ್ಲ ವರ್ಗದ ಜನರನ್ನು ಒಳಗೊಂಡು ಒಂದು ಸಮೀತಿಯನ್ನು ರಚಿಸಬೇಕು. ಬ್ಯಾಂಕ್ ಖಾತೆಯನ್ನು ತೆರೆದು ಗ್ರಾಮಸ್ಥರಿಂದ ಹಣ ಸಂಗ್ರಹಿಸಿ ಸಂಕಷ್ಟದಲ್ಲಿದ್ದವರ ನೆರವಿಗೆ ಬಳಸಿಕೊಳ್ಳಬೇಕು. ಇದಕ್ಕೆ ನನ್ನ ಸಹಕಾರವೂ ಇರುತ್ತದೆ. ಈ ದಿಶೆಯಲ್ಲಿ ಗ್ರಾಮಸ್ಥರು ಮುಂದಾಗಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ ರಂಗೇಶ, ಅರಣ್ಯ ಅಧಿಕಾರಿಗಳಾದ ಗಜಾನಂದ, ಮುದ್ದಸಿರ್ ಅಹ್ಮದ್, ಮುಖಂಡರಾದ ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಶಿವಶಂಕರ ಮಣಿಗೆಂಪೂರ, ನಿರ್ಮಿತಿ ಕೇಂದ್ರದ ಮಹ್ಮದ್ ನಜೀರ್, ಮುಖ್ಯಗುರು ರಾಜೇಂದ್ರ, ಸರ್ಕಾರಿ ನೌಕರರ ಸಂಘದ ತಾಲ್ಲೂಕಾಧ್ಯಕ್ಷ ಪಂಢರಿ ಆಡೆ, ತಾಲ್ಲೂಕು ಕಸಾಪ ಅಧ್ಯಕ್ಷ ಬಾಲಾಜಿ ಅಮರವಾಡಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ವಿಜಯಲಕ್ಷ್ಮಿ ??ೀ ಪಾಟೀಲ, ಸಹದೇವ ಮಚಕೂರೆ, ನಿವರ್ತಿ ಪಾಟೀಲ, ಬಜರಂಗ ಪಾಂಡ್ರೆ, ಗಣಪತರಾವ ಮಚಕೂರೆ, ಪ್ರದೀಪ ಗುಬನೂರೆ, ದೇವಿದಾಸ ಪಾಂಡ್ರೆ, ಜಗನಾಥ ಮಚಕೂರೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಸಿ ಶುಂಠಿ ಖರೀದಿ ಅವಧಿ ವಿಸ್ತರಣೆ:ಸಂಸದ ಸಾಗರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.5: ಹಸಿ ಶುಂಠಿ ಖರೀದಿ ಪ್ರಕ್ರಿಯೆಯನ್ನು ಒಂದು ತಿಂಗಳು ಕಾಲ ವಿಸ್ತರಿಸಲಾಗಿದ್ದು ಶುಂಠಿ ಬೆಳೆಗಾರರು ಸದುಪಯೋಗ ಪಡೆದು ಕೊಳ್ಳಬೇಕು ಎಂದು ಸಂಸದ ಸಾಗರ ಖಂಡ್ರೆ ಮನವಿ ಮಾಡಿದ್ದಾರೆ.

ರಾಜ್ಯದಲ್ಲಿ ರೈತರು ಹಸಿ ಶುಂಠಿಯನ್ನು ವ್ಯಾಪಕವಾಗಿ ಬೆಳೆದಿದ್ದು, ಇತ್ತೀಚೆಗೆ ಮಾರುಕಟ್ಟೆಯಲ್ಲಿ ಬೆಲೆ ಕುಸಿತದಿಂದಾಗಿ ಸಂಕಷ್ಟ ಅನುಭವಿಸುತ್ತಿದ್ದಾರೆ. ಈ ಹಿನ್ನಲೆಯಲ್ಲಿ, ಮಾರುಕಟ್ಟೆ ಮಧ್ಯಪ್ರವೇಶ ಯೋಜನೆ ಅಡಿಯಲ್ಲಿ ನಡೆಯುತ್ತಿರುವ ಹಸಿ ಶುಂಠಿ ಖರೀದಿಯ ಅವಧಿಯನ್ನು ವಿಸ್ತರಿಸುವಂತೆ ಕೇಂದ್ರ ಕೃಷಿ ಇಲಾಖೆ ಕಾರ್ಯದರ್ಶಿಗಳಿಗೆ



ಮನವಿ ಸಲ್ಲಿಸಲಾಗಿತ್ತು.

ಮನವಿಗೆ ಸ್ಪಂದಿಸಿದ ಕೇಂದ್ರ ಸರಕಾರ ಸ್ಪಂದಿಸಿದ್ದು ಹಸಿ ಶುಂಠಿ ಖರೀದಿ ಪ್ರಕ್ರಿಯೆಯನ್ನು ಒಂದು ತಿಂಗಳ ಕಾಲ ವಿಸ್ತರಿಸುವಂತೆ ಆದೇಶ ಹೊರಡಿಸಿದ್ದು, ಈ ಮೂಲಕ ರೈತರಿಗ. ಸಹಾಯವಾಗಲಿದೆ.

> ರೈತರ ಹಿತಕ್ಕಾಗಿ ನಮ್ಮ ಹೋರಾಟ ಮುಂದುವರಿಯುತ್ತದೆ. ಹಸಿ ಶುಂಠಿ ಬೆಳೆದ ರೈತರಿಗೆ ನ್ಯಾಯ ಸಿಗುವಂತೆ ನಾವು ಕೇಂದ್ರ ಹಾಗೂ ರಾಜ್ಯ ಮಟ್ಟದಲ್ಲಿ ಎಲ್ಲಾ ಕ್ರಮಗಳನ್ನು ಕೈಗೊಳ್ಳುತ್ತಿದ್ದೇವೆ
>
> **-ಸಾಗರ ಖಂಡ್ರೆ ಸಂಸದರು ಬೀದರ್**

ಈ ನಿರ್ಧಾರದಿಂದ ರಾಜ್ಯದ ಶುಂಠಿ ಬೆಳೆದ ರೈತರಿಗೆ ಭದ್ರತಾ ಬೆಲೆ ದೊರಕಲು ಸಹಾಯವಾಗಲಿದೆ ಹಾಗೂ ಬೆಳೆ ನಾಶವಾಗುವ ಭೀತಿ ಇಲ್ಲದಂತೆ ಖರೀದಿ ಕೇಂದ್ರಗಳಲ್ಲಿ ಶ್ರೇಣಿಯುತವಾದ ವ್ಯವಸ್ಥೆಯೊಂದಿಗೆ ಖರೀದಿ ಮುಂದುವರಿಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಕರ್ನಾಟಕ ಅರಣ್ಯ ಇಲಾಖೆ**

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಸಾಮಾಜಿಕ ಅರಣ್ಯ ಉಪ ವಿಭಾಗ, ಕಲಬುರಗಿ.** ಮಿಂಚಂಚೆ ವಿಳಾಸ: sfgulbarga@gmail.com

ಸಂ:ಸಅಸಂ/ಕಸಾಅ/ವಾಹನ/ಇ-ಟೆಂಡರ್/ಸಿಆರ್- /2025-26 ದಿನಾಂಕ: 04/06/2025

**ಅಲ್ಪಾವಧಿ ಸಂಕ್ಷಿಪ್ತ ದ್ವಿಲಕೋಟೆ ಟೆಂಡರ್ ಪ್ರಕಟಣೆ (ಇ-ಟೆಂಡರ್ ಮೂಲಕ) (ಕರೆ-3)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 2000ರ ಅನ್ವಯ ಈ ಮೂಲಕ ಸಾರ್ವಜನಿಕರ ಅವಗಾಹನೆಗೆ ತಿಳಿಯಪಡಿಸುವುದೇನೆಂದರೆ 2025-26 ನೇ ಸಾಲಿಗಾಗಿ ವಲಯ ಅರಣ್ಯಾಧಿಕಾರಿಗಳು ಅರಣ್ಯೀಕರಣ ಕಾಮಗಾರಿಗಳ ಪರಿವೀಕ್ಷಣೆಗೆ ಹೊರಗುತ್ತಿಗೆ ಮೇಲೆ 04 ವಾಹನ ಪಡೆಯಲು ಇ-ಟೆಂಡರ್ ಆಹ್ವಾನಿಸಲಾಗಿದ್ದು, **ರೂ. 15.00 ಲಕ್ಷಗಳಲ್ಲಿ** ಇ-ಟೆಂಡರ್ ವೆಬ್ ಸೈಟ್ ಸಂಖ್ಯೆ : http://kppp.karnataka.gov.in ರ ಮೂಲಕ ಟೆಂಡರ್ ದಾಖಲಿಸಲು ದಿನಾಂಕ: **04/06/2025 ರಿಂದ ದಿನಾಂಕ: 11/06/2025 ಅಪರಹ್ನ 04:00 ಗಂಟೆಯ ವರೆಗೆ** ಆಹ್ವಾನಿಸಲಾಗಿದೆ. ತಾಂತ್ರಿಕ ಬಿಡ್‌ಗಳನ್ನು ದಿ: **12/06/2025 ರಂದು ಅಪರಹ್ನ 04:00ರ** ನಂತರ ತೆರೆಯಲಾಗುವುದು. ತಾಂತ್ರಿಕ ಬಿಡ್‌ನಲ್ಲಿ ಯಶಸ್ವಿಯಾದ ಟೆಂಡರ್‌ಗಳ ಆರ್ಥಿಕ ಬಿಡ್‌ಗಳನ್ನು **ದಿ:13/06/2025 ರಂದು ಅಪರಹ್ನ 04:00ರ** ನಂತರ ತೆರೆಯಲಾಗುವುದು.

ಹೆಚ್ಚಿನ ವಿವರಗಳಿಗಾಗಿ ಕಛೇರಿ ಕೆಲಸದ ದಿನಗಳಂದು ಕಛೇರಿ ಸಮಯದಲ್ಲಿ ಸಂಪರ್ಕಿಸಿ ಪಡೆಯಬಹುದು ಅಥವಾ ದೂರವಾಣಿ ಸಂಖ್ಯೆ: 08472-278633ಕ್ಕೆ ಕರೆ ಮಾಡಿ ಪಡೆಯಬಹುದು.

**ಸಹಿ/- ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಸಾಮಾಜಿಕ ಅರಣ್ಯ ಉಪ ವಿಭಾಗ, ಕಲಬುರಗಿ**

ವಾ.ಸಾ.ಸಂ.ಇ/ಕಲಬುರಗಿ/187/ಕೆ.ಎಸ್.ಎಂ.ಸಿ.&ಎ/2025-26


## ವಿದ್ಯಾರ್ಥಿಗಳಲ್ಲಿ ಸಾಧಿಸುವ ಛಲ ಇರಲಿ:ಡಾ.ಶರಣಪ್ಪ ಎಸ್.ಡಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.5: ವಿದ್ಯಾರ್ಥಿಗಳು ಸಾಧಿಸುವ ಛಲ, ದೂರದೃಷ್ಟಿ ಮತ್ತು ದೃಢ ಸಂಕಲ್ಪ ಅಳವಡಿಸಿಕೊಂಡರೆ ಜೀವನದಲ್ಲಿ ಅಂದು ಕೊಂಡಿದ್ದನ್ನು ಸಾಧಿಸಬಹುದು ಎಂದು ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಹೇಳಿದರು. ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಎಸ್ಸೆಸ್ಸೆಲ್ಸಿ ಅಗ್ರಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗಾಗಿ ಗುರುವಾರ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳಲ್ಲಿ ಸಮಯ ಪ್ರಜ್ಞೆ ಮತ್ತು ಗುರಿ ಸ್ಪಷ್ಟವಾಗಿರಬೇಕು. ಆಗ ಮಾತ್ರ ಬದುಕಿನಲ್ಲಿ ಯಶಸ್ಸನ್ನು ಕಾಣಲು ಸಾಧ್ಯ. ಸಮಯ ಮತ್ತು ಅವಕಾಶ ಯಾರಿಗೂ ಕಾಯುವುದಿಲ್ಲ. ಆದ್ದರಿಂದ ನೀವೇನಾಗಬೇಕು ಎಂಬುದನ್ನು ನಿಶ್ಚಯಿಸಿಕೊಳ್ಳಬೇಕು. ಇದರಿಂದ ನಿಮ್ಮ ಮುಂದಿನ ಭವಿಷ್ಯ ಸುಭದ್ರವಾಗಿರುತ್ತದೆ ಎಂದು ತಿಳಿಸಿದರು. ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಶಿಕ್ಷಣ ಎಂದರೆ ಕೇವಲ ಅಂಕ ಗಳಿಕೆಗೆ ಸೀಮತ ಆಗಬಾರದು. ಉತ್ತಮ ವ್ಯಕ್ತಿತ್ವ ರೂಪಿಸುವ ಶಿಕ್ಷಣ ಎಲ್ಲರೂ ಪಡೆಯುವಂತಾಗಬೇಕು. ಆ ದಿಸೆಯಲ್ಲಿ ನಮ್ಮ ಪ್ರಯತ್ನ ಮುಂದುವರೆದಿದೆ ಎಂದು ತಿಳಿಸಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಅವರ ಜೀವನವೇ ವಿದ್ಯಾರ್ಥಿಗಳಿಗೆ ಸ್ಪೂರ್ತಿ ಆಗಬೇಕು.

> ಯಾವುದೇ ಫಲಾಪೇಕ್ಷೆ ಇಲ್ಲದೆ ಮಕ್ಕಳ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ಕಟ್ಟಿದ ವಿದ್ಯಾಸಂಸ್ಥೆ ರಾಜ್ಯದಲ್ಲಿ ಮಾದರಿಯಾಗಿ ಗುರುತಿಸಿಕೊಂಡಿದೆ. ಸಂಸ್ಥೆಯ ಬೆಳವಣಿಗೆಯಲ್ಲಿ ಪಾಲಕರ ಪ್ರೋತ್ಸಾಹ, ಶಿಕ್ಷಕರ ಪರಿಶ್ರಮ ದೊಡ್ಡದಿದೆ.
>
> **- ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಅವರು ಬಡತನದಲ್ಲಿ ಸಾಕಷ್ಟು ನೋವು ಕಷ್ಟ ಅನುಭವಿಸಿ ಅದ್ಭುತ ಸಾಧನೆ ಮಾಡಿ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ. ಅವರು ಕಲ್ಯಾಣ ಕರ್ನಾಟಕ ಭಾಗದ ಅಮೂಲ್ಯ ರತ್ನ ಆಗಿದ್ದಾರೆ ಎಂದು ಬಣ್ಣಿಸಿದರು. ಸಂಸ್ಥೆಯ ಆಡಳಿತಾಧಿಕಾರಿ ಮೋಹನ ರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಪತ್ರಕರ್ತ

> ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ಶರೀರ, ಮನಸ್ಸು ಶುದ್ಧವಾಗಿರಿಸಿಕೊಂಡು ಸಂಸ್ಥೆಯಲ್ಲಿ ಕಲಿತ ಉತ್ತಮ ಸಂಸ್ಕಾರ, ಚಾರಿ ಜೀವನದುದ್ದಕ್ಕೂ ಮುಂದುವರೆಸಿಕೊಂಡು ಹೋಗಬೇಕು.
>
> **- ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

> ಗ್ರಾಮೀಣ ಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ವಿದ್ಯಾಕೇಂದ್ರ ತೆರೆದು ಶೈಕ್ಷಣಿಕ ಕ್ರಾಂತಿಗೈಯುತ್ತಿದ್ದಾರೆ. ಇಲ್ಲಿ ಕಲಿತ ವಿದ್ಯಾರ್ಥಿಗಳು ಪೂಜ್ಯರು ಮತ್ತು ಕಲಿತ ಸಂಸ್ಥೆ, ಶಿಕ್ಷಕರನ್ನು ಎಂದಿಗೂ ಮರೆಯಬಾರದು.
>
> **- ಡಾ.ಶರಣಪ್ಪ ಎಸ್.ಡಿ ನಗರ ಪೊಲೀಸ್ ಆಯುಕ್ತರು ಕಲಬುರಗಿ**

ದೇವಯ್ಯ ಗುತ್ತೇದಾರ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಸೂರ್ಯ ಫೌಂಡೇಶನ್ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ, ಯುವ ಉದ್ಯಮಿ ವಿವೇಕ ದೀಪಕ ವಾಲಿ, ಪುರಸಭೆ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ವಂಕೆ, ಪ್ರಾಚಾರ್ಯರಾದ ಪಿ.ರಾಜು, ರಂಗಾರೆಡ್ಡಿ, ಮುಖ್ಯಗುರು ಮಹೇಶ ಮಹಾರಾಜ ಸೇರಿದಂತೆ ಹಲವರು ಇದ್ದರು. ಪ್ರಾರ್ಥನಾ ಶೈಲೇಶ ಪಾಟೀಲ್ ಪ್ರಾರ್ಥನೆ ಗೀತೆ ನಡೆಸಿ ಕೊಟ್ಟರು. ಪ್ರಾಚಾರ್ಯ ಬಸವರಾಜ ಮೊಳಕೀರೆ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿದರು. ಪ್ರವೀಣ ಖಂಡಾಳೆ ವಂದಿಸಿದರು.

## ಶುದ್ಧವಾದ ಗಾಳಿ ಸಿಕ್ಕಾಗ ಮಾತ್ರ ನಮ್ಮ ಆರೋಗ್ಯ ಚೆನ್ನಾಗಿಯಿರುತ್ತೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.5:ಪಟ್ಟಣದ ಡಾ॥ ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಹಾಗೂ ಶ್ರೀ ಗುರಪ್ಪ ಟೊಣ್ಣೆ ಪ್ರಾಥಮಿಕ ಶಾಲೆ, ಗುರುಕಾರುಣ್ಯ ಪಬ್ಲಿಕ್ ಸ್ಕೂಲ್‌ನಲ್ಲಿ ವಿಶ್ವ ಪರಿಸರ ದಿನಾಚರಣೆ ಹಾಗೂ ಪರಮಪೂಜ್ಯ ನಾಡೋಜ ಡಾ॥ ಬಸವಲಿಂಗಪಟ್ಟದ್ದೇವರ ಅಮೃತ ಮಹೋತ್ಸವವನ್ನು ವರ್ಷಾಚರಣೆ ಪ್ರಯುಕ್ತ ಸಸಿ ನೆಡುವ ಕಾರ್ಯಕ್ರಮ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿರುವ ಅರಣ್ಯ ಅಧಿಕಾರಿಗಳಾದ ವಿಜಯಕುಮಾರ,




ಎಸ್.ಬಿರಾದರ ರವರು ಸಸಿ ನೆಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು, ನಮ್ಮಗೆ ಶುದ್ಧವಾದ ಗಾಳಿ ಸಿಕ್ಕಾಗ ಮಾತ್ರ ನಮ್ಮ ಅರೋಗ್ಯ ಚೆನ್ನಾಗಿ ಇರುತ್ತೆ. ಹಾಗಾಗಿ ಎಲ್ಲರು ಗಿಡ ಮರಗಳನ್ನು ಬೆಳಸಿ ಪೋಷಣೆ ಮಾಡಬೇಕು ಎಂದು ಹೇಳಿದರು. ಶಾಲೆಯ ಆಡಳಿತಾಧಿಕಾರಿಗಳಾದ ಚನ್ನಬಸವ ಘಾಳೆ ಮಾತನಾಡಿ, ಪರಿಸರ ಉಳಿಸುವ ಬಗ್ಗೆ ಜಾಗೃತಿ ಮೂಡಿಸುವುದು ಮಾಲಿನ್ಯ ವಿರುದ್ಧ ಹೋರಾಡುವುದು, ಭವಿಷ್ಯದ ಹಸಿರ ಪ್ರಕೃತಿಯನ್ನು ಸುಸ್ಥಿರಗೊಳಿಸುವ ಉದ್ದೇಶದಿಂದ ಪ್ರತಿವರ್ಷ ಜೂನ 5ಕ್ಕೆ ವಿಶ್ವ ಪರಿಸರ ದಿನ ಆಚರಿಸಲಾಗುತ್ತದೆ ಎಂದು ಮಕ್ಕಳನ್ನು ಉದ್ದೇಶಿಸಿ ಮಾತನಾಡಿದರು. ಕ್ರಾರ್ಯಕ್ರಮದಲ್ಲಿ ಕಮಲನಗರದ ಶಾಲೆಯ ಶಿಕ್ಷಕರಾದ ರಾಜೇಶ್ವರಿ ಬಿರಾದಾರ, ಪಲ್ಲವಿ ನಾಯ್ಕ, ನಿಜಲಿಂಗಯ್ಯ ಸ್ವಾಮಿ, ರಾಗಿಣಿ ಮಹೇಶ ದೇಶಮುಖ, ವಿಜಯಲಕ್ಷ್ಮಿ ಶಿವಕುಮಾರ ಏಕಲಾರೆ ಮತ್ತು ಸಿಬ್ಬಂಧಿ ವರ್ಗ ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.